ಸಂಪುಟ: 22, ಸಂಚಿಕೆ: 49, ಪುಟಗಳು: 8, ಶುಕ್ರವಾರ, 29 ನವೆಂಬರ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು
# ಸಂಜೆ ಮುಗಿಲು
ಕನ್ನಡವೇ ಸತ್ಯ, ಕನ್ನಡವೇ ನಿತ್ಯ
ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ವೇಣು ಸಾರಥ್ಯದಲ್ಲಿ...
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines



**ಸುಭಾಷಿತ**

ಜನರು ನಿಮ್ಮ ಬೆನ್ನ ಹಿಂದೆ ಏನು ಮಾತನಾಡುತ್ತಾರೆಂಬ ಬಗ್ಗೆ ಯೋಚಿಸಬೇಡಿ. ನೀವು ನಂಬಿದ ಭಗವಂತ ಅವರ ಮುಂದೆಯೇ ನಿಮ್ಮನ್ನು ಬೆಳೆಸಿ ತೋರಿಸುತ್ತಾನೆ.

**ಪಂಚಾಂಗ**

(ಶುಕ್ರವಾರ 29, ನವೆಂಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ
- ದಕ್ಷಿಣಾಯಣ,ಶರದೃತು,
- ಕಾರ್ತಿಕ ಮಾಸ, ಕೃಷ್ಣಪಕ್ಷ
- ತ್ರಯೋದಶಿ: ಸ್ವಾತಿ ನಕ್ಷತ್ರ
- ರಾಹುಕಾಲ 10:45 ರಿಂದ 12:11
- ಗುಳಿಕಕಾಲ 07:53 ರಿಂದ 09:19
- ಯಮಗಂಡಕಾಲ 03:03 ರಿಂದ 04:29

## ಸಂಕ್ಷಿಪ್ತ ಸುದ್ದಿ

### ಬಸ್ ಸುತ್ತ ಜಾಹೀರಾತು ಹಾಕಲು ಟೆಂಡರ್



**ಬೆಂಗಳೂರು:** ಆರ್ಥಿಕ ಸಂಕಷ್ಟದಲ್ಲಿರುವ ಬಿಎಂಟಿಸಿ, ಆದಾಯ ಹೆಚ್ಚಿಸಲು ಹೊಸ ಜಾಹೀರಾತು ನೀತಿ ರೂಪಿಸಿದೆ. ಈ ಮೂಲಕ ಆದಾಯ ಸಂಗ್ರಹಕ್ಕೆ ಹೊರಟಿದೆ. ಇದೀಗ ಬಸ್ ಸುತ್ತ ಇಡೀ ಜಾಹೀರಾತು ಹಾಕಲು ಅವಕಾಶ ಕೊಡುವ ಮೂಲಕ ಆದಾಯ ಹೆಚ್ಚಿಸಲು ಯೋಜನೆ ರೂಪಿಸಿದೆ.

**» ಆದಾಯ ಹೆಚ್ಚಿಸಲು ಬಿಎಂಟಿಸಿ ಹೊಸ ಜಾಹೀರಾತು ನೀತಿ**

3000 ಬಸ್‌ಗಳಲ್ಲಿ ಸಂಪೂರ್ಣ ಸುತ್ತುವರಿದಂತೆ ಜಾಹೀರಾತು ಪ್ರದರ್ಶನಕ್ಕೆ ತಯಾರಿ ಮಾಡಿದೆ.

**ಬಿಎಂಟಿಸಿ ಹೊಸ ಜಾಹೀರಾತು ಯೋಜನೆ ಹೇಗಿರಲಿದೆ?:** ಇಷ್ಟು ದಿನ ಬಸ್‌ಗಳ ಹಿಂಭಾಗದಲ್ಲಿ ಜಾಹೀರಾತು ಪ್ರದರ್ಶನಕ್ಕೆ ಅವಕಾಶ ಇತ್ತು ಇದೀಗ. ಬಸ್‌ಗಳ ಮುಂದಿನ ಮತ್ತು ಹಿಂಭಾಗದ ಗಾಜುಗಳನ್ನು ಹೊರತುಪಡಿಸಿ ಉಳಿದ ಎಲ್ಲ ಭಾಗದಲ್ಲೂ ಜಾಹೀರಾತು ಅಳವಡಿಸಿ ಪ್ರದರ್ಶನಕ್ಕೆ ತಯಾರಿ ಮಾಡಿಕೊಳ್ಳಲಾಗಿದೆ. ಪುಟ 2

### ಸರ್ಕಾರಿ ಜಿಲ್ಲಾಸ್ಪತ್ರೆಯಲ್ಲಿ ಉಚಿತ ಸಿ.ಟಿ ಸ್ಕ್ಯಾನ್ ಸೌಲಭ್ಯವಿದ್ರೂ ಪರದಾಟ



**ಚಾಮರಾಜನಗರ:** ನಗರದ ಸರ್ಕಾರಿ ಜಿಲ್ಲಾಸ್ಪತ್ರೆಯಲ್ಲಿ ಉಚಿತ ಸಿ.ಟಿ ಸ್ಕ್ಯಾನ್ ಸೌಲಭ್ಯವಿದ್ದರೂ ರೋಗಿಗಳಿಗೆ ಮಾತ್ರ ಸೌಲಭ್ಯ ಸಿಗುತ್ತಿಲ್ಲ ಎಂಬ ಆರೋಪ ಕೇಳಿಬಂದಿದೆ. ಸಿಮ್ಸ್‌ನಲ್ಲಿ ಹಣ ಕೊಟ್ಟು ಸಿಟಿ ಸ್ಕ್ಯಾನ್ ಮಾಡಿಸಬೇಕಾದ ಪರಿಸ್ಥಿತಿ ರೋಗಿಗಳಿಗಿದೆ ಎಂದು ದೂರಲಾಗಿದೆ. ಸ್ಕ್ಯಾನಿಂಗ್ ಮಾಡಿಸಲು ಸಿಮ್ಸ್ ಆಸ್ಪತ್ರೆಗೆ ರೆಫರ್ ಮಾಡಲು ವೈದ್ಯರಿಗೆ ಮೌಖಿಕ ಸೂಚನೆ ಕೊಟ್ಟಿದ್ದಾರೆಂಬ ಆರೋಪ ಡೀನ್ ವಿರುದ್ಧ ಕೇಳಿಬಂದಿದೆ. ಸರ್ಕಾರ ಕಳೆದ 7 ವರ್ಷದ ಹಿಂದೆಯೇ ರೋಗಿಗಳಿಗೆ ಉಚಿತ ಸಿ.ಟಿ ಸ್ಕ್ಯಾನಿಂಗ್ ವ್ಯವಸ್ಥೆ ಕಲ್ಪಿಸುವ ಸಲುವಾಗಿ ಪಿಪಿಪಿ ಯೋಜನೆಯಡಿ ಜಿಲ್ಲಾ ಆಸ್ಪತ್ರೆಯಲ್ಲಿ ಪುಟ 2

# ಜೆಡಿಎಸ್‌ನಲ್ಲಿ ಮುಂದುವರಿದ ಆಂತರಿಕ ಕಲಹ, ಜೊತೆಗೆ ಆಪರೇಷನ್ ಆತಂಕ

**ಬೆಂಗಳೂರು:**ಉಪಚುನಾವಣೆ ಬಳಿಕ ರಾಜ್ಯ ರಾಜಕೀಯದಲ್ಲಿ ಒಂದಷ್ಟು ಬದಲಾವಣೆಯ ಗಾಳಿ ಬೀಸಲು ಆರಂಭಿಸಿದೆ. ಅದರಲ್ಲೂ ಚನ್ನಪಟ್ಟಣದಲ್ಲಿ ನಿಖಿಲ್ ಸೋಲಿನ ಬಳಿಕ ಜೆಡಿಎಸ್ ಪಕ್ಷದಲ್ಲಿ ಆಂತರಿಕ ಕಲಹ ಜೋರಾಗಿದೆ. ಶಾಸಕಾಂಗ ಪಕ್ಷದ ನಾಯಕನ ಸ್ಥಾನ ಕೈತಪ್ಪಿದ ಹಿನ್ನೆಲೆ ಕಳೆದ ಮೂರು ನಾಲ್ಕು ತಿಂಗಳಿಂದ ಪಕ್ಷದಿಂದ ಅಂತರ ಕಾಯ್ದುಕೊಂಡಿದ್ದ ಜಿಟಿ ದೇವೇಗೌಡರು ಮತ್ತೆ ದಳಪತಿಗಳ ವಿರುದ್ಧ ಗುಡುಗಲು ಆರಂಭಿಸಿದ್ದಾರೆ. ಕಳೆದ ನಾಲ್ಕು ದಿನಗಳ ಹಿಂದೆ ಸುದ್ದಿಗೋಷ್ಠಿ ನಡೆಸಿ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಮತ್ತು ಸಾರಾ ಮಹೇಶ್ ವಿರುದ್ಧ ವಾಗ್ದಾಳಿ ನಡೆಸಿದ್ದರು. ಅಧಿಕಾರ ಇದ್ದಾಗೆಲ್ಲ ಕುಮಾರಸ್ವಾಮಿ ನನ್ನನ್ನು ತುಳಿಯುವ ಕೆಲಸ ಮಾಡಿದ್ದಾರೆ. ಶಾಸಕಾಂಗ ಸ್ಥಾನ ಕೈತಪ್ಪಲು ಸಾರಾ ಮಹೇಶ್ ಕಾರಣ ಎಂದು ಗಂಭೀರ ಆರೋಪ ಮಾಡಿದ್ದರು.



ಇದರ ಬೆನ್ನಲ್ಲೇ, ಗುರುವಾರ ಮಾಜಿ ಸಚಿವ ಹೆಚ್.ಡಿ ರೇವಣ್ಣ ಕೊಟ್ಟ ಹೇಳಿಕೆ ಮತ್ತೆ ಜಿಟಿ ದೇವೇಗೌಡರನ್ನು ಕೆರಳುವಂತೆ ಮಾಡಿದೆ. ಬೆಂಗಳೂರಿನಲ್ಲಿ ಮಾತನಾಡಿದ್ದ ರೇವಣ್ಣ, ಕುಮಾರಸ್ವಾಮಿ ಇಲ್ಲದೆ ಇದ್ದರೆ ಜಿಟಿ ದೇವೇಗೌಡರು ಜೈಲಿಗೆ ಹೋಗುತ್ತಿದ್ದರು. ಸಿದ್ದರಾಮಯ್ಯ ಜಿಟಿ ದೇವೇಗೌಡರನ್ನು ಜೈಲಿಗೆ ಕಳುಹಿಸಲು ಮುಂದಾಗಿದ್ದರು ಎಂದು ಹೇಳಿಕೆ ನೀಡಿದ್ದರು.

ಆದರೆ, ರೇವಣ್ಣ ಹೇಳಿಕೆಯನ್ನು ಅಲ್ಲಗಳದಿರುವ ಜಿಟಿ ದೇವೇಗೌಡರು, ನನ್ನ ಸಾರ್ವಜನಿಕ ಬದುಕಿನಲ್ಲಿ ಯಾವುದೇ ಪ್ರಕರಣಗಳು ಇಲ್ಲ. ನನ್ನ ಮೇಲಾಗಲಿ ನನ್ನ ಮಗನ ಮೇಲಾಗಲಿ ಯಾವುದೇ ಕೇಸ್‌ಗಳು ದಾಖಲಾಗಿಲ್ಲ. ರೇವಣ್ಣ ಯಾವ ಅರ್ಥದಲ್ಲಿ ಹೇಳಿದ್ದಾರೋ ಗೊತ್ತಿಲ್ಲ, ಅವರನ್ನೇ ನಾನು ಕೇಳುತ್ತೇನೆ ಎಂದು ಕಿಡಿ ಕಾರಿದ್ದಾರೆ.

ಅಷ್ಟೇ ಅಲ್ಲದೆ, ಸಿದ್ದರಾಮಯ್ಯ ರಾಜಕೀಯವಾಗಿ ನನ್ನನ್ನು ಸೋಲಿಸಲು ಯತ್ನಿಸಿರಬಹುದು. ಆದರೆ ವೈಯಕ್ತಿಕವಾಗಿ ಎಂದೂ ದ್ವೇಷಿಸಿಲ್ಲ ಎಂದು ಸಿಎಂ ಪರ ಬ್ಯಾಟ್ ಬೀಸಿದ್ದಾರೆ.

**ಆಪರೇಷನ್ ಹಸ್ತದ ಆತಂಕ:** ದಳಪತಿಗಳಿಗೆ ಆಂತರಿಕ ಕಲಹದ ಟೆನ್ಶನ್ ಒಂದು ಕಡೆ ಆದರೆ ಸಿಪಿ ಯೋಗೇಶ್ವರ್‌ರಿಂದ ಆಪರೇಷನ್ ಹಸ್ತದ ಆತಂಕವೂ ಶುರುವಾಗಿದೆ. ಜೆಡಿಎಸ್ ಶಾಸಕರನ್ನು ಕಾಂಗ್ರೆಸ್‌ಗೆ ಸೆಳೆಯುವ ಬಗ್ಗೆ ಈಗಾಗಲೇ ಯೋಗೇಶ್ವರ್ ಬಹಿರಂಗವಾಗಿ ಹೇಳಿಕೆ ನೀಡಿದ್ದಾರೆ. ಅದಕ್ಕೆ ಪೂರಕವಾಗುವಂತೆ ಸಿಪಿ ಯೋಗೇಶ್ವರ್ ಕಡೆಯಿಂದ ಜೆಡಿಎಸ್ ಶಾಸಕರನ್ನು ಸಂಪರ್ಕಿಸಲಾಗಿದೆ ಎನ್ನಲಾಗುತ್ತಿದೆ. ಜೆಡಿಎಸ್ ಶಾಸಕನ ಸಂಪರ್ಕ ಮಾಡಿ ಕಾಂಗ್ರೆಸ್‌ನಲ್ಲಿ ಸೂಕ್ತ ಸ್ಥಾನ ಮಾನ ಮತ್ತು 2028ರ ಟಿಕೆಟ್ ನೀಡುವ ಭರವಸೆಯನ್ನು ನೀಡಿದ್ದಾರಂತೆ!

ಈ ಎಲ್ಲ ಬೆಳವಣಿಗೆಗಳ ಬೆನ್ನಲ್ಲೇ ಜೆಡಿಎಸ್ ಶಾಸಕರನ್ನು ಹಿಡಿದಿಟ್ಟುಕೊಳ್ಳಲು ಕೇಂದ್ರ ಸಚಿವ ಕುಮಾರಸ್ವಾಮಿ ಶಾಸಕರನ್ನು ಸಂಪರ್ಕ ಮಾಡಲು ಮುಂದಾಗಿದ್ದಾರೆ. ಕಾಂಗ್ರೆಸ್ ಆಮಿಷಕ್ಕೆ ಒಳಗಾಗದಂತೆ ಶಾಸಕರಿಗೆ ಕುಮಾರಸ್ವಾಮಿ ಸೂಚನೆ ನೀಡಿದ್ದಾರೆ. ಪುಟ 2

### ಬಾರ್‌ಗೆ ಪರವಾನಗಿ ನೀಡಲು ಲಂಚ ಕೇಳಿದ ಆರೋಪ

# ಚಲುವರಾಯಸ್ವಾಮಿಗೂ ಸಂಕಷ್ಟ

**ಮಂಡ್ಯ:**ಮಂಡ್ಯದ ಚಂದೂಪುರದಲ್ಲಿ ಬಾರ್ ಆಂಡ್ ರೆಸ್ಟೋರೆಂಟ್‌ಗೆ ಪರವಾನಗಿ ನೀಡಲು ಲಂಚ ಕೇಳಿದ ಪ್ರಕರಣ ಸಂಬಂಧ ನೀಡಲಾಗಿರುವ ದೂರಿನ ಜತೆ ಸಲ್ಲಿಕೆಯಾಗಿರುವ ಆಡಿಯೋ ಮತ್ತು ವಿಡಿಯೋ ಸಾಕ್ಷ್ಯದ ಸತ್ಯಾಸತ್ಯತೆ ಅರಿಯಲು ಲೋಕಾಯುಕ್ತ ಮುಂದಾಗಿದೆ. ಎಫ್ ಐಆರ್ ದಾಖಲಿಸುವ ಮುನ್ನವೇ ಲೋಕಾಯುಕ್ತ ಪೊಲೀಸರು ತನಿಖೆ ಆರಂಭಿಸಿದ್ದಾರೆ. ಒಂದು ವೇಳೆ ಎಫ್‌ಐಆರ್ ದಾಖಲಾದರೆ ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿಗೂ ಸಂಕಷ್ಟ ಎದುರಾಗಲಿದೆ. ಯಾಕೆಂದರೆ, ದೂರುದಾರರು ಸಲ್ಲಿಸಿರುವ ಆಡಿಯೋ ಸಂಭಾಷಣೆಯಲ್ಲಿ ಸಚಿವ ಸಲುವರಾಯಸ್ವಾಮಿ ಬಗ್ಗೆಯೂ ಪ್ರಸ್ತಾಪವಾಗಿದೆ.

ದೂರುದಾರ ಸಲ್ಲಿಸಿರುವ ಅಧಿಕಾರಿ ಮತ್ತು ದೂರುದಾರನ ಮಧ್ಯೆ ನಡೆದಿದೆ ಎನ್ನಲಾದ ಸಂಭಾಷಣೆಯಲ್ಲಿ ಸಚಿವರ ಬಗ್ಗೆ ಪ್ರಸ್ತಾಪವಾಗಿದೆ. ಈ ವಿಚಾರ ಇಟ್ಟುಕೊಂಡು ಚಲುವರಾಯಸ್ವಾಮಿ ವಿರುದ್ಧ ಜೆಡಿಎಸ್ ಆಕ್ರೋಶ ವ್ಯಕ್ತಪಡಿಸಿದೆ.

**ಲಂಚದಲ್ಲಿ ಸಚಿವರಿಗೂ ಪಾಲು: ಜೆಡಿಎಸ್ ವಾಗ್ದಾಳಿ:** ಬಾರ್ ಲೈಸೆನ್ಸ್‌ನಲ್ಲಿಯೂ ಲಂಚ ವಸೂಲಿ ನಡೆಯುತ್ತಿದೆ. ಸಚಿವರ ಮುಂದಾಳತ್ವದಲ್ಲೇ ಅಧಿಕಾರಿಗಳು ರೇಟ್ ಫಿಕ್ಸ್ ಮಾಡಿದ್ದಾರೆ. ಈ ಭ್ರಷ್ಟಾಚಾರದಲ್ಲಿ ಸಚಿವರಿಗೂ ಪಾಲು ಹೋಗುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಜೆಡಿಎಸ್ ಗಂಭೀರ ಆರೋಪ ಮಾಡಿದೆ.






ಈ ಎಲ್ಲ ಬೆಳವಣಿಗೆಗಳ ಬೆನ್ನಲ್ಲೇ, ದೂರಿನ ವಾಸ್ತವತೆ ಅರಿಯಲು ಲೋಕಾಯುಕ್ತ ಪೊಲೀಸರು ಮುಂದಾಗಿದ್ದಾರೆ. ದೂರುದಾರ ಪುನೀತ್ ನೀಡಿರುವ ಸಾಕ್ಷ್ಯಗಳ ಬಗ್ಗೆ ಲೋಕಾಯುಕ್ತ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಎರಡ್ಮೂರು ದಿನಗಳಲ್ಲಿ ಪ್ರಾಥಮಿಕ ತನಿಖೆ ನಡೆಸಿ ಡಿಐಜಿಗೆ ವರದಿ ಸಲ್ಲಿಸಲಿದ್ದಾರೆ. ಒಂದು ವೇಳೆ, ಲೋಕಾಯುಕ್ತ ಡಿಐಜಿ ಆದೇಶ ನೀಡಿದರೆ ಎಫ್ ಐಆರ್ ದಾಖಲಿಸಲು ನಿರ್ಧರಿಸಲಾಗಿದೆ ಎಂದು ಮಂಡ್ಯ ಲೋಕಾಯುಕ್ತ ಎಸ್‌ಪಿ ಸುರೇಶಬಾಬು ಮಾಹಿತಿ ನೀಡಿದ್ದಾರೆ.

ಈಗಾಗಲೇ ಆರೋಪ ಹೊತ್ತ ಅಬಕಾರಿ ಅಧಿಕಾರಿಗಳ ತಲೆದಂಡಕ್ಕೆ ಸರ್ಕಾರ ಚಿಂತನೆ ನಡೆಸಿದೆ. ಅಬಕಾರಿ ಇನ್ಸ್‌ಪೆಕ್ಟರ್ ಶಿವಶಂಕರ್ ಅಮಾನತುಗೊಳಿಸಲಾಗಿದೆ. ಮತ್ತೊಂದೆಡೆ, ಲೋಕಾಯುಕ್ತದಲ್ಲಿ ಪ್ರಕರಣ ದಾಖಲಾದರೆ ಭ್ರಷ್ಟ ಅಧಿಕಾರಿಗಳಿಗೆ ಮತ್ತಷ್ಟು ಸಂಕಷ್ಟ ಖಚಿತವಾಗಿದೆ.

**ಏನಿದು ಅಬಕಾರಿ ಲಂಚ ಪ್ರಕರಣ?:** ಚಂದೂಪುರದಲ್ಲಿ ಬಾರ್ ಆಂಡ್ ರೆಸ್ಟೋರೆಂಟ್‌ಗೆ ಅನುಮತಿ ಪಡೆಯಲು ಲಕ್ಷ್ಮಮ್ಮ ಎಂಬುವವರ ಹೆಸರಿನಲ್ಲಿ ಅರ್ಜಿ ಸಲ್ಲಿಸಲಾಗಿತ್ತು. ಈ ಅರ್ಜಿಯನ್ನು ಲಕ್ಷ್ಮಮ್ಮ ಪುತ್ರ ಪುನೀತ್ ಎಂಬವರು ಸಲ್ಲಿಸಿದ್ದರು. ಆರಂಭದಲ್ಲಿ ಆನ್ ಲೈನ್ ಮೂಲಕ ಸಲ್ಲಿಸಿದ ಅರ್ಜಿಯನ್ನು ತಿರಸ್ಕರಿಸಲಾಗಿತ್ತು, ಪುಟ 2

# ಸದ್ಯಕ್ಕಿಲ್ಲ ಕರ್ನಾಟಕ ಸಚಿವ ಸಂಪುಟ ಪುನಾರಚನೆ

### ಕೆಪಿಸಿಸಿ ಅಧ್ಯಕ್ಷರ ಬದಲಾವಣೆಗೂ ಹೈಕಮಾಂಡ್ ತಡೆ

**ಬೆಂಗಳೂರು:** ಕರ್ನಾಟಕದಲ್ಲಿ ನಡೆದ ಉಪ ಚುನಾವಣೆಯಲ್ಲಿ 3 ಕ್ಷೇತ್ರಗಳನ್ನು ಕಾಂಗ್ರೆಸ್ ಕ್ಲೀನ್‌ಸ್ವೀಪ್ ಮಾಡಿತ್ತು. ಭರ್ಜರಿ ಗೆಲುವು ದೊರೆಯುತ್ತಿದ್ದಂತೆಯೇ ರಾಜ್ಯ ಸಂಪುಟ ಪುನರ್ ರಚನೆಯ ಸುದ್ದಿ ಮುನ್ನೆಲೆಗೆ ಬಂದಿತ್ತು. ಜೊತೆಗೆ ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಆಗುತ್ತದೆ ಎಂಬ ಬವದಂತಿಗಳೂ ಹರಿದಾಡಿದ್ದವು. ಅದಕ್ಕೆ ಪುಷ್ಠಿ ನೀಡುವಂತೆ ರಾಜ್ಯ ನಾಯಕರು ಮಾತನಾಡಿದ್ದರು. ಅತ್ತ ಸಚಿವಕಾಂಕ್ಷಿಗಳು ಲಾಬಿ ಶುರು ಮಾಡಿದ್ದರು. ಇತ್ತ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ದೆಹಲಿಗೆ ದೌಡಾಯಿಸಿದ್ದರು. ಇನ್ನೇನು ಸಂಪುಟ ಪುನರ್ ರಚನೆ ಆಗುತ್ತದೆ ಎಂದು ಆಸೆ ಕಂಗಳಿಂದ ಕಾಯುತ್ತಿದ್ದವರಿಗೆ ಕಾಂಗ್ರೆಸ್ ಹೈಕಮಾಂಡ್ ತಣ್ಣೀರು ಎರಚಿದೆ.





ದೆಹಲಿಯಲ್ಲಿ ಗುರುವಾರ ಹೈಕಮಾಂಡ್ ಮಟ್ಟದ ನಾಯಕರು ಸಭೆ ನಡೆಸಿದರು. ಸಂಪುಟ ಪುನರ್ ರಚನೆಗೆ ಸದ್ಯದ ಪರಿಸ್ಥಿತಿ ಪಕ್ವವಾಗಿಲ್ಲ ಎಂಬ ಸಂದೇಶವನ್ನು ಈ ಸಭೆ ರವಾನಿಸಿದೆ. ಪುಟ 2

# ಬಾಂಗ್ಲಾದವರಿಗೆ ನಕಲಿ ಆಧಾರ್ ಕಾರ್ಡ್ ಮಾಡಿಕೊಡುತ್ತಿದ್ದ ಆರೋಪಿ ಬಂಧನ

**ಬೆಂಗಳೂರು:** ಬಾಂಗ್ಲಾದೇಶದಿಂದ ಅಕ್ರಮವಾಗಿ ಭಾರತದೊಳಗೆ ನುಸುಳಿ ಬಂದಿದ್ದವರಿಗೆ ನಕಲಿ ಗುರುತಿನ ಚೀಟಿ ಮಾಡಿಕೊಡುತ್ತಿದ್ದ ಆರೋಪಿಯನ್ನು ಸೂರ್ಯಸಿಟಿ ಠಾಣೆ ಪೊಲೀಸರು ಬಂಧಿಸಿದ್ದಾರೆ. ಅರ್ನಾಬ್ ಮಂಡಲ್ ಬಂಧಿತ ಆರೋಪಿ. ಆರೋಪಿ ಅರ್ನಾಬ್ ಮಂಡಲ್ ಮೂಲತಃ ಪಶ್ಚಿಮ ಬಂಗಾಳದವನು. ಈ ಬೆಂಗಳೂರು ಹೊರವಲಯದ ಸೂರ್ಯಸಿಟಿ ಬಳಿ ಸೈಬರ್ ಸೆಂಟರ್ ತೆರೆದಿದ್ದನು.

ಕರ್ನಾಟಕ ಪೊಲೀಸರು ರಾಜ್ಯದಲ್ಲಿ ಅಕ್ರಮವಾಗಿ ನೆಲಸಿರುವ ಬಾಂಗ್ಲಾದೇಶ ಪ್ರಜೆಗಳ ಬೆನ್ನಬಿದ್ದಿದ್ದಾರೆ. ಈಗಾಗಲೆ ಅನೇಕರ ಹೆಡೆಮುರಿ ಕಟ್ಟುತ್ತಿದ್ದಾರೆ. ಈ




ಎಲ್ಲ ಬಾಂಗ್ಲಾದೇಶ ಪ್ರಜೆಗಳ ಬಳಿ ಭಾರತದ ನಕಲಿ ಗುರುತಿನ ಚೀಟಿಗಳು ಪತ್ತೆಯಾಗಿದ್ದವು. ಮತ್ತು ಈ ಎಲ್ಲ ನಕಲಿ ಗುರುತಿನ ಚೀಟಿಗಳು ಪಶ್ಚಿಮ ಬಂಗಾಳ ವಿಳಾಸದ್ದಾಗಿವೆ. ಪುಟ 2



# ಬೆಂಗಳೂರು ಹೊರವಲಯದಲ್ಲಿ ಮತ್ತೆ ಚಿರತೆ ಹಾವಳಿ

**ಬೆಂಗಳೂರು/ಆನೇಕಲ್:** ನಗರದ ಹೊರವಲಯಗಳಲ್ಲಿ ಚಿರತೆ ಹಾವಳಿ ಹೆಚ್ಚಾಗಿದೆ. ಕಾಡಿನಿಂದ ನಾಡಿಗೆ ಬಂದು ಜನರಲ್ಲಿ ಆತಂಕ ಹೆಚ್ಚಿಸಿವೆ. ಬನ್ನೇರುಘಟ್ಟ ವ್ಯಾಪ್ತಿಯಲ್ಲೂ ಚಿರತೆ ಕಾಣಿಸಿಕೊಳ್ಳುತ್ತಿದ್ದು, ಜನರು ಆತಂಕದಲ್ಲಿ ಜೀವನ ನಡೆಸುತ್ತಿದ್ದಾರೆ.

ಬನ್ನೇರುಘಟ್ಟ ಕಾಡಂಚಿನ ಗ್ರಾಮದ ಬಡಾವಣೆಗಳಲ್ಲಿ ಪದೇ ಪದೇ ಚಿರತೆ ಪ್ರತ್ಯಕ್ಷವಾಗುತ್ತಿರುವುದು ನಿವಾಸಿಗಳಲ್ಲಿ ಆತಂಕ ಸೃಷ್ಟಿ ಮಾಡಿದೆ. ಹೌದು. ಬೆಂಗಳೂರು ಹೂರವಲಯದ ಆನೇಕಲ್ ತಾಲೂಕಿನ ಜಿಗಣಿ ಸಮೀಪದ ನಿಸರ್ಗ ಬಡಾವಣೆ ಮತ್ತು ಲೋಟಸ್ ಬಡಾವಣೆ ಸುತ್ತಮುತ್ತ ಚಿರತೆ ಓಡಾಡುತ್ತಿದ್ದು ಚಿರತೆ ಓಡಾಟದ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಪುಟ 2



### ಮಹಾರಾಷ್ಟ್ರಕ್ಕೆ ಫಡ್ನವಿಸ್ ಸಿಎಂ, ಪವಾರ್ ಡಿಸಿಎಂ

# ಇಂದೇ ಅಧಿಕೃತ ಪ್ರಕಟ ಸಾಧ್ಯತೆ

**ಮುಂಬೈ:** ಮಹಾರಾಷ್ಟ್ರ ಸಿಎಂ ಸ್ಥಾನವನ್ನು ದೇವೇಂದ್ರ ಫಡ್ನವಿಸ್ ಹಾಗೂ ಉಪಮುಖ್ಯಮಂತ್ರಿ ಸ್ಥಾನವನ್ನು ಎನ್‌ಸಿಪಿ ನಾಯಕ ಅಜಿತ್ ಪವಾರ್ ಅಲಂಕರಿಸಲಿದ್ದಾರೆ. ಈ ಹಿನ್ನೆಲೆಯಲ್ಲಿ ಹಾಲಿ ಸಿಎಂ ಏಕನಾಥ್ ಶಿಂಧೆ ಅವರು ಗೃಹ ಮತ್ತು ನಗರಾಭಿವೃದ್ಧಿ ಇಲಾಖೆಗಳಿಗೆ ಬೇಡಿಕೆಯಿಟ್ಟಿದ್ದಾರೆ ಎಂದು ಉನ್ನತ ಮೂಲಗಳಿಂದ ತಿಳಿದುಬಂದಿದೆ.

ಎಲ್ಲವೂ ಅಂದುಕೊಂಡಂತೆ ನಡೆದರೆ, ಪ್ರಧಾನಿ ಮೋದಿ, ಅಮಿತ್ ಶಾ ನೇತೃತ್ವದಲ್ಲಿ ಇಂದೇ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳ ಹೆಸರು ಅಧಿಕೃತವಾಗಿ ಪ್ರಕಟಿಸುವ ಸಾಧ್ಯತೆಯಿದೆ ಎಂದು ವರದಿಗಳು ತಿಳಿಸಿವೆ.

ಗುರುವಾರ ರಾತ್ರಿ, ನವದೆಹಲಿಯಲ್ಲಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ನಿವಾಸದಲ್ಲಿ ಮಹಾಯುತಿ ನಾಯಕರ ಮಹತ್ವದ ಸಭೆ ನಡೆಯಿತು. ಮಹಾರಾಷ್ಟ್ರದ ನಿಯೋಜಿತ ಮುಖ್ಯಮಂತ್ರಿ ಮತ್ತು ಶಿವಸೇನೆ ನಾಯಕ ಏಕನಾಥ್ ಶಿಂಧೆ, ಬಿಜೆಪಿ ನಾಯಕ ದೇವೇಂದ್ರ ಫಡ್ನವಿಸ್, ನ್ಯಾಶನಲಿಸ್ಟ್ ಕಾಂಗ್ರೆಸ್ ಪಕ್ಷದ ನಾಯಕ ಅಜಿತ್ ಪವಾರ್ ಮತ್ತು ಬಿಜೆಪಿ ಅಧ್ಯಕ್ಷ ಜೆಪಿ ನಡ್ಡಾ ಮೊದಲಾದ ಹಿರಿಯ ನಾಯಕರು ಸಭೆಯಲ್ಲಿ ಪಾಲ್ಗೊಂಡಿದ್ದರು. ಸಭೆಗೂ ಮುನ್ನ



ಏಕನಾಥ್ ಶಿಂಧೆ ಅವರು ಕೃಷ್ಣ ಮೆನನ್ ಮಾರ್ಗದಲ್ಲಿರುವ ನಿವಾಸದಲ್ಲಿ ಅಮಿತ್ ಶಾ ಅವರನ್ನ ಭೇಟಿಯಾದರು. ನಂತರ ಫಡ್ನವಿಸ್, ಅಜಿತ್ ಪವಾರ್ ಚರ್ಚೆಯಲ್ಲಿ ಪಾಲ್ಗೊಂಡರು. ಮುಂಬೈನಲ್ಲಿ ಮತ್ತೊಂದು ಸಭೆ ನಡೆಯಲಿದೆ ಎಂದು ಮೂಲಗಳು ತಿಳಿಸಿವೆ.

**20 ಖಾತೆ ಉಳಿಸಿಕೊಳ್ಳಲು ಬಿಜೆಪಿ ಪ್ಲ್ಯಾನ್:** ಮಹಾರಾಷ್ಟ್ರ ಚುನಾವಣೆಯಲ್ಲಿ ಅತಿಹೆಚ್ಚು ಸ್ಥಾನಗಳನ್ನು ಪಡೆದಿರುವ ಬಿಜೆಪಿ ಸುಮಾರು 20 ಸಚಿವ ಸ್ಥಾನಗಳನ್ನು ಪುಟ 2

# ದೇಸಿ ಬೆಳ್ಳುಳ್ಳಿ ದುಬಾರಿ

### ನಿಷೇಧಿತ ಚೀನಾ ಬೆಳ್ಳುಳ್ಳಿ ಚಿಕ್ಕಬಳ್ಳಾಪುರಕ್ಕೂ ಎಂಟ್ರಿ?

**ಚಿಕ್ಕಬಳ್ಳಾಪುರ:** ಅಬ್ಬಬ್ಬಾ ಮೂರು ದಿನಗಳಿಂದ ಚಳಿಗೆ ಜನ ಗಡ ಗಡ ನಡುಗುವಂತಾಗಿದೆ.. ಬಿಸಿ ಬಿಸಿ ಕಾಫಿ ಟೀ ಕುಡಿದು ಬೆಚ್ಚಗೆ ಇದ್ರೆ ಸಾಕು ಅನಿಸುತ್ತಿದೆ.. ಅದ್ರಲ್ಲೂ ನಾನ್ ವೆಜ್ ಪ್ರಿಯರಿಗಂತೂ ಚಳಿಗೆ ಚಿಕನ್-ಮಟನ್ ತಿಂದು ಬೆಚ್ಚಗೆ ಇರೋಣ ಅಂತಿದ್ದಾರೆ. ಆದ್ರೆ ನಾನ್ ವೆಜ್ ಮಾಡಬೇಕು ಅಂದ್ರೆ, ಮಸಾಲ ಮಾಂತ್ರಿಕ ಬೆಳ್ಳುಳ್ಳಿ ಬೇಕೇ ಬೇಕು. ದಿನೇ ದಿನೇ ಬೆಳ್ಳುಳ್ಳಿ ರೇಟ್ ದುಬಾರಿಯಾಗುತ್ತಿದೆ. ಇದ್ರಿಂದ ಮಾರುಕಟ್ಟೆಗೆ ಭಾರತ ಬ್ಯಾನ್ ಮಾಡಿರೋ ಚೀನಾ ಬೆಳ್ಳುಳ್ಳಿ ಎಂಟ್ರಿಯಾಗಿರೋ ಅನುಮಾನ ಮೂಡಿದ್ದು ಅಧಿಕಾರಿಗಳು ಅಲರ್ಟ್ ಆಗಿದ್ದಾರೆ.

ಹೌದು, ಅಚ್ಚರಿ ಆಶ್ಚರ್ಯ ಚಕಿತರಾಗಿ ಚಿಕ್ಕಬಳ್ಳಾಪುರದಲ್ಲಿ ಮಹಿಳೆಯರು ಸಹ ಅದ್ಯಾವುದಪ್ಪ ಈ ಬೆಳ್ಳುಳ್ಳಿ ಅಂತ ಬಾಯ್ ಬಾಯ್ ಕಣ್ ಕಣ್ ಬಿಟ್ಟುಕೊಂಡು ನೋಡ್ತಿದ್ದಾರೆ. ಅಂದಹಾಗೆ ಮಾರುಕಟ್ಟೆಯಲ್ಲಿ ಬೆಳ್ಳುಳ್ಳಿ ಬೆಲೆ ಕೆಜಿಗೆ 400 ರಿಂದ 500 ರೂ. ಇದೆ. ದಿನೇ ದಿನೇ



ಬೆಳ್ಳುಳ್ಳಿ ರೇಟ್ ಗಗನಕ್ಕೆ ಏರುತ್ತಿದೆ. ಹಾಗಾಗಿ ಈಗ ಚಿಕ್ಕಬಳ್ಳಾಪುರದ ಮಾರುಕಟ್ಟೆಗಳಲ್ಲಿ ಎಲ್ಲಿ ನೋಡಿದ್ರೂ ಈಗ ದಪ್ಪನಾಗಿ ಕಾಣ್ತಿರುವ ಬೆಳ್ಳುಳ್ಳಿ ಚೀನಾ ಬೆಳ್ಳುಳ್ಳಿ ಎನ್ನಲಾಗ್ತಿದೆ. ಅಂದ ಹಾಗೆ ದೇಸಿ ಬೆಳ್ಳುಳ್ಳಿ ರುಚಿ ಇರುತ್ತದೆ. ವಾಸನೆಯಲ್ಲಿ ಬಹಳಷ್ಟು ಘಾಟು ಇರುತ್ತದೆ. ಪುಟ 2

# 7 ತಿಂಗಳಲ್ಲಿ 135 ಶಿಶುಗಳು 28 ಗರ್ಭಿಣಿಯರು ಸಾವು!

**ದಾವಣಗೆರೆ:** ನಾಲ್ಕೈದು ಜಿಲ್ಲೆಗಳ ಜೀವನಾಡಿಯಾಗಿರುವ ದಾವಣಗೆರೆ ಜಿಲ್ಲಾಸ್ಪತ್ರೆ ಇದೀಗ ಜಿಲ್ಲೆಯ ಜನರಲ್ಲಿ ಆತಂಕ ಮೂಡಿಸಿದೆ. ಕಳೆದ 7 ತಿಂಗಳಲ್ಲಿ ನೂರಾರು ನವಜಾತ ಶಿಶುಗಳು ಹಾಗೂ ಗರ್ಭಿಣಿಯರು ಸಾವನ್ನಪ್ಪಿದ್ದಾರೆ.



ದಾವಣಗೆರೆ ಜಿಲ್ಲಾಸ್ಪತ್ರೆ ಎಂದರೆ ಸುತ್ತಮುತ್ತಲಿನ ನಾಲ್ಕೈದು ಜಿಲ್ಲೆಗಳ ಸಾವಿರಾರು ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಆದರೆ ಈ ಆಸ್ಪತ್ರೆಯಲ್ಲಿ ನವಜಾತ ಶಿಶುಗಳ ಮರಣ ಪ್ರಮಾಣ ಹೆಚ್ಚಾಗಿದೆ ಎನ್ನುವ ಆತಂಕಕಾರಿ ವರದಿ ಕೇಳಿ ಬಂದಿದೆ. ಇದನ್ನೂ ಕೇಳಿದ ಆರೋಗ್ಯ ಸಚಿವರೇ ನಿಬ್ಬೆರಗಾಗಿದ್ದಾರೆ.

ಹೌದು, ಜಿಲ್ಲೆಯಲ್ಲಿ ಕಳೆದ 7 ತಿಂಗಳಲ್ಲಿ 135 ನವಜಾತ ಶಿಶುಗಳು 28 ಗರ್ಭಿಣಿಯರು ಸಾವನ್ನಪ್ಪಿರುವ ವರದಿಯಾಗಿದೆ. ಅದರಲ್ಲಿ ಖಾಸಗಿ ಆಸ್ಪತ್ರೆಯಲ್ಲಿ ಐದು ಸಾವಾಗಿದ್ದರೆ, ಇನ್ನುಳಿದವರು ಸರ್ಕಾರಿ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ. ಪ್ರತಿ ತಿಂಗಳು 600 ರಿಂದ 700 ಹೆರಿಗೆ ಆಗುವ ಜಿಲ್ಲಾಸ್ಪತ್ರೆಯಲ್ಲಿ ನವಜಾತ ಶಿಶುಗಳ ಸಾವಿನ ಸಂಖ್ಯೆ ಕೂಡ ಹೆಚ್ಚಾಗಿದೆ. ಇದರಿಂದ ನಾಲ್ಕು ಜಿಲ್ಲೆಗಳ ಜಿಲ್ಲಾಧಿಕಾರಿಗಳ ಜೊತೆ ಸಭೆ ನಡೆಸಿದ್ದು, ಹೆಚ್ಚಿನ ಚಿಕಿತ್ಸೆಗಾಗಿ ಮುಂಚಿತವಾಗಿ ಗರ್ಭಿಣಿಯರನ್ನು ಕಳಿಸುವಂತೆ ಸೂಚನೆ ನೀಡಲಾಗಿದೆ. ಪುಟ 2

## ನಾನು ತಪ್ಪು ಮಾಡಿಲ್ಲ, ತಲೆದಂಡ ಯಾಕಾಗುತ್ತೆ?

**ಬೆಂಗಳೂರು:** ನಾನು ಏನೂ ತಪ್ಪು ಮಾಡಿಲ್ಲ. ನನ್ನ ತಲೆದಂಡದ ಪ್ರಶ್ನೆ ಬರಲ್ಲ ಎಂದು ಸಚಿವ ತಿಮ್ಮಾಪುರ್ ಹೇಳಿದ್ದಾರೆ. ಅಬಕಾರಿ ಇಲಾಖೆ ಮೇಲೆ ಭ್ರಷ್ಟಾಚಾರ ಆರೋಪದ ವಿಚಾರ ಮತ್ತು ಮಂಡ್ಯದಲ್ಲಿ ಅಬಕಾರಿ ಇಲಾಖೆ ಅಕ್ರಮದ ಕುರಿತು ವಿಧಾನಸೌಧದಲ್ಲಿ ಮಾತನಾಡಿದ ಅವರು, ಮಂಡ್ಯದಲ್ಲಿ ಅಬಕಾರಿ ಇಲಾಖೆ ಆಡಿಯೋ ವಿಚಾರದಲ್ಲಿ ಜೆಸಿಯಿಂದ ವರದಿ ಪಡೆದಿದ್ದೇನೆ. ಆ ಅಧಿಕಾರಿಯನ್ನು ಅಮಾನತು ಮಾಡುತ್ತೇನೆ. ಇಲಾಖೆ ಮೇಲೆ ಲಂಚದ ಆರೋಪ ಬಂದಿರೋ ವಿಚಾರವಾಗಿ ವರದಿ ತರಿಸಿಕೊಳ್ಳೋಣ ಎಂದು ತಿಳಿಸಿದರು. ಅಬಕಾರಿ ಇಲಾಖೆ ಮೇಲೆ ಆಗಾಗ ಇಂತಹ ಆರೋಪ ಕೇಳಿ ಬರುತ್ತದೆ. ಇಲಾಖೆಯಲ್ಲಿ ಕೆಲವು ವಿಚಾರಗಳನ್ನು ಸರಿ ಮಾಡಬೇಕು. ಅದನ್ನು ಮಾಡುತ್ತೇನೆ. ನನ್ನ ತಲೆದಂಡದ ಪ್ರಶ್ನೆ ಬರಲ್ಲ. ತಿಮ್ಮಾಪುರ್ ಏನು ತಪ್ಪು ಮಾಡಿಲ್ಲ. ಏನಾದರೂ ಇದ್ದರೆ ನಾನು ಅದನ್ನು ಎದುರಿಸುತ್ತೇನೆ. ಹಿಂದೆಯೂ ಅಬಕಾರಿ ಮಂತ್ರಿ ಆಗಿದ್ದವರ ಮೇಲೆ ಇಂತಹ ಆರೋಪಗಳು ಬಂದಿದೆ. ಎಲ್ಲಾ ಮಂತ್ರಿಗಳ ಮೇಲೂ ಆರೋಪ ಬಂದಿದೆ ಎಂದು ಹೇಳಿದರು. ಇಲಾಖೆಯಲ್ಲಿ ಕೆಲವು ಬದಲಾವಣೆ ಆಗಬೇಕು. ಅದನ್ನು ಮಾಡುತ್ತೇನೆ. ಮೋದಿಯವರು 700 ಕೋಟಿ ಅಕ್ರಮದ ಆರೋಪ ಮಾಡುತ್ತಾರೆ. ಇದಕ್ಕೆ ಬೆಲೆ ಇದೆ. ಅಧಿಕಾರಿಗಳ ಹಂತದಲ್ಲಿ ಇವೆಲ್ಲ ನಡೆಯುತ್ತಿದೆ. ಇದನ್ನು ಸರಿ ಮಾಡುತ್ತೇನೆ. ಇಲಾಖೆಯ ವರ್ಗಾವಣೆ ಕೌನ್ಸಿಲಿಂಗ್ ವ್ಯವಸ್ಥೆ ಮಾಡುವ ಪ್ರಕ್ರಿಯೆ ತರುತ್ತೇವೆ. ಮದ್ಯದಂಗಡಿಗಳಿಗೆ ಅನುಮತಿ ನೀಡುವ ವಿಚಾರವಾಗಿಯೂ ಕೆಲವು ಗೊಂದಲ ಆಗುತ್ತಿದೆ. ಇವೆಲ್ಲದರ ಬಗ್ಗೆ ಕ್ರಮ ತೆಗೆದುಕೊಳ್ಳುತ್ತೇನೆ ಎಂದರು.



## ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಬಗ್ಗೆ ನನಗೆ ಗೊತ್ತಿಲ್ಲ: ಖಂಡ್ರೆ

**ಬೆಂಗಳೂರು:** ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ವಿಚಾರ ನನ್ನ ಗಮನಕ್ಕೆ ಬಂದಿಲ್ಲ ಎಮದು ಸಚಿವ ಈಶ್ವರ್ ಖಂಡ್ರೆ ಸ್ಪಷ್ಟಪಡಿಸಿದ್ದಾರೆ. ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಈಶ್ವರ್ ಖಂಡ್ರೆ ಹೆಸರು ಕೇಳಿ ಬರುತ್ತಿರುವ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ನನ್ನ ಜೊತೆ ಯಾರೂ ಈ ಬಗ್ಗೆ ಚರ್ಚೆ ಮಾಡಿಲ್ಲ. ಅಧ್ಯಕ್ಷರ ಬದಲಾವಣೆ ವಿಚಾರ ಸಿಎಂ, ಡಿಸಿಎಂ, ಹೈಕಮಾಂಡ್ ನಾಯಕರು ತೀರ್ಮಾನ ಮಾಡುತ್ತಾರೆ ಎಂದರು. ನಾನು ಮಲ್ಲಿಕಾರ್ಜುನ ಖರ್ಗೆ ಅವರ ಜೊತೆ ಮಾತಾಡಿದ್ದು ಇಲಾಖೆ ಬಗ್ಗೆ, ನಮ್ಮ ಕ್ಷೇತ್ರದ ಬಗ್ಗೆ. ಡಿಕೆ ಶಿವಕುಮಾರ್ ಅವರು ಬದಲಾವಣೆ ಬಗ್ಗೆ ಪ್ರಸ್ತಾಪ ಮಾಡಬಹುದು. ಅವರು ಪಕ್ಷದ ಅಧ್ಯಕ್ಷರು. ಅಂತಿಮವಾಗಿ ಹೈಕಮಾಂಡ್ ಎಲ್ಲವೂ ತೀರ್ಮಾನ ಮಾಡುತ್ತದೆ ಎಂದು ತಿಳಿಸಿದರು.

## 50 ಕೋಟಿ ರೂ. ವೆಚ್ಚದ ಅಂತರಾಷ್ಟ್ರೀಯ ಕ್ರಿಕೆಟ್ ಮೈದಾನ

**ಕೊಡಗು:** ಜಿಲ್ಲೆಗೊಂದು ಕ್ರಿಕೆಟ್ ಕ್ರೀಡಾಂಗಣ ಬೇಕು ಎನ್ನುವುದು ಹಲವು ದಶಕಗಳ ಬೇಡಿಕೆಯಾಗಿತ್ತು. ಕೊನೆಗೂ ಆ ಬೇಡಿಕೆ ಈಡೇರುವ ಕಾಲ ಸನ್ನಿಹಿತವಾಗಿದೆ. ಮಡಿಕೇರಿ ತಾಲೂಕಿನ ಪಾಲೆಮಾಡು ಗ್ರಾಮದ ಬಳಿ ಅಂತಾರಾಷ್ಟ್ರೀಯ ಕ್ರಿಕೆಟ್ ಮೈದಾನ ಬಳಿ ತಲೆ ಎತ್ತುತ್ತಿದೆ. ಈಗಾಗಲೆ ಮೈದಾನ ನಿರ್ಮಾಣ ಕಾಮಗಾರಿ ಆರಂಭವಾಗಿದೆ. ಮೈದಾನ ನಿರ್ಮಾಣಕ್ಕೆ ಜಿಲ್ಲಾಡಳಿತ 12 ಎಕರೆ ಜಾಗ ನೀಡಿದೆ. ಹಿಮಾಚಲ ಪ್ರದೇಶದ ಧರ್ಮಶಾಲಾ ಮಾದರಿಯಲ್ಲಿ ಈ ಮೈದಾನ ನೈಸರ್ಗಿಕವಾಗಿ ತಲೆ ಎತ್ತಲಿದೆ. ವಿಶೇಷ ಅಂದರೆ, ಈ ಮೈದಾನ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣಕ್ಕಿಂತ ತುಸು ದೊಡ್ಡದಾಗಿರಲಿದೆ. 50 ಕೋಟಿ ರೂ. ವೆಚ್ಚದಲ್ಲಿ ಇಲ್ಲಿ ಮೈದಾನ ನಿರ್ಮಾಣವಾಗುತ್ತಿದೆ. ಬೆಟ್ಟವನ್ನು ಅರ್ಧ ಸಮತಟ್ಟುಗೊಳಿಸಿ ಮೈದಾನ ನಿರ್ಮಾಣ ಮಾಡಲಾಗುತ್ತಿದೆ. ಮೈದಾನ ನಿರ್ಮಾಣಕ್ಕೆ ವಿರೋಧ ವ್ಯಕ್ತಪಡಿಸಿದ್ದರು. ಮೈದಾನ ನಿರ್ಮಾಣ ಜಾಗದಲ್ಲಿ ಸ್ಮಶಾನವಿದೆ, ಯಾವುದೇ ಕಾರಣಕ್ಕೂ ಮೈದಾನ ಆಗಲು ಬಿಡುವುದಿಲ್ಲ ಎಂದು ಪ್ರತಿಭಟನೆ ಮಾಡಿದ್ದರು. ಇದು ಕೂಡ ಮೈದಾನ ನಿರ್ಮಾಣ ಕಾಮಗಾರಿ ನೆನಗುದಿಗೆ ಬೀಳಲು ಕಾರಣವಾಗಿತ್ತು. ಆದರೆ, ಹಿಂದಿನ ಜಿಲ್ಲಾಧಿಕಾರಿ ಡಾ. ಬಿಸಿ ಸತೀಶ್ ಸಭೆ ಕರೆದು ಒಂದು ಎಕರೆ ಜಾಗವನ್ನ ಸ್ಮಶಾನಕ್ಕೆ ಮೀಸಲಿಟ್ಟು ಉಳಿದ ಜಾಗವನ್ನ ಕ್ರಿಕೆಟ್ ಮೈದಾನಕ್ಕೆ ಬಳಸಿಕೊಳ್ಳುವಂತೆ ಸೂಚಿಸಿದ್ದರು. ಆದರೆ, ಪೈಸಾರಿ ನಿವಾಸಿಗಳು ಮಾತ್ರ ತಮಗೆ ಎರಡು ಎಕರೆ ಜಾಗ ಬೇಕು ಅಂತ ಹಠಕ್ಕೆ ಬಿದ್ದಿದ್ದರು. ಆದರೆ, ಕೆಎಸ್ಸಿಎ ಸಿಬ್ಬಂದಿ ಮಾತ್ರ ಏನೇ ಆಗಲಿ ನಾವು ಮೈದಾನ ನಿರ್ಮಿಸಿಯೇ ತೀರುತ್ತೇವೆ ಅಂತ ಘೋಷಿಸಿದ್ದಾರೆ. ಇದೀಗ ಎಲ್ಲ ಅಡೆತಡೆಗಳು ನಿವಾರಣೆಯಾಗಿದ್ದು ಕಾಮಗಾರಿ ಶುರುಮಾಡಲಾಗಿದೆ. ಈಗಾಗಲೇ ಜೆಸಿಬಿ, ಹಿತಾಚಿ ಯಂತ್ರಗಳು ಬಂದು ಮಣ್ಣು ಅಗೆಯಲು ಶುರು ಮಾಡಿವೆ. ಮುಂದಿನ ನಾಲ್ಕು ವರ್ಷಗಳಲ್ಲಿ ಮೈದಾನ ಸಿದ್ದವಾಗಲಿದೆ. ಇದು ಸ್ಥಳೀಯ ಕ್ರೀಡಾಪಡುಗಳಿಗೆ ವರದಾನವಾಗಲಿದೆ.

## ಬೆಳಗಾವಿಯಲ್ಲಿ ಪಾಗಲ್ ಪ್ರೇಮಿಯಿಂದ ನರ್ಸ್ ಮೇಲೆ ಮಚ್ಚಿನಿಂದ ಹಲ್ಲೆ

**ಬೆಳಗಾವಿ:** ನಗರದ ಖಾಸಗಿ ಆಸ್ಪತ್ರೆಯ ನರ್ಸ್ ಮೇಲೆ ಪಾಗಲ್ ಪ್ರೇಮಿಯೊಬ್ಬ ಆಸ್ಪತ್ರೆಯ ಕೌಂಟರ್ ಬಳಿಯೇ ಮಚ್ಚಿನಿಂದ ಹಲ್ಲೆ ನಡೆಸಿದ ಘಟನೆ ನಡೆದಿದೆ. ಅ.30ರ ಮಧ್ಯಾಹ್ನ ಈ ಘಟನೆ ನಡೆದಿದ್ದು, ತಡವಾಗಿ ಬೆಳಕಿಗೆ ಬಂದಿದೆ.



ನಗರದ ಪ್ರಕಾಶ್ ಜಾಧವ್ ಎಂಬಾತ ನರ್ಸ್ ಮೇಲೆ ಹಲ್ಲೆ ನಡೆಸಿದ್ದು, ಈ ವೇಳೆ ಪ್ರಾಣ ಪಣಕ್ಕಿಟ್ಟು ಆಕೆ ಹೋರಾಡಿದ್ದಳು. ಆರೋಪಿಯ ಕೃತ್ಯ ಆಸ್ಪತ್ರೆಯ ಸಿಸಿಟಿವಿಯಲ್ಲಿ ಸೆರೆಯಾಗಿದೆ. ಈ ವಿಚಾರ ಗೊತ್ತಾಗುತ್ತಿದ್ದಂತೆ ಆಸ್ಪತ್ರೆಗೆ ಆಗಮಿಸಿದ್ದ ಖಡೇಬಜಾರ್ ಪೊಲೀಸರು, ಪ್ರಕಾಶ್‌ನನ್ನು ಬಂಧಿಸಿದ್ದರು.

ಆರೋಪಿ ಹೆಲ್ಮೆಟ್ ಧರಿಸಿಕೊಂಡು ಆಸ್ಪತ್ರೆಗೆ ಬಂದಿದ್ದ. ಬಳಿಕ ಪ್ಲಾಸ್ಟಿಕ್ ಕವರ್‌ನಲ್ಲಿ ತಂದಿದ್ದ ಮಚ್ಚಿನಿಂದ ನರ್ಸ್ ಮೇಲೆ ದಾಳಿ ನಡೆಸಿದ್ದ. ಈ ವೇಳೆ ಆಸ್ಪತ್ರೆಯಲ್ಲಿದ್ದ ರೋಗಿಗಳು ಹೆದರಿ ಅಲ್ಲಿಂದ ಓಡಿದ್ದರು. ಆರೋಪಿ ಪ್ರಕಾಶ್ ಹಲ್ಲೆಗೊಳಗಾದ ನರ್ಸ್‌ನ 10ನೇ ತರಗತಿಯ ಸಹಪಾಠಿಯಾಗಿದ್ದ. ಕೆಲ ದಿನಗಳ ಹಿಂದೆ ಕುಟುಂಬಸ್ಥರನ್ನು ಆಕೆಯ ಮನೆಗೆ ಕರೆದುಕೊಂಡು ಹೋಗಿ ಮದುವೆ ಪ್ರಸ್ತಾಪ ಮಾಡಿದ್ದ. ಅಲ್ಲದೇ ಪ್ರೀತಿಸುವಂತೆ ಪೀಡಿಸುತ್ತಿದ್ದ. ಇದಕ್ಕೆ ಯುವತಿ ಒಪ್ಪಿರಲಿಲ್ಲ ಎಂದು ತನಿಖೆ ವೇಳೆ ತಿಳಿದು ಬಂದಿದೆ.

## ನಾವು ಜೆಡಿಎಸ್ ಶಾಸಕರನ್ನ ಕೊಂಡುಕೊಳ್ಳಲು ಹೋಗಿಲ್ಲ: ಗೃಹ ಸಚಿವ ಜಿ. ಪರಮೇಶ್ವರ್

**ಬೆಂಗಳೂರು:** ಅಂಗಡಿಗೆ ಹೋಗಿ ಯಾವುದೋ ಪದಾರ್ಥದ ಬೆಲೆ ಎಷ್ಟು ಅಂತ ಕೇಳಿದಾಗ ಅವರು ಬೆಲೆ ಹೇಳುತ್ತಾರೆ. ಆದರೆ ಆ ರೀತಿ ನಾವೇನೂ ಜೆಡಿಎಸ್‌ನವರ ಬಳಿ ಹೋಗಿ ಕೇಳಿಲಿಲ್ಲ. ನಾವು ಯಾರನ್ನೂ ಕೊಂಡುಕೊಳ್ಳಲು ಹೋಗಿಲ್ಲ ಎಂದು ಸಚಿವ ಜಿ. ಪರಮೇಶ್ವರ್ ಹೇಳಿದ್ದಾರೆ.

ಸಿಪಿವೈ ಹೇಳಿಕೆಯಿಂದ ಜೆಡಿಎಸ್ ಶಾಸಕರಿಂದ ಒಗ್ಗಟ್ಟು ಪ್ರದರ್ಶನ ವಿಚಾರವಾಗಿ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದರು. ನಾವೇನೂ ಅವರನ್ನು ಕೊಂಡುಕೊಳ್ಳಲು ಹೋಗಿಲ್ಲ. ಅಂಗಡಿಗೆ ಹೋಗಿ ಯಾವುದೋ ಪದಾರ್ಥದ ಬೆಲೆ ಎಷ್ಟು ಅಂತ ಕೇಳಿದಾಗ ಅವರು ಬೆಲೆ ಹೇಳುತ್ತಾರೆ. ಆದರೆ ಆ ರೀತಿ ನಾವೇನೂ ಜೆಡಿಎಸ್‌ನವರ ಬಳಿ ಹೋಗಿ



ಕೇಳಿಲಿಲ್ಲ. ಯೋಗೇಶ್ವರ್ ಅವರು ಹಾಗೇ ಏನೋ ಹೇಳಿಕೆ ಕೊಟ್ಟಿದ್ದಾರೆ ಅಷ್ಟೇ. ಅದನ್ನೇ ಜೆಡಿಎಸ್‌ನವರು ಅಷ್ಟೊಂದು ಗಂಭೀರವಾಗಿ ಪರಿಗಣಿಸುವ ಅಗತ್ಯ ಇಲ್ಲ ಎಂದರು.

ಸಂಪುಟ ಪುನಾರಚನೆ ಬಗ್ಗೆ ಮಾತನಾಡಿ, ಸಂಪುಟ ಪುನಾರಚನೆ ಬಗ್ಗೆ ನನಗೆ ಗೊತ್ತಿಲ್ಲ. ಡಿಸಿಎಂ ಅವರು ದೆಹಲಿಗೆ ಹೋಗಿದ್ದಾರೆ. ಖಾತೆ ಬದಲಾವಣೆ ಬಗ್ಗೆ ಏನು ತೀರ್ಮಾನ ಮಾಡುತ್ತಾರೋ ಗೊತ್ತಿಲ್ಲ. ಇಷ್ಟು ಕಾಲ ವರಿಷ್ಠರು ಏನು ಜವಾಬ್ದಾರಿ ಕೊಟ್ಟಿದ್ದಾರೋ ಅದನ್ನು ಮಾಡಿಕೊಂಡು ಬಂದಿದ್ದೇನೆ. ಈಗಲೂ ಅವರು ಏನೇ ಜವಾಬ್ದಾರಿ ಕೊಟ್ಟರೂ ಮಾಡುವುದಿಕ್ಕೆ ನಾನು ತಯಾರಾಗಿರುತ್ತೀನಿ. ಪಕ್ಷದ ಸೂಚನೆಯನ್ನು 35 ವರ್ಷಗಳಿಂದ ಪಾಲಿಸಿಕೊಂಡು ಬಂದಿದ್ದೇನೆ. ಸರ್ಕಾರ, ಪಕ್ಷದಲ್ಲಿ ಕೊಟ್ಟ ಜವಾಬ್ದಾರಿ ಮಾಡಿಕೊಂಡು ಬಂದಿದ್ದೇನೆ. ಕೆಪಿಸಿಸಿ ಅಧ್ಯಕ್ಷರ ಬದಲಾವಣೆ ಬಗ್ಗೆಯೂ ಕೇಳಿದ್ದೇನೆ. ಒಂದೊಮ್ಮೆ ಆ ವಿಚಾರ ವರಿಷ್ಠರ ಮುಂದೆ ಇದ್ದರೆ ಬದಲಾವಣೆ ಮಾಡುತ್ತಾರೆ ಎಂದರು.

## ಆಸ್ಪತ್ರೆಯಲ್ಲಿ ಅಮಾನವೀಯ ಘಟನೆ ಶೌಚಗುಂಡಿಯಲ್ಲಿ ನವಜಾತ ಶಿಶು ಶವ ಪತ್ತೆ

**ರಾಮನಗರ:** ಜಿಲ್ಲೆಯ ಹಾರೋಹಳ್ಳಿ ಸಮೀಪದ ದಯಾನಂದ ಆಸ್ಪತ್ರೆಯ ಶೌಚಾಲಯದ ಗುಂಡಿಯಲ್ಲಿ ನವಜಾತ ಶಿಶು ಶವ ಪತ್ತೆಯಾಗಿರುವ ಅಮಾನವೀಯ ಘಟನೆಯೊಂದು ನಡೆದಿದೆ. ಆಸ್ಪತ್ರೆಯ ರೇಡಿಯಾಲಜಿ ಡಿಪಾರ್ಟ್ಮೆಂಟ್ ಬ್ಲಾಕ್‌ನ ಶೌಚಗುಂಡಿಯಲ್ಲಿ ಮಗು ಶವ ಪತ್ತೆಯಾಗಿದ್ದು, ಸಾಕಷ್ಟು ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ. ಆಗ ತಾನೇ ಜನಿಸಿರುವ ಮಗುವನ್ನು ಟಾಯ್ಲೆಟ್ ಕಮೋಡ್‌ನಲ್ಲಿ ಹಾಕಿ ಫ್ಲಶ್ ಮಾಡಲಾಗಿದೆ.



ಬಳಿಕ ಶೌಚಾಲಯದಲ್ಲಿ ನೀರು ಹೋಗದೇ ಕಟ್ಟಿಕೊಂಡ ಹಿನ್ನೆಲೆ ಹೌಸ್ ಕೀಪಿಂಗ್ ಸಿಬ್ಬಂದಿ ಪರಿಶೀಲನೆ ನಡೆಸಿದ್ದಾರೆ. ಈ ವೇಳೆ ಶೌಚಗುಂಡಿಯಲ್ಲಿ ಮಗು ಶವ ಪತ್ತೆಯಾಗಿದೆ. ಮಗು ಜನನವನ್ನ ಮರೆಮಾಚಲು ಯಾರೋ ಕೃತ್ಯವೆಸಗಿರುವ ಶಂಕೆ ವ್ಯಕ್ತವಾಗಿದೆ.

ಸದ್ಯ ಈ ಸಂಬಂಧ ಆಸ್ಪತ್ರೆ ವೈದ್ಯರು ಹಾರೋಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ. ಪ್ರಕರಣ ದಾಖಲು ಮಾಡಿಕೊಂಡಿರುವ ಪೊಲೀಸರು ತನಿಖೆಗೆ ಮುಂದಾಗಿದ್ದು, ಮಗುವಿನ ಡಿಎನ್‌ಎ ವರದಿ ಆಧರಿಸಿ ಆರೋಪಿಗಳ ಪತ್ತೆಗೆ ಕ್ರಮ ಕೈಗೊಂಡಿದ್ದಾರೆ.

## ಇಲಿ ಪಾಷಾಣ ಸೇವಿಸಿ ಅಪ್ರಾಪ್ತೆ ಆತ್ಮಹತ್ಯೆ

**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಲವ್, ಸೆಕ್ಸ್, ದೋಖಾ ಪ್ರಕರಣವೊಂದು ವರದಿಯಾಗಿದೆ. ಅಪ್ರಾಪ್ತೆಯೊಬ್ಬಳು ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ದಕ್ಷಿಣ ಕನ್ನಡ ಜಿಲ್ಲೆ ಬೆಳ್ತಂಗಡಿ ತಾಲೂಕಿನ ಮಿತ್ತಬಾಗಿಲು ಗ್ರಾಮದಲ್ಲಿ ಘಟನೆ ನಡೆದಿದ್ದು, 17ರ ಅಪ್ರಾಪ್ತೆ ಇಲಿ ಪಾಷಾಣ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ನ.20 ರಂದು ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಳು. ಚಿಕಿತ್ಸೆ ಫಲಕಾರಿಯಾಗದೇ ಆಸ್ಪತ್ರೆಯಲ್ಲಿ ಸಾವಿಗೀಡಾಗಿದ್ದಾಳೆ. ಪುತ್ರಿಯ ಸಾವಿಗೆ ಸಂಬಂಧಿ ಪ್ರವೀಣ್ ಚಾರ್ಮಾಡಿ ಕಾರಣ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ. ಹುಡುಗಿಗೆ ಸಂಬಂಧಿ ಪ್ರವೀಣ್ ಚಾರ್ಮಾಡಿ ಲವ್ ಆಗಿತ್ತು. ಮದುವೆ ಆಗುವುದಾಗಿ ಆಕೆ ಜೊತೆ ಲೈಂಗಿಕ ಸಂಪರ್ಕ ಕೂಡ ನಡೆಸಿದ್ದಾನೆ. ಬಳಿಕ ಮದುವೆ ಆಗುವುದಿಲ್ಲ ಎಂದು ದೋಖಾ ಮಾಡಿದ್ದಾನೆ. ಇದರಿಂದ ಆಕೆ ಆತ್ಮಹತ್ಯೆ ಮಾಡಿಕೊಂಡಿದ್ದಾಳೆಂದು ಕುಟುಂಬಸ್ಥರು ದೂರಿದ್ದಾರೆ. ಪ್ರಕರಣ ಸಂಬಂಧ ಬೆಳ್ತಂಗಡಿ ಪೊಲೀಸರು ಎಫ್‌ಐಆರ್ ದಾಖಲಿಸಿದ್ದಾರೆ.

## ನವಜಾತ ಶಿಶುಗಳ ಮರಣ ಪ್ರಮಾಣ ಏರಿಕೆ

### ಕ್ರಮಕ್ಕೆ ಜಿಲ್ಲಾಧಿಕಾರಿಗಳಿಗೆ ಆರೋಗ್ಯ ಸಚಿವರ ಖಡಕ್ ಸೂಚನೆ

**ದಾವಣಗೆರೆ:** ಮಧ್ಯಕರ್ನಾಟಕದ ಜಿಲ್ಲಾಸ್ಪತ್ರೆಗಳಲ್ಲಿ ನವಜಾತ ಶಿಶುಗಳ ಮರಣ ಪ್ರಮಾಣ ಏರಿಕೆ ಕಂಡಿದ್ದು, ಜಿಲ್ಲಾಧಿಕಾರಿಗಳಿಗೆ ಹಾಗೂ ಡಿಹೆಚ್‌ಓಗಳಿಗೆ ಆಸ್ಪತ್ರೆಗಳ ಮೇಲೆ ನಿಗಾವಹಿಸುವಂತೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಖಡಕ್ ಸೂಚನೆ ನೀಡಿದ್ದಾರೆ.

ದಾವಣಗೆರೆ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳ ಜೊತೆ ಅವರು ಸಭೆ ನಡೆಸಿದ್ದಾರೆ. ಈ ವೇಳೆ ನವಜಾತ ಶಿಶುಗಳ ಮರಣ ಹಾಗೂ ಬಾಣಂತಿಯರ ಸಾವಿನ ಬಗ್ಗೆ ತೀವ್ರ ನಿಗವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಕಳೆದ ಏಳು ತಿಂಗಳಲ್ಲಿ 135 ನವಜಾತು ಶಿಶುಗಳು ಹಾಗೂ 28 ತಾಯಂದಿರ ಸಾವಾಗಿದೆ. ಖಾಸಗಿ ಆಸ್ಪತ್ರೆಗಳಿಗಿಂತ, ಸರ್ಕಾರಿ ಜಿಲ್ಲಾಸ್ಪತ್ರೆಗಳಲ್ಲೇ ಮರಣ ಪ್ರಮಾಣ ಏರಿಕೆಯಾಗಿದೆ. ಪ್ರತಿ ತಿಂಗಳು 600 ರಿಂದ 700 ಹೆರಿಗೆ ಆಗುತ್ತಿರುವ ಜಿಲ್ಲಾಸ್ಪತ್ರೆಯಲ್ಲಿ ನವಜಾತ ಶಿಶುಗಳ ಸಾವಾಗುತ್ತಿದೆ. ಇನ್ನೂ ಕಡೇ ಕ್ಷಣದಲ್ಲಿ ತೀವ್ರ ತುರ್ತು ಸಂದರ್ಭಗಳಲ್ಲಿ ಬರುವುದರಿಂದ ಸಾವಿನ ಸಂಖ್ಯೆ ಹೆಚ್ಚಳವಾಗುತ್ತಿದೆ.

ಬಹುತೇಕ ಬಡವರೇ ಆಗಮಿಸುವ ಜಿಲ್ಲಾಸ್ಪತ್ರೆಗಳಲ್ಲಿ ನವಜಾತು ಶಿಶುಗಳ ಸಾವಿನ ಸಂಖ್ಯೆ ಏರಿಕೆಯಾಗಿದೆ. ಖಾಸಗಿ ಆಸ್ಪತ್ರೆಗಳಲ್ಲಿ ಸಿಜೇರಿಯನ್ ಪ್ರಮಾಣ ಗಣನೀಯವಾಗಿ ಏರಿಕೆಯಾಗಿದೆ. ಇನ್ನೂ ದಾವಣಗೆರೆ



ನಗರದ ಖಾಸಗಿ ಆಸ್ಪತ್ರೆಗಳಲ್ಲಿ 72%ನಷ್ಟು ಸಿಜೇರಿಯನ್ ನಡೆಯುತ್ತಿದೆ. ಈ ಎಲ್ಲಾ ವಿಚಾರವಾಗಿ, ಮಧ್ಯ ಕರ್ನಾಟಕದ ಹಾವೇರಿ, ಚಿತ್ರದುರ್ಗ, ವಿಜಯನಗರ ಹಾಗೂ ಬಳ್ಳಾರಿ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಚರ್ಚೆ ನಡೆಸಿದ್ದಾರೆ. ಅಲ್ಲದೇ ಪ್ರಾಥಮಿಕ ಹಾಗೂ ತಾಲೂಕು ಆಸ್ಪತ್ರೆಗಳಲ್ಲಿ ತೀವ್ರ ನಿಗಾವಹಿಸುವಂತೆ ಡಿಹೆಚ್‌ಓಗಳಿಗೆ ಖಡಕ್ ಸೂಚನೆ ನೀಡಿದ್ದಾರೆ.

### ನಾನು, ನನ್ನ ಮಗ ಜೈಲಿಗೆ ಹೋಗುವಂತಹ ತಪ್ಪು ಮಾಡಿಲ್ಲ

## ಹೆಚ್.ಡಿ.ರೇವಣ್ಣಗೆ ಜಿಟಿಡಿ ತಿರುಗೇಟು

**ಮೈಸೂರು:** ನಾನು ಮತ್ತು ನನ್ನ ಮಗ ಜೈಲಿಗೆ ಹೋಗುವಂತಹ ಯಾವ ತಪ್ಪು ಮಾಡಿಲ್ಲ ಎಂದು ಮಾಜಿ ಸಚಿವ ಹೆಚ್.ಡಿ.ರೇವಣ್ಣಗೆ ಮಾಜಿ ಸಚಿವ ಜಿ.ಟಿ.ದೇವೇಗೌಡ ತಿರುಗೇಟು ನೀಡಿದರು.

ಜಿ.ಟಿ.ದೇವೇಗೌಡ ಮತ್ತು ಅವರ ಮಗನನ್ನು ಕಾಂಗ್ರೆಸ್ ಸರ್ಕಾರ ಜೈಲಿಗೆ ಕಳುಹಿಸಲು ಮುಂದಾಗಿತ್ತು ಎಂಬ ಹೆಚ್.ಡಿ.ರೇವಣ್ಣ ಹೇಳಿಕೆಗೆ ಮೈಸೂರಿನಲ್ಲಿ ಜಿಟಿಡಿ ಟಾಂಗ್ ಕೊಟ್ಟರು. ಕ್ಷೇತ್ರದ ಜನರ ಸೇವೆ ಮಾಡುವುದು ಮಾತ್ರ ನನ್ನ ತಲೆಯಲ್ಲಿ ಇರುವುದು. ಅದು ಬಿಟ್ಟರೆ ನನ್ನ ತಲೆಯಲ್ಲಿ ಬೇರೆ ಯೋಚನೆ ಇಲ್ಲ. ನನ್ನ ತಂದೆ ಪಟೇಲರು. ಅವರ ಮೇಲೆ ಒಂದೇ ಒಂದು ಪೊಲೀಸ್ ಕೇಸ್ ಇರಲಿಲ್ಲ. ನಾನು ಸಾರ್ವಜನಿಕ ಜೀವನಕ್ಕೆ ಬಂದು 54 ವರ್ಷವಾಗಿದೆ. ನನ್ನ ಮೇಲೆ ಇದುವರೆಗೆ ಒಂದೇ ಒಂದು ಕೇಸ್ ಕೂಡ ಪೊಲೀಸ್ ಠಾಣೆಯಲ್ಲಿ ಇಲ್ಲ. ನನ್ನ ಮಗನ ಮೇಲೂ ಇಲ್ಲ ಎಂದು ಸ್ಪಷ್ಟಪಡಿಸಿದರು.



ರಾಜ್ಯ ಗೃಹ ಮಂಡಳಿ ಅಧ್ಯಕ್ಷನಾಗಿದ್ದಾಗ ಜೆಡಿಎಸ್ - ಕಾಂಗ್ರೆಸ್ ಇಬ್ಬರು ಸೇರಿ ಅದರಲ್ಲಿ ಅವ್ಯವಹಾರ ಆಗಿದೆ ಎಂದು ತನಿಖೆ ಮಾಡಿಸಿದ್ದರು ಅಷ್ಟೆ. ನಾನು ಇದುವರೆಗೆ ಯಾರಿಂದಲೂ ನನ್ನ ರಕ್ಷಣೆ ಮಾಡಿ ಎಂದು ದೂರವಾಣಿ ಕರೆ ಮಾಡಿಸಿಲ್ಲ. ಕುಮಾರಸ್ವಾಮಿಯಿಂದ ನಾನು ಯಾವುದೇ ಕರೆ ಮಾಡಿಸಿ ನನ್ನ ರಕ್ಷಣೆ ಮಾಡಿಸಿಕೊಂಡಿಲ್ಲ. ನಾನು ನನ್ನ ಮಗ ಬಂಧನವಾಗುವಂತಹ ಯಾವ ಅಪರಾಧವೂ ಮಾಡಿಲ್ಲ ಟಾಂಗ್ ಕೊಟ್ಟರು.

ರೇವಣ್ಣ ಅವರೇ ನನ್ನ ಕುಟುಂಬವೇ ಬೇರೆ ನಿಮ್ಮದೇ ಬೇರೆ. ನಾನು ಬೆಳೆದಿರುವ ಪರಿಸರವೇ ಬೇರೆ. ನಾನು ನನ್ನ ಮಗ ಯಾವತ್ತೂ ಆ ರೀತಿಯ ತಪ್ಪು ಮಾಡಿಲ್ಲ. ನಾನು ನನ್ನ ಮಗ ಯಾವ ಅಪರಾಧವೂ ಮಾಡಿಲ್ಲ. ಬಂಧಿಸುವಂತಹ ಪ್ರಶ್ನೆಯೆ ಬಂದಿಲ್ಲ. ಸಿದ್ದರಾಮಯ್ಯ ಸೇರಿದಂತೆ ಯಾವ ಸಿಎಂ ಕೂಡ ನನ್ನ ಬಂಧಿಸುವಂತೆ ಹೇಳಿಲ್ಲ. ಸಿದ್ದರಾಮಯ್ಯ ಸೇಡು ತೀರಿಸಿಕೊಳ್ಳಲು ರಾಜಕೀಯ ಮಾಡಿದ್ದಾರೆ. ಆದರೆ ಬಂಧಿಸುವಂತಹ ರೀತಿ ವರ್ತಿಸಿಲ್ಲ. ರೇವಣ್ಣ ಯಾಕೆ ಈ ರೀತಿ ಹೇಳಿದ್ರು ಗೊತ್ತಿಲ್ಲ. ವಿಧಾನಸಭೆ ಅಧಿವೇಶನದಲ್ಲಿ ಅವರು ಸಿಗುತ್ತಾರೆ. ಅವತ್ತೇ ಅವರ ಬಳಿ ಕೇಳಿ ಹೇಳುತ್ತೇನೆ. ನನ್ನ ವಿರುದ್ಧ ಯಾರೂ ಬಂಧಿಸುವಂತಹ ಸೇಡಿನ ರಾಜಕಾರಣ ಮಾಡಿಲ್ಲ. ನಾನು ಕೂಡ ಆ ರೀತಿ ನಡೆದುಕೊಂಡಿಲ್ಲ ಎಂದು ತಿಳಿಸಿದರು.

ಬಂಧನದ ಸೇಡನ್ನು ಯಾರು ಇಟ್ಟುಕೊಂಡಿಲ್ಲ. ನನ್ನ ತಂದೆ, ನಾನು ಮತ್ತು ನನ್ನ ಮಗ ಯಾವತ್ತೂ ಜೈಲಿಗೆ ಹೋಗುವ ಸ್ಥಿತಿ ಬಂದಿಲ್ಲ. ಮುಂದೆಯೂ ಅಂತಾ ಸ್ಥಿತಿ ಬರುವುದು ಬೇಡ ಅಂತಾ ಪ್ರಾರ್ಥಿಸುತ್ತೇನೆ. ಬಿ.ಎಸ್.ಯಡಿಯೂರಪ್ಪ ಅವರು ಸಿಎಂ ಆಗುವುದನ್ನು ತಪ್ಪಿಸಿದ್ದು ಹೆಚ್.ಡಿ.ರೇವಣ್ಣ. 20 ರಲ್ಲಿ ಬಿ.ಎಸ್.ಯಡಿಯೂರಪ್ಪ ಸಿಎಂ ಆಗಬೇಕಿತ್ತು. ಈ ಬಗ್ಗೆ ರೇವಣ್ಣ ಒಪ್ಪಿಕೊಂಡು ಕ್ಷಮೆ ಕೂಡ ಯಾಚಿಸಿದ್ದಾರೆ. ಅವರು ಡಿಸಿಎಂ ಆಗಬೇಕಿತ್ತು. ಅದು ಆಗುವುದಿಲ್ಲ ಅನ್ನೋ ಕಾರಣಕ್ಕೆ ತಪ್ಪಿಸಿದರು. ದೊಡ್ಡ ಗೌಡರ ಜೊತೆ ಮಾತನಾಡಿ ಯಡಿಯೂರಪ್ಪ ಅವರಿಗೆ ಸಿಎಂ ಸ್ಥಾನ ತಪ್ಪಿಸಿದರು ಎಂದರು.

ಇನ್ಮುಂದೆ ನಾನು ರಾಜಕೀಯವಾಗಿ ಯಾರ ವಿರುದ್ದವೂ ಮಾತನಾಡುವುದಿಲ್ಲ. ನನ್ನನ್ನು ಕಳ್ಳ ಅಂದರೂ ಸಹ ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ. ಇದೇ ಕೊನೆ ನಾನು ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ ಎಂದು ತಿಳಿಸಿದರು.

## ಚಂಡಮಾರುತದ ಪರಿಣಾಮ ತಮಿಳುನಾಡಿನಲ್ಲಿ ಮುಂದಿನ 3 ದಿನ ಧಾರಾಕಾರ ಮಳೆ, ರೆಡ್ ಅಲರ್ಟ್?

**ಚೆನ್ನೈ:** ಫೆಂಗಲ್ ಚಂಡಮಾರುತವು ತಮಿಳುನಾಡಿಗೆ ಅಪ್ಪಳಿಸಿದ್ದು, ಗುರುವಾರ ರಾತ್ರಿಯಿಂದಲೇ ಧಾರಾಕಾರ ಮಳೆ ಶುರುವಾಗಿದೆ. ಮುಂದಿನ 3 ದಿನಗಳ ಕಾಲ ತಮಿಳುನಾಡಿನ ಬಹುತೇಕ ಕಡೆ ಮಳೆಯಾಗುವ ಸಾಧ್ಯತೆ ಇದ್ದು, ರೆಡ್ ಅಲರ್ಟ್? ಘೋಷಿಸಲಾಗಿದೆ. ನೈಋತ್ಯ ಬಂಗಾಳಕೊಲ್ಲಿಯಲ್ಲಿನ ಆಳವಾದ ಖಿನ್ನತೆಯು ಸುಮಾರು ಉತ್ತರ-ವಾಯುವ್ಯದ ಕಡೆಗೆ ಚಲಿಸುತ್ತದೆ, ಶ್ರೀಲಂಕಾ ಕರಾವಳಿಯನ್ನು ದಾಟಿ ಚಂಡಮಾರುತವಾಗಿ ತೀವ್ರಗೊಳ್ಳುತ್ತದೆ ಎಂದು ಪ್ರಾದೇಶಿಕ ಹವಾಮಾನ ಕೇಂದ್ರದ ನಿರ್ದೇಶಕ ಎಸ್ ಬಾಲಚಂದ್ರನ್ ಹೇಳಿದ್ದಾರೆ.



ನವೆಂಬರ್ 30 ರ ಬೆಳಗಿನ ವೇಳೆಗೆ ಇದು ಕಾರೈಕಲ್ ಮತ್ತು ಮಹಾಬಲಿಪುರಂ ನಡುವೆ ಉತ್ತರ ತಮಿಳುನಾಡು-ಪುದುಚೇರಿ ಕರಾವಳಿಯನ್ನು ದಾಟಲಿದೆ. ನಾಗಪಟ್ಟಣಂನ ಆಗ್ನೇಯಕ್ಕೆ 300 ಕಿಮೀ, ಪುದುಚೇರಿಯ ಆಗ್ನೇಯಕ್ಕೆ 400 ಕಿಮೀ ಮತ್ತು ಚೆನ್ನೈನಿಂದ ಆಗ್ನೇಯಕ್ಕೆ 480 ಕಿಮೀ ದೂರದಲ್ಲಿರುವ ಆಳವಾದ ಖಿನ್ನತೆಯು ಇಂದು ರಾತ್ರಿ ಅಥವಾ ನಾಳೆ ಮುಂಜಾನೆ ಸೈಕ್ಲೋನಿಕ್ ಚಂಡಮಾರುತವಾಗಿ ಪರಿಣಮಿಸುತ್ತದೆ, ಆದರೆ ಕಾರೈಕಲ್ ಮತ್ತು ಕಾರೈಕಲ್ ನಡುವೆ ಕರಾವಳಿಯನ್ನು ದಾಟುವಾಗ ಆಳವಾದ ದುರ್ಬಲಗೊಳ್ಳುತ್ತದೆ.

ಚೆನ್ನೈ, ಚೆಂಗಲ್ಪಟ್ಟು, ಕಡಲೂರು, ಮೈಲಾಡುತುರೈ ಮತ್ತು ನಾಗಪಟ್ಟಿಣಂ ? ಇಂದು ನವೆಂಬರ್ 29 ರಂದು ಭಾರೀ ಮಳೆಯ ಎಚ್ಚರಿಕೆಯಿಂದಾಗಿ ಶಾಲೆಗಳನ್ನು ಮುಚ್ಚುವ ಸಾಧ್ಯತೆಯಿದೆ. ಚೆನ್ನೈ ಮತ್ತು ಚೆಂಗಲ್ಪಟ್ಟುಗಳಲ್ಲಿ ಶಾಲೆಗಳು ಮಾತ್ರ ಮುಚ್ಚಲ್ಪಡುತ್ತವೆ, ಇತರ ಜಿಲ್ಲೆಗಳಾದ ಕಡಲೂರು, ಮೈಲಾಡುತುರೈ, ನಾಗಪಟ್ಟಣಂ, ತಿರುವರೂರ್, ತಂಜಾವೂರು, ತಿರುವಳ್ಳೂರು, ವಿಲ್ಲುಪುರಂ ಮತ್ತು ಪುದುಚೇರಿಗಳಲ್ಲಿ ಕಾರೈಕಲ್ ಜೊತೆಗೆ ಇತರ ಶಿಕ್ಷಣ ಸಂಸ್ಥೆಗಳನ್ನು ಸಹ ಮುಚ್ಚಲಾಗುವುದು. ಪುದುಚೇರಿ ಮತ್ತು ಕಾರೈಕಲ್‌ನಲ್ಲಿ ಎಲ್ಲಾ ಸರ್ಕಾರಿ ಮತ್ತು ಸರ್ಕಾರಿ ಅನುದಾನಿತ ಶಾಲೆಗಳು, ಖಾಸಗಿ ಶಾಲೆಗಳು ಮತ್ತು ಕಾಲೇಜುಗಳು ನವೆಂಬರ್ 29 ಮತ್ತು 30 ರಂದು ಮುಚ್ಚಲ್ಪಡುತ್ತವೆ ಎಂದು ಶಿಕ್ಷಣ ಸಚಿವ ಎ ನಮಸ್ಸಿವಾಯಂ ತಿಳಿಸಿದ್ದಾರೆ.

ಮುಂದಿನ ಎರಡು ದಿನದಲ್ಲಿ ತೀವ್ರವಾಗಲಿರುವ ಚಂಡಮಾರುತವನ್ನು ಎದುರಿಸಲು ನೌಕಾಪಡೆ ಸಜ್ಜಾಗಿದೆ. ಪೂರ್ವ ನೌಕಾ ಕಮಾಂಡ್ ಪ್ರಧಾನ ಕಚೇರಿ, ತಮಿಳುನಾಡು ಮತ್ತು ಪುದುಚೇರಿ ನೌಕಾ ಕಚೇರಿಯ ಆದೇಶದಂತೆ ಈಗಾಗಲೇ ವಿಪತ್ತು ಪ್ರತಿಕ್ರಿಯೆ ಕಾರ್ಯವಿಧಾನಗಳನ್ನು ಸಕ್ರಿಯಗೊಂಡಿದೆ. ನೆರವು ಮತ್ತು ವಿಪತ್ತು ಪರಿಹಾರ, ಶೋಧ ಕಾರ್ಯಕ್ಕೆ ಪಡೆಗಳು ಸಜ್ಜಾಗಿವೆ.

ಹಾಗೆಯೇ, ತುರ್ತು ರಕ್ಷಣಾ ಕಾರ್ಯಾಚರಣೆಗಾಗಿ ಡೈವಿಂಗ್ ತಂಡಗಳು ಸನ್ನದ್ಧವಾಗಿವೆ. ಪಡೆಗಳು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಮಾರ್ಗಸೂಚಿ ಪ್ರಕಾರ ಕಾರ್ಯನಿರ್ವಹಿಸಲಿವೆ. ತುರ್ತು ಪರಿಸ್ಥಿತಿ ನಿರ್ವಹಿಸಲು ಆಹಾರ, ನೀರು ಮತ್ತು ಔಷಧಗಳಂತಹ ಅಗತ್ಯ ವಸ್ತುಗಳ ಪೂರೈಕೆ ಇದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

## ಆಪರೇಷನ್ ಆತಂಕ

ಅದೇನೇ ಇರಲಿ, ನಿಖಿಲ್ ಸೋಲಿನ ಬಳಿಕ ಜೆಡಿಎಸ್ ಆಂತರಿಕ ಸಂಘರ್ಷ, ಆಪರೇಷನ್ ವಿಚಾರ ಪಕ್ಷದ ವರಿಷ್ಠರಿಗೆ ತಲೆ ನೋವಾಗಿರುವುದು ಸುಳ್ಳಲ್ಲ.

## ಚಲುವರಾಯಸ್ವಾಮಿಗೂ ಸಂಕಷ್ಟ

ಮತ್ತು ನಂತರ ಅವರು ಕಚೇರಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಿದ್ದರು. ಬಳಿಕ, ಅಬಕಾರಿ ಇಲಾಖೆ ಅಧಿಕಾರಿಗಳು 40 ಲಕ್ಷ ರೂ. ಲಂಚದ ಬೇಡಿಕೆ ಇಟ್ಟಿದ್ದರು. ನಂತರ ಈ ಮೊತ್ತವನ್ನು 20 ಲಕ್ಷ ರೂ.ಗೆ ಇಳಿಕೆ ಮಾಡಲಾಗಿತ್ತು ಎಂದು ಪುನೀತ್ ಆರೋಪಿಸಿದ್ದಾರೆ.

ಲಂಚ ಕೇಳಿದ ಆರೋಪ ಸಂಬಂಧ ಅಬಕಾರಿ ಡಿಸಿ ರವಿಶಂಕರ್ ಹಾಗೂ ಇನ್ಸ್‌ಪೆಕ್ಟರ್ ಶಿವಶಂಕರ್ ವಿರುದ್ಧ ಪುನೀತ್ ಲೋಕಾಯುಕ್ತಕ್ಕೆ ಗುರುವಾರ ದೂರು ನೀಡಿದ್ದರು. ಜತೆಗೆ, ಆಡಿಯೋ ಸಾಕ್ಷ್ಯವನ್ನೂ ಸಲ್ಲಿಸಿದ್ದರು.

## ಸಂಪುಟ ಪುನಾರಚನೆ

**ಸಂಪುಟ ಪುನರ್ ರಚನೆಗೆ 'ಕೈ' ಕಮಾಂಡ್ ಬ್ರೇಕ್:** ಕರ್ನಾಟಕದಲ್ಲಿ ಸದ್ಯಕ್ಕೆ ಸಂಪುಟ ಪುನರ್ ರಚನೆ ಬೇಡ ಎಂದು ಹೈಕಮಾಂಡ್ ಹೇಳಿದೆ. ಉಳಿದಂತೆ ಖಾಲಿ ಉಳಿದಿರುವ ಸ್ಥಾನಗಳನ್ನು ತುಂಬಲು ಹಸಿರು ನಿಶಾನೆ ತೋರಿದೆ. ಬಿ. ನಾಗೇಂದ್ರರಿಂದ ತೆರವಾದ ಸ್ಥಾನಕ್ಕೆ ಭರ್ತಿಗೆ ಸೂಚಿಸಲಾಗಿದೆ. ಕೆಲವು ಸಚಿವರು ತಮ್ಮ ಖಾತೆ ನಿಭಾಯಿಸಲು ವಿಫಲರಾಗಿದ್ದು, ಅಂತಹ ಸಚಿವರ ಖಾತೆ ಅದಲು ಬದಲಾಗುವ ಸಾಧ್ಯತೆ ಇದೆ. ಇನ್ನೂ ಕೆಪಿಸಿಸಿ ಅಧ್ಯಕ್ಷರ ಬದಲಾವಣೆಗೆ ಹೈಕಮಾಂಡ್ ನಿರುತ್ಸಾಹ ತೋರಿದೆ. ಈಗ ಸ್ಥಾನ ಬದಲಾಯಿಸಿದರೆ ತಪ್ಪು ಸಂದೇಶ ರವಾನೆ ಸಾಧ್ಯತೆ ಇದೆ ಎಂಬುದರಿಂದ ಈ ನಿರ್ಧಾರಕ್ಕೆ ಬರಲಾಗಿದೆ.

ಏತನ್ಮಧ್ಯೆ, ಸಚಿವ ಸಂಪುಟ ಪುನಾರಚನೆ ಬಗ್ಗೆ ಸಚಿವ ಸತೀಶ್ ಜಾರಕಿಹೊಳಿ ಪ್ರತಿಕ್ರಿಯಿಸಿದ್ದಾರೆ. ಸಂಪುಟ ಪುನಾರಚನೆ ಮಾಡುವ ಅಧಿಕಾರ ನಮಗೆ ಇಲ್ಲ. ಪುನಾರಚನೆ ಮಾಡುತ್ತಾರೆ ಎಂಬ ಮಾಹಿತಿ ಇದೆ. ಏನಾಗುತ್ತದೆ ಎಂದು ಎಂಬುದು ಗೊತ್ತಿಲ್ಲ ಎಂದು ಅವರು ಹೇಳಿದ್ದಾರೆ.

**ದೆಹಲಿಯಲ್ಲಿಂದು ಕಾಂಗ್ರೆಸ್ ರಾಷ್ಟ್ರೀಯ ಕಾರ್ಯಕಾರಿಣಿ ಸಭೆ:** ದೆಹಲಿಯಲ್ಲಿಂದು ಎಐಸಿಸಿ ಕಚೇರಿಯಲ್ಲಿ ಕಾಂಗ್ರೆಸ್ ರಾಷ್ಟ್ರೀಯ ಕಾರ್ಯಕಾರಿಣಿ ಸಭೆ ನಡೆಯಲಿದೆ. ಸಭೆಯಲ್ಲಿ ಭಾಗಿಯಾಗಲು ಸಿಎಂ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ದೆಹಲಿಯಲ್ಲಿಯೇ ಬೀಡುಬಿಟ್ಟಿದ್ದಾರೆ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ಸಭೆ ನಡೆಯಲಿದೆ. ಪಕ್ಷ ಸಂಘಟನೆ, ಮುಂಬರುವ ರಾಜ್ಯಗಳ ಚುನಾವಣೆ ಸೇರಿದಂತೆ ಸಂಸತ್ ಚಳಿಗಾಲದ ಅಧಿವೇಶನದಲ್ಲಿ ಕಾಂಗ್ರೆಸ್ ವಿರೋಧ ಪಕ್ಷವಾಗಿ ಯಾವ ವಿಷಯಗಳನ್ನು ಪ್ರಸ್ತಾಪಿಸಿ ಹೋರಾಟ ಮಾಡಬೇಕು ಎಂಬ ವಿಷಯದ ಬಗ್ಗೆ ಚರ್ಚೆ ನಡೆಯಲಿದೆ. ಅಷ್ಟೇ ಅಲ್ಲದೆ ರಾಹುಲ್ ಗಾಂಧಿ ಪದೇ ಪದೇ ಪ್ರಸ್ತಾಪಿಸುತ್ತಿರುವ ಜಾತಿಗಣತಿಯ ವಿಚಾರವೂ ಕೂಡ ಕಾರ್ಯಕಾರಿಣಿಯಲ್ಲಿ ಚರ್ಚೆಗೆ ಬರಲಿದೆ. ಏನೇ ಇರಲಿ, ಕರ್ನಾಟಕದಲ್ಲಿ ಸಚಿವರಾಗಬೇಕೆಂದು ಆಸೆಯಿಂದ ಕಾಯುತ್ತಿದ್ದವರಿಗೆ ಕಾಂಗ್ರೆಸ್ ಹೈಕಮಾಂಡ್ ನಿರಾಸೆ ಮೂಡಿಸಿದೆ.

## ಆರೋಪಿ ಬಂಧನ

ಈ ಬಗ್ಗೆ ಪೊಲೀಸರಿಗೆ ಅನುಮಾನ ವ್ಯಕ್ತವಾಗಿ, ತನಿಖೆ ಆರಂಭಿಸಿದಾಗ, ಆರೋಪಿ ಅರ್ನಾಬ್ ಮಂಡಲ್ ಸೈಬರ್ ಸೆಂಟರ್‌ನಲ್ಲಿ ನಡೆಯುತ್ತಿರುವ ಅಕ್ರಮ ದಂಧೆ ಬಗ್ಗೆ ತಿಳಿದಿದೆ. ಖಚಿತ ಮಾಹಿತಿ ಪಡೆದುಕೊಂಡ ಪೊಲೀಸರು ಗುರುವಾರ ಸೈಬರ್ ಸೆಂಟರ್ ಮೇಲೆ ದಾಳಿ ಮಾಡಿದ್ದಾರೆ. ದಾಳಿ ವೇಳೆ ಸಾಕಷ್ಟು ನಕಲಿ ಆಧಾರ್ ಕಾರ್ಡ್ ಪತ್ತೆಯಾಗಿವೆ. ಹಾಗೆಯೇ 18 ಮನೆಗಳ ಬಾಡಿಗೆ ಅಗ್ರಿಮೆಂಟ್ ಪತ್ತೆಯಾಗಿವೆ.

ಆರೋಪಿಯನ್ನು ವಿಚಾರಣೆಗೆ ಒಳಪಡಿಸಿದಾಗ ಅರ್ನಾಬ್ ಮಂಡಲ್ 8 ಸಾವಿರ ರೂ.ಗೆ ನಕಲಿ ಗುರುತಿನ ಚೀಟಿಗಳನ್ನು ಮಾಡಿಕೊಡುತ್ತಿರುವುದಾಗಿ ಬಾಯಿಬಿಟ್ಟಿದ್ದಾನೆ.

ಈ ಬಗ್ಗೆ ಬೆಂಗಳೂರು ಗ್ರಾಮಾಂತರ ಎಸ್‌ಪಿ ಸಿ.ಕೆ.ಬಾಬಾ ಮಾತನಾಡಿ, ಬಾಂಗ್ಲಾ ಪ್ರಜೆಗಳಿಗೆ ಭಾರತದ ನಕಲಿ ಆಧಾರ್, ಐಡಿ ಕಾರ್ಡ್ ಮಾಡಿಕೊಡ್ತಿದ್ದನು. ಕಳೆದ ಒಂದು ವರ್ಷದಿಂದ ಇದೇ ರೀತಿ ನಕಲಿ ದಾಖಲೆ ಸೃಷ್ಟಿಸಿ ಕೊಡುತ್ತಿದ್ದನು. ಖಚಿತ ಮಾಹಿತಿ ಮೇರೆಗೆ ದಾಳಿ ಮಾಡಿ ಆರೋಪಿಯನ್ನು ಬಂಧಿಸಲಾಗಿದೆ. ಪೊಲೀಸರ ದಾಳಿ ವೇಳೆ ನಕಲಿ ದಾಖಲಾತಿಗಳನ್ನು ಜಪ್ತಿ ಮಾಡಲಾಗಿದೆ ಎಂದು ತಿಳಿಸಿದರು.

18 ಮನೆಗೆ ಸಂಬಂಧಿಸಿದ ಲೀಸ್ ಅಗ್ರಿಮೆಂಟ್, 55 ಆಧಾರ್ ಕಾರ್ಡ್, 40 ಬ್ಯಾಂಕ್ ದಾಖಲಾತಿ, 2 ಕಂಪ್ಯೂಟರ್, 2 ಮೊಬೈಲ್ ಜಪ್ತಿ ಮಾಡಲಾಗಿದೆ. ಒಂದು ಕಾರ್ಡ್ ಮಾಡಿಕೊಡಲು 8 ಸಾವಿರದಿಂದ 10 ಸಾವಿರ ರೂ. ಪಡೆಯುತ್ತಿದ್ದನು. ನಕಲಿ ಐಡಿ ಕಾರ್ಡ್‌ಗಳ ದಂಧೆಯಲ್ಲಿ ಇನ್ನೂ ಹಲವರು ಶಾಮೀಲಾಗಿದ್ದಾರೆ. ನಕಲಿ ಐಡಿ ಕಾರ್ಡ್‌ಗಳ ದಂಧೆ ಬಗ್ಗೆ ತನಿಖೆ ನಡೆಯುತ್ತಿದೆ ಎಂದರು.

## ಚಿರತೆ ಹಾವಳಿ

ಈ ವಿಚಾರ ಅರಣ್ಯ ಇಲಾಖೆ ಅಧಿಕಾರಿಗಳಿಗೆ ಮಾಹಿತಿ

### ಮೊದಲನೇ ಪುಟದಿಂದ...

ತಿಳಿಸಿದ್ದು ಅರಣ್ಯ ಇಲಾಖೆ ಅಧಿಕಾರಿಗಳು ಕಳೆದ ರಾತ್ರಿ ಚಿರತೆಗಾಗಿ ಹುಡುಕಾಟ ನಡೆಸಿದ್ದಾರೆ. ಆದ್ರೆ ರಾತ್ರಿ ಚಿರತೆ ಎಲ್ಲೂ ಸಹ ಪತ್ತೆ ಆಗಿಲ್ಲ. ಇನ್ನು ನಿಸರ್ಗ ಬಡಾವಣೆ ಸೇರಿದಂತೆ ಸುತ್ತಮುತ್ತ ಇರುವ ಎಲ್ಲಾ ಬಡಾವಣೆ ನಿವಾಸಿಗಳು ರಾತ್ರಿ ಸಮಯದಲ್ಲಿ ಒಬ್ಬೊಬ್ಬರೇ ಆಚೆ ಓಡಾಡಬೇಡಿ ಎಂದು ಅರಣ್ಯ ಇಲಾಖೆಯಿಂದ ಎಚ್ಚರಿಕೆ ನೀಡುತ್ತಿದ್ದಾರೆ.

ಜೊತೆಗೆ ಇತ್ತೀಚಿಗೆ ಬನ್ನೇರುಘಟ್ಟ ಕಾಡಂಚಿನ ಗ್ರಾಮ ಹಾಗೂ ಬಡಾವಣೆಗಳಲ್ಲಿ ಆದಷ್ಟು ಎಚ್ಚರಿಕೆಯಿಂದ ಇರಬೇಕು ಎಂದು ಅರಣ್ಯ ಇಲಾಖೆ ಅಧಿಕಾರಿಗಳು ಸೂಚನೆ ನೀಡುತ್ತಿದ್ದಾರೆ. ಇನ್ನು ರಾತ್ರಿ ಸಹ ಅರಣ್ಯ ಇಲಾಖೆ ಕಾರ್ಯಚರಣೆ ನಡೆಸಿದ್ದು, ಆದಷ್ಟು ಬೇಗ ಚಿರತೆ ಸೆರೆಹಿಡಿಯಲು ಹರಸಾಹಸ ಪಡುತ್ತಿದ್ದಾರೆ.

## 28 ಗರ್ಭಿಣಿಯರು ಸಾವು!

ಇನ್ನೂ ಜಿಲ್ಲೆಯ ಪ್ರಾಥಮಿಕ ಹಾಗು ತಾಲೂಕು ಆಸ್ಪತ್ರೆಗಳಲ್ಲಿ ತೀವ್ರ ನಿಗಾವಹಿಸುವಂತೆ ಡಿಹೆಚ್‌ಓ ಹಾಗೂ ಆರೋಗ್ಯ ಇಲಾಖೆ ಅಧಿಕಾರಿಗಳು ಸಭೆ ಮೇಲೆ ಸಭೆ ನಡೆಸುತ್ತಿದ್ದಾರೆ. ಗರ್ಭಿಣಿಯರ ಹಾಗೂ ನವಜಾತ ಶಿಶುಗಳ ಸಾವಿನ ಪ್ರಮಾಣ ಕಡಿಮೆ ಮಾಡಲು ಅಭಿಯಾನವನ್ನೇ ಹಮ್ಮಿಕೊಂಡಿದ್ದು, ಜಿಲ್ಲಾಸ್ಪತ್ರೆಯ ಮಹಿಳೆ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಸೌಲಭ್ಯಗಳ ಕೊರತೆ ಕೂಡ ಹೆಚ್ಚಿದೆ. ಅಲ್ಲದೆ ಜಿಲ್ಲೆಯ ಖಾಸಗಿ ಆಸ್ಪತ್ರೆಗಳಲ್ಲಿ ಕೂಡ ಸಿಜೇರಿಯನ್ ಡೆಲಿವರಿಗಳು ಶೇ.75ರಷ್ಟು ಜಾಸ್ತಿ ಇದೆ. ಅದರ ಬಗ್ಗೆ ಕ್ರಮ ವಹಿಸುವಂತೆ ಆರೋಗ್ಯ ಅಧಿಕಾರಿಗಳು ಸೂಚನೆ ನೀಡಿದ್ದಾರೆ.

ಒಟ್ಟಾರೆ ಕಳೆದ 7 ತಿಂಗಳಲ್ಲಿ ಗರ್ಭಿಣಿಯರ ಹಾಗೂ ನವಜಾತ ಶಿಶುಗಳ ಸಾವಿನ ಸಂಖ್ಯೆ ಹೆಚ್ಚಾಗಿದ್ದು, ಇದರ ಬಗ್ಗೆ ಆರೋಗ್ಯ ಇಲಾಖೆ ಎಚ್ಚರ ವಹಿಸಿದೆ. ಅಲ್ಲದೆ ಜಿಲ್ಲಾಸ್ಪತ್ರೆಯಲ್ಲಿ ಸರ್ಕಾರ ಇನ್ನು ಹೆಚ್ಚಿನ ಸೌಲಭ್ಯ ಒದಗಿಸಿದರೆ ಬಡ ರೋಗಿಗಳ ಜೀವ ಉಳಿಸಿದಂತಾಗುತ್ತದೆ.

## ದೇಸಿ ಬೆಳ್ಳುಳ್ಳಿ ದುಬಾರಿ

ಬಿಳಿ ಬಣ್ಣದಿಂದ ಕೂಡಿದ್ರೂ, ಬೆಳ್ಳುಳ್ಳಿ ಎಸಳುಗಳು ಕಾರ್ನರ್‌ಗಳಲ್ಲಿ ಗುಲಾಬಿ ಕೆಂಬಣ್ಣದಿಂದ ಕೂಡಿರಲಿದೆ. ಆದ್ರೆ ಈ ದಪ್ಪನೆಯ ಬೆಳ್ಳುಳ್ಳಿ ಶುಭ್ರ, ಬಿಳಿ ಬಣ್ಣದಿಂದ ಕೂಡಿದ್ದು, ವಾಸನೆ ರುಚಿ ಇಲ್ಲ, ದೇಸಿ ಬೆಳ್ಳುಳ್ಳಿಯಂತೆ ಘಾಟು ಸಹ ಇಲ್ಲ. ಇದ್ರಿಂದ ಇದು ಭಾರತ ನಿಷೇಧ ಮಾಡಿರೋ ಚೀನಾ ಬೆಳ್ಳುಳ್ಳಿ ಅನ್ನೋ ಅನುಮಾನ ಎಲ್ಲರನ್ನ ಕಾಡತೊಡಗಿದೆ. ಹಾಗಾಗಿ ಅಧಿಕಾರಿಗಳು ಸಹ ಈ ಬಗ್ಗೆ ಪರಿಶೀಲನೆ ನಡೆಸಿ ಕೂಡಲೇ ಕ್ರಮ ಕೈಗೊಳ್ತೇವೆ ಅಂತಿದ್ದಾರೆ.

ಒಟ್ಟಿನಲ್ಲಿ ಬೆಳ್ಳುಳ್ಳಿ ಬೆಲೆ ದುಬಾರಿಯಾಗಿದ್ದೇ ದೇಶಕ್ಕೆ ಚೀನಾ ಗಾರ್ಲಿಕ್ ಕಳ್ಳ ಮಾರ್ಗದಲ್ಲಿ ಎಂಟ್ರಿಯಾಗ್ತಿರೋ ಬಲವಾದ ಅನುಮಾನಗಳು ಮೂಡುತ್ತಿವೆ. ಸಗಟು ವ್ಯಾಪಾರಿಗಳು ಕಡಿಮೆ ಬೆಲೆ ಅಂತ ಚೈನೀಸ್ ಬೆಳ್ಳುಳ್ಳಿ ತಂದು ಮಾರಾಟ ಮಾಡ್ತಿದ್ದಾರೆ ಎನ್ನಲಾಗಿದೆ. ಹೀಗಾಗಿ ಸಂಬಂಧಪಟ್ಟ ಅಧಿಕಾರಿಗಳು ಭಾರತ ಬ್ಯಾನ್ ಮಾಡಿರೋ ರಾಸಾಯನಿಕಯುಕ್ತ ಕ್ಯಾನ್ಸರ್ ಕಾರಕ ಬೆಳ್ಳುಳ್ಳಿಗೆ ಬ್ರೇಕ್ ಹಾಕಬೇಕಿದೆ.

## ಪ್ರಕಟ ಸಾಧ್ಯತೆ

ತನ್ನಲ್ಲೇ ಉಳಿಸಿಕೊಳ್ಳುವ ಪ್ಲ್ಯಾನ್ ಮಾಡಿದೆ. ನಂತರದ ಸ್ಥಾನಗಳನ್ನು ಶಿವಸೇನೆ (ಶಿಂಧೆ ಬಣ) ಮತ್ತು ಎನ್‌ಸಿಪಿಗೆ ನೀಡುವ ನಿರೀಕ್ಷೆಯಿದೆ. ಸದ್ಯಕ್ಕೆ ಖಾತೆಗಳ ಬಗ್ಗೆ ಇನ್ನೂ ಚರ್ಚೆ ನಡೆದಿಲ್ಲವಾದರೂ ಗೃಹ ಮತ್ತು ನಗರಾಭಿವೃದ್ಧಿ ಇಲಾಖೆಗಳಿಗೆ ಮನವಿ ಮಾಡಿದ್ದಾರೆ. ಇಂದು ಹೆಚ್ಚಿನ ಚರ್ಚೆಗಾಗಿ ದೆಹಲಿಯಲ್ಲೇ ಉಳಿಯುವ ನಿರೀಕ್ಷೆಯಿದೆ, ಆದರೆ ಫಡ್ನವಿಸ್ ಮತ್ತು ಅಜಿತ್ ಪವಾರ್ ಮುಂಬೈಗೆ ಮರಳಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಬುಧವಾರ ಮಾಧಮಗಳೊಂದಿಗೆ ಮಾತನಾಡಿದ್ದ ಶಿಂಧೆ ಮಹಾಯುತಿ ಸರ್ಕಾರ ರಚನೆಗೆ ತಾನು ಅಡ್ಡಿಯಾಗುವುದಿಲ್ಲ ಮತ್ತು ಮುಖ್ಯಮಂತ್ರಿ ಆಯ್ಕೆಯ ಕುರಿತು ಬಿಜೆಪಿಯ ನಿರ್ಧಾರ ಒಪ್ಪಿಕೊಳ್ಳುತ್ತೇನೆ ಎಂದು ಹೇಳಿದ್ದರು.

ಇತ್ತೀಚೆಗೆ ನಡೆದ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಮಹಾಯುತಿ ಮೈತ್ರಿ ಕೂಟವು 288 ಸ್ಥಾನಗಳ ಪೈಕಿ 230 ಸ್ಥಾನಗಳನ್ನು ಗೆದ್ದು ಅಧಿಕಾರದ ಗದ್ದುಗೆ ಏರಿದೆ.

## ಟೆಂಡರ್

ಈಗಾಗಲೇ ಟೆಂಡರ್ ಕರೆಯಲಾಗಿದೆ. ಡಿಸೆಂಬರ್- 7 ರ ವರೆಗೆ ಟೆಂಡರ್‌ನಲ್ಲಿ ಭಾಗಿಯಾಗಲು ಅವಕಾಶ ನೀಡಲಾಗಿದೆ.

**ತಿಂಗಳಿಗೆ 75 ಕೋಟಿ ರೂ. ಆದಾಯ ನಿರೀಕ್ಷೆ:**

ಒಂದು ಬಸ್ ಸುತ್ತ ಜಾಹೀರಾತು ಅಳವಡಿಸಲು 12 ರಿಂದ 13 ಸಾವಿರ ರೂಪಾಯಿ ನಿಗದಿ ಮಾಡಲಾಗಿದೆ. ಮೂರು ಸಾವಿರ ಬಸ್?ಗಳಿಂದ ತಿಂಗಳಿಗೆ 3 ಕೋಟಿ ರೂಪಾಯಿಯಿಂದ 75 ಕೋಟಿ ರೂಪಾಯಿ ವರೆಗೆ ಆದಾಯವನ್ನು ನಿರೀಕ್ಷೆ ಮಾಡಿದ್ದೇವೆ ಎಂದು ಬಿಎಂಟಿಸಿಯ ಸಿಟಿಎಂಸಿ ನಾಗೇಂದ್ರ ತಿಳಿಸಿದ್ದಾರೆ.

ಬಿಎಂಟಿಸಿಯ 6 ಸಾವಿರಕ್ಕೂ ಹೆಚ್ಚಿನ ಬಸ್‌ಗಳ ಪೈಕಿ 3000 ಹವಾ ನಿಯಂತ್ರಿತವಲ್ಲದ ಬಸ್‌ಗಳಲ್ಲಿ, ಹೊಸ ರೂಪದಲ್ಲಿ ಜಾಹೀರಾತು ಪ್ರದರ್ಶನಕ್ಕೆ ಬಿಎಂಟಿಸಿ ಮುಂದಾಗಿದೆ.

**ಪ್ರಯಾಣಿಕರಿಂದ ವಿರೋಧ:** ಇತ್ತ ಬಿಎಂಟಿಸಿ ಹೊಸ ಜಾಹೀರಾತು ನೀತಿ ವಿರುದ್ಧ ಪ್ರಯಾಣಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಬಸ್ ತುಂಬಾ ಜಾಹೀರಾತುಗಳನ್ನು ಹಾಕಿದರೆ, ಬಿಎಂಟಿಸಿ ಬಸ್ ಯಾವುದು ಖಾಸಗಿ ಬಸ್ ಯಾವುದು ಎಂದು ಗೊತ್ತಾಗಲ್ಲ ಎಂದು ಕೆಲವು ಪ್ರಯಾಣಿಕರು ಅಭಿಪ್ರಾಯಪಟ್ಟಿದ್ದಾರೆ.

ಒಟ್ಟಿನಲ್ಲಿ ಆರ್ಥಿಕವಾಗಿ ಸಂಕಷ್ಟದಲ್ಲಿರುವ ಬಿಎಂಟಿಸಿ ಬಸ್‌ಗಳ ಮೇಲಿನ ಜಾಹೀರಾತುಗಳ ಮೂಲಕ ಭರ್ಜರಿ ಆದಾಯಕ್ಕೆ ಪ್ಲಾನ್ ಮಾಡಿಕೊಂಡಿದೆ. ಆದರೆ ಎಷ್ಟು ಕಂಪನಿಗಳು ಇದರಲ್ಲಿ ಭಾಗಿಯಾಗಲಿವೆ ಎಂದು ಕಾದು ನೋಡಬೇಕಿದೆ.

## ಪರದಾಟ

ಸಿ.ಟಿ ಸ್ಕ್ಯಾನ್ ಘಟಕ ಸ್ಥಾಪಿಸಿದೆ. ಕಳೆದ ಏಳು ವರ್ಷಗಳಿಂದಲೂ ಕೂಡ ಈ ಡಯಾಗ್ನೊಸ್ಟಿಕ್ ಸೆಂಟರ್ ಕಾರ್ಯನಿರ್ವಹಿಸುತ್ತ ಬಂದಿದೆ. ಆದರೆ, ಇದೀಗಾ ಸಿಮ್ಸ್ ಆಸ್ಪತ್ರೆಯಲ್ಲಿ ನೂತನವಾಗಿ ಸ್ಕ್ಯಾನಿಂಗ್ ಘಟಕ ಸ್ಥಾಪನೆ ಮಾಡಲಾಗಿದೆ. ಈ ಹಿನ್ನಲೆ ಚಾಮರಾಜನಗರ ಸಿಮ್ಸ್ ಆಸ್ಪತ್ರೆ ಡೀನ್ ಡಾ ಮಂಜುನಾಥ್ ಕ್ರಸ್ನಾ ಡಯಾಗ್ನೊಸ್ಟಿಕ್ ಸೆಂಟರ್‌ಗೆ ಸ್ಕ್ಯಾನ್ ಮಾಡಿಸಲು ರೆಫರ್ ಮಾಡದಂತೆ ವೈದ್ಯರಿಗೆ ಸೂಚಿಸಿದ್ದಾರೆಂಬ ಆರೋಪವಿದೆ. ಇದರಿಂದ ಸ್ಕ್ಯಾನಿಂಗ್ ಮಾಡಿಸುವ ರೋಗಿಗಳ ಸಂಖ್ಯೆಯಲ್ಲಿಯೂ ಕೂಡ ಗಣನೀಯ ಪ್ರಮಾಣದಲ್ಲಿ ಇಳಿಕೆಯಾಗಿದೆ. ಆದರೆ, ಕ್ರಸ್ನಾ ಡಯಾಗ್ನೊಸ್ಟಿಕ್‌ನಲ್ಲಿ ಉಚಿತವಾಗಿ ಸ್ಕ್ಯಾನಿಂಗ್ ನಡೆಸುತ್ತಾರೆ. ಉಚಿತ ಸೌಲಭ್ಯ ಇರುವಾಗ ನಾವು ಸ್ಕ್ಯಾನಿಂಗ್ ಮಾಡಿಸಲು ಹಣ ಯಾಕೆ ಕೊಡಬೇಕು ಎಂದು ರೋಗಿಗಳು ಪ್ರಶ್ನಿಸಿದ್ದಾರೆ.

ಜಿಲ್ಲಾಸ್ಪತ್ರೆಯಲ್ಲಿರುವ ಕ್ರಸ್ನಾ ಡಯಾಗ್ನೊಸ್ಟಿಕ್‌ನಲ್ಲಿ ಸ್ಕ್ಯಾನಿಂಗ್ ಮಾಡಿಸಲು ಯಾಕೆ ರೆಫರ್ ಮಾಡ್ತಿಲ್ಲವೆಂದು ಡೀನ್ ಅವರನ್ನೂ ಪ್ರಶ್ನಿಸಿದ್ದಾರೆ. ರೋಗಿಗಳು ಎರಡು ಕಡೆಯಲ್ಲಿ ಎಲ್ಲಿ ಬೇಕಾದರೂ ಕೂಡ ಸ್ಕ್ಯಾನಿಂಗ್ ಮಾಡಿಸಿಕೊಳ್ಳಬಹುದು. ಸಿಮ್ಸ್ ಆಸ್ಪತ್ರೆಯಲ್ಲಿರುವ ಸ್ಕ್ಯಾನಿಂಗ್ ಮೆಷಿನ್ ತುಂಬಾ ಅಡ್ವಾನ್ಸ್ ಆಗಿದೆ. ಆದರಿಂದ ಅಲ್ಲಿಗೆ ರೆಫರ್ ಮಾಡಿರಬಹುದು ಆಸ್ಪತ್ರೆಯವರು ಹೇಳುತ್ತಿದ್ದಾರೆ.

ಪಿಪಿಪಿ ಯೋಜನೆಯಡಿ ಕಳೆದ 7 ವರ್ಷದಿಂದ ಕ್ರಸ್ನಾ ಡಯಾಗ್ನೊಸ್ಟಿಕ್ ರಾಜ್ಯದ 14 ಕಡೆಗಳಲ್ಲಿ ಕಾರ್ಯನಿರ್ವಹಿಸ್ತಿದೆ. ಉಚಿತವಾಗಿ ಸ್ಕ್ಯಾನಿಂಗ್ ಮಾಡಿಸಲು ರೋಗಿಗಳಿಗೆ ನೆರವಾಗಿದೆ. ರೋಗಿಗಳು ತಮಗಿಷ್ಟ ಬಂದ ಕಡೆ ಸ್ಕ್ಯಾನಿಂಗ್ ಮಾಡಿಸಲು ಮುಕ್ತ ಅವಕಾಶ ಕಲ್ಪಿಸುವಂತೆ ಡೀನ್ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

## ನಿರ್ಗಮಿತ ಮುಖ್ಯಾಧಿಕಾರಿಗಳ ಸಹಿತ 8 ಮಂದಿ ಮೇಲೆ ಎಫ್ ಐ ಆರ್

# ಹನೂರು ಪಪಂನಲ್ಲಿ ನಕಲಿ ದಾಖಲೆ ಸೃಷ್ಟಿಸಿ ಆಸ್ತಿ ಮಾರಾಟ

ಚಾಮರಾಜನಗರ ನ 28. ಆಶ್ರಯ ಯೋಜನೆಯಡಿ ಮಂಜೂರಾಗಿದ್ದ ನಿವೇಶನ ಹಾಗೂ ಅದರಲ್ಲಿ ನಿರ್ಮಿಸಿದ್ದ ಮನೆ ಸಮೇತ ಅನ್ಯರಿಗೆ ಶುದ್ಧ ಕ್ರಯಕ್ಕೆ ಮಾರಾಟ ಮಾಡಿದ್ದ ಮೂಲ ಫಲಾನುಭವಿ ನಂತರದಲ್ಲಿ ಅದೇ ಸ್ಥಳಕ್ಕೆ ನಕಲಿ ದಾಖಲೆ ಸೃಷ್ಟಿಸಿ ತನ್ನ ಹೆಸರಿಗೆ ಅಕ್ರಮ ಖಾತೆ ಮಾಡಿಸಿಕೊಂಡು ತನ್ನ ಪುತ್ರನ ಹೆಸರಿಗೆ ನಕಲಿ ನೋಂದಣಿ ದಾನ ಪತ್ರ ಮಾಡಿಸಿ ಅನ್ಯರಿಗೆ ಮಾರಾಟ ಮಾಡಲು ಯತ್ನಿಸಿದ್ದ ಪ್ರಕರಣ ನ್ಯಾಯಾಲಯದ ಮೆಟ್ಟಲೇರಿದ್ದು ಉಪನೋಂದಣಾಧಿಕಾರಿ ಹಾಗೂ ಇಬ್ಬರು ಪಟ್ಟಣ ಪಂಚಾಯ್ತಿ ಮುಖ್ಯಾಧಿಕಾರಿಗಳು ಸೇರಿದಂತೆ ಎಂಟು ಜನರ ವಿರುದ್ಧ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಿಸಿ ಸಂಪೂರ್ಣ ತನಿಖೆ ನಡೆಸಿ ವರದಿ ನೀಡುವಂತೆ ನ್ಯಾಯಾಲಯ ಆದೇಶ ನೀಡಿದೆ.

ಚಾಮರಾಜನಗರ ಜಿಲ್ಲೆಯ ಹನೂರು ಪಟ್ಟಣದ ವಿನಾಯಕನಗರದ ಡಾಕ್ಟರ್ ಬೀದಿಯ ನಿವಾಸಿಗಳಾದ ಗೋವಿಂದೇಗೌಡ ಅಲಿಯಾಸ್ ಗೋವಿಂದ ಈತನ ಪುತ್ರ ಮಹಾದೇವಸ್ವಾಮಿ, ಈತನ ಅಣ್ಣನ ಪುತ್ರ ಮಂಜೇಶ್ ಹಾಗೂ ಆರ್ ಎಸ್ ದೊಡ್ಡಿ ಹೊಸ ಬಡಾವಣೆಯ ನಿವಾಸಿ ಅಕ್ಕನ ಮಗ ಮಹಾದೇಶ್ ಎಂ, ಉಪನೋಂದಣಾಧಿಕಾರಿ ಬಿ.ಆರ್. ಉಷಾ, ನಿರ್ಗಮಿತ ಮುಖ್ಯಾಧಿಕಾರಿಗಳಾದ ಮೂರ್ತಿ. ಪರಶಿವಯ್ಯ ಪತ್ರ ಬರಹಗಾರ ಎಂ.ನಟರಾಜನ್‌ರವರುಗಳ ವಿರುದ್ಧ ನ್ಯಾಯಾಲಯದ ಆದೇಶದನ್ವಯ ಹನೂರು ಪೊಲೀಸ್ ಠಾಣೆಯಲ್ಲಿ ಕಲಂ 166, 167, 405, 420, 463, 464, 465, 468, 470, ಸಹವಾಚಕ ಕಲಂ 34 ರಡಿಯಲ್ಲಿ ಕ್ರಿಮಿನಲ್ ಪ್ರಕರಣ ದಾಖಲಾಗಿದೆ.

ಚಾಮರಾಜನಗರ ಜಿಲ್ಲೆಯ ಹನೂರು ಪಟ್ಟಣದದ ಆರ್. ಎಸ್.ದೊಡ್ಡಿ ಗ್ರಾಮದಲ್ಲಿ ಆಶ್ರಯ ಯೋಜನೆಯಡಿ 1992 ರಲ್ಲಿ ಗೋವಿಂದೇಗೌಡನಿಗೆ 30/40 ಅಡಿಗಳ ನಿವೇಶನ ಮಂಜೂರಾಗಿತ್ತು. ಸದರಿ ನಿವೇಶನದಲ್ಲಿ ಪುಟ್ಟ ಮನೆಯನ್ನು ನಿರ್ಮಿಸಿದ್ದನು. ಇದಾದ ತರುವಾಯ 10-7-2013 ರಲ್ಲಿ ಸದರಿ ಮನೆ ಹಾಗೂ ಉಳಿಕೆ ನಿವೇಶನ ಸಹಿತ 2,15,000 ಸಾವಿರ ರೂಗಳಿಗೆ ಗೋವಿಂದೇಗೌಡ ತನ್ನ ಪತ್ನಿ ಸುವರ್ಣಮ್ಮ ಹಾಗೂ ಪುತ್ರ ಮಹಾದೇವಸ್ವಾಮಿರಾದಿಯಾಗಿ ನೋಂದಾಯಿತ ಕ್ರಯಪತ್ರಕ್ಕೆ ಸಹಿ ಮಾಡಿಸಿ ಕೂಲಿ ಜೀವನ ಸಾಗಿಸುತ್ತಿದ್ದ ಬಡ ಮಹಿಳೆ ಪುದುರಾಮಾಪುರದ ರತ್ನಮ್ಮ ಎಂಬುವರಿಗೆ ಹನೂರಿನ ಉಪ ನೋಂದಣಾಧಿಕಾರಿ ಕಛೇರಿಯಲ್ಲಿ ನೋಂದಣಿ ಮಾಡಿಸಿ ಮಾರಾಟ ಮಾಡಿರುತ್ತಾರೆ.

ಇದಾದ ತರುವಾಯ ರತ್ನಮ್ಮ ತನ್ನ ಹೆಸರಿಗೆ ಖಾತೆ ಬದಲಾವಣೆ ಮಾಡಿಸಿಕೊಂಡು ಸದರಿ ಮನೆ ನಿವೇಶನದಲ್ಲಿ ಸ್ವಾಧೀನ ಅನುಭವದಲ್ಲಿದ್ದು ವಾಸಿಸುತ್ತಿರುತ್ತಾರೆ. ಈ ನಡುವೆ ಮೂಲ ಮಾಲೀಕ ಸತ್ಯಾಂಶವನ್ನು ಮರೆಮಾಚಿ ತಾನು ಮಾರಾಟ ಮಾಡಿರುವುದನ್ನು ಮುಚ್ಚಿಟ್ಟು ಅಂದಿನ ಮುಖ್ಯಾಧಿಕಾರಿ ಮೂರ್ತಿಗೆ ಸಾಕಷ್ಟು ಲಂಚ ನೀಡಿ, ಮಾರಾಟ ಮಾಡಿದ್ದ ಮನೆ ನಿವೇಶನವನ್ನು ಅಲ್ಲೆ ನಿಂತು ತನ್ನದೆಂಬಂತೆ ಜಿಪಿಎಸ್ ಫೋಟೋ ತೆಗೆದು ನಕಲಿ ದಾಖಲೆ ಸೃಷ್ಟಿಸಿ ಮತ್ತೊಮ್ಮೆ ತನ್ನ ಹೆಸರಿಗೆ ಮರು ಅಕ್ರಮ ಖಾತೆ ಹಾಗೂ ಇ-ಸ್ವತ್ತು ಮಾಡಿಸಿಕೊಂಡು ಅದನ್ನು ಪತ್ರ ಬರಹಗಾರ ನಟರಾಜ್ ಬಳಿ ನಕಲಿ ದಾನ ಪತ್ರವನ್ನು ತನ್ನ ಖಾಸಾ ಪುತ್ರನಾದ ಮಹಾದೇವಸ್ವಾಮಿ ಎಂಬಾತನ ಹೆಸರಿಗೆ ಬರೆಯಿಸಿ, ನಕಲಿಯಾಗಿ ಸೃಷ್ಟಿಸಿದ್ದ ದಾನ ಪತ್ರಕ್ಕೆ ಅನ್ಯರಿಂದ ಸಹಿ ಮಾಡಿಸಿದರೆ ಸತ್ಯ ಗೊತ್ತಾಗುತ್ತದೆಂದು ತನ್ನ ಅಣ್ಣನ ಮಗನಾದ ಮಂಜೇಶ ಹಾಗೂ ಅಕ್ಕನ ಮಗನಾದ ಮಹಾದೇಶ್ ಎಂ. ಎಂಬುವರುಗಳಿಂದ ಸಾಕ್ಷಿಗಳನ್ನಾಗಿ ಸಹಿ ಮಾಡಿಸಿ ನಕಲಿಯಾಗಿ ಸೃಷ್ಟಿಸಿರುವ ದಾನ ಪತ್ರವನ್ನು ಉಪನೋಂದಣಾಧಿಕಾರಿ ಉಷಾರಿಗೆ ಯಥೇಚ್ಚ ಲಂಚ ನೀಡಿ 25-11-2021 ರಂದು ನೋಂದಣಿ ಮಾಡಿಸಿಕೊಳ್ಳುವಲ್ಲಿ ಯಶಸ್ವಿಯಾಗುತ್ತಾನೆ. ಮೂಲ ನೋಂದಣಿ ದಾಖಲೆ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ಲಭ್ಯವಿದ್ದು ಇದು ನಕಲಿ ಎಂದು ಕಂಡು ಬಂದಿದ್ದರೂ ಅದನ್ನು ಲೆಕ್ಕಿಸದೆ ಹಣದಾಸೆಯಿಂದ ಉಪನೋಂದಣಾಧಿಕಾರಿ ಉಷಾ ಸಗಣಿ ತಿನ್ನುವ ಕೆಲಸ ಮಾಡಿ ಸಿಕ್ಕಿ ಬಿದ್ದಿರುವುದು ಇಲ್ಲಿ ಸ್ಪಷ್ಟವಾಗಿದೆ.

ಇದಾದ ಬಳಿಕ ಪಟ್ಟಣ ಪಂಚಾಯ್ತಿಗೆ ಅರ್ಜಿ ಸಲ್ಲಿಸಿದಾಗ ಆ ಸಂದರ್ಭದಲ್ಲಿ ಇದ್ದ ಮುಖ್ಯಾಧಿಕಾರಿ ಪರಶಿವಯ್ಯ ಲಂಚದಾಸೆಗೆ ಬಲಿ ಬಿದ್ದು ಹಿಂದಿನ ಕಡತಗಳನ್ನು ಪರಿಶೀಲಿಸದೆ ಸ್ಥಳಕ್ಕೆ ತೆರಳಿ ನೋಡದೆ ಕುಂತಲ್ಲೇ ಏಕಾಏಕಿ ಮಹಾದೇವಸ್ವಾಮಿ ಹೆಸರಿಗೆ ಖಾತಾ ಬದಲಾವಣೆ ಮಾಡಿ ಇ-ಸ್ವತ್ತನ್ನು ಕೊಟ್ಟು ಬಿಡುತ್ತಾರೆ, ನಂತರಸದರಿ ನಕಲಿ ದಾಖಲೆಗಳನ್ನಿಟ್ಟುಕೊಂಡು ಮಾರಾಟ ಮಾಡಿದ್ದ ಮನೆ ನಿವೇಶನವನ್ನು ಮತ್ತೊಬ್ಬರಿಗೆ ಮಾರಾಟ ಮಾಡಲು ಕರೆದುಕೊಂಡು ಹೋಗಿ ತೋರಿಸುತ್ತಿದ್ದಾಗ ಮನೆಯಲ್ಲಿದ್ದ ರತ್ನಮ್ಮನಿಗೆ ಗೊತ್ತಾಗಿ ಪಂಚಾಯ್ತಿ ಪೊಲೀಸ್ ಠಾಣೆಗಳಲ್ಲೂ ನ್ಯಾಯ ಸಿಗದಾಗ ಕೊನೆಯದಾಗಿ ನೊಂದ ಮಹಿಳೆ ವಕೀಲ ಅಂತೋಣಿ ರಾಜ್ ಮೂಲಕ ಈ ಎಂಟು ಮಂದಿ ವಿರುದ್ಧ ಅವರು ನಡೆಸಿರುವ ಅಕ್ರಮಕ್ಕೆ ಪೂರಕವಾದ ಸಮಗ್ರ ದಾಖಲೆಗಳೊಂದಿಗೆ ಅಪರ ಸಿವಿಲ್ ಜೆ.ಎಂ.ಎಫ್.ಸಿ ನ್ಯಾಯಾಲಯಕ್ಕೆ 5-3-2024 ರಂದು ಪಿಸಿಆರ್ ಸಂಖ್ಯೆ 23 ರಂತೆ ಖಾಸಗಿ ದೂರು ಸಲ್ಲಿಸುತ್ತಾರೆ.

ಅಲ್ಲಿಂದ ಹಲವಾರು ಭಾರಿ ವಿಚಾರಣೆ ನಡೆಸಿದ ನ್ಯಾಯಾಧೀಶೆ ನಂದಿನಿಯವರು ಅಕ್ರಮಕ್ಕೆ ಪೂರಕವಾದ ದೃಢೀಕೃತ ದಾಖಲೆಗಳನ್ನು ಪರಿಗಣನೆಗೆ ತೆಗೆದುಕೊಂಡು ವಕೀಲರ ವಾದವನ್ನು ಆಲಿಸಿ ಮೇಲ್ನೋಟಕ್ಕೆ ಆರೋಪಿಗಳೆಲ್ಲಾ ಶಾಮೀಲಾಗಿ ಅಕ್ರಮ ನಡೆಸಿರುವುದು ಕಂಡು ಬಂದ ಹಿನ್ನೆಲೆಯಲ್ಲಿ 8 ತಿಂಗಳ ತರುವಾಯ ದಿನಾಂಕ 14-11-2024 ಆದೇಶ ನೀಡಿದ್ದು ಆರೋಪಿತರೆಲ್ಲರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ ಪ್ರಕರಣದ ಸಮಗ್ರ ವಿಚಾರಣೆ ನಡೆಸಿ ಅಂತಿಮ ವರದಿ ನೀಡುವಂತೆ ಹನೂರು ಪೊಲೀಸರಿಗೆ ನೀಡಿದ್ದ ಆದೇಶದ ಮೇರೆಗೆ ಅಪರಾಧ ಸಂ: 244/2024 ರಂತೆ ದಿ : 23-11-20145 ರಂದು ಪ್ರಕರಣ ದಾಖಲಿಸಿಕೊಂಡ ಪೊಲೀಸರು ಇದೀಗ ತನಿಖೆ ಕೈಗೊಂಡಿದ್ದಾರೆ.

## ನಾಳೆ ವಿಚಾರ ಸಂಕಿರಣ

**ಚಾಮರಾಜನಗರ:** ಕರ್ನಾಟಕ ಸಾಹಿತ್ಯ ಅಕಾಡೆಮಿ ವತಿಯಿಂದ ಸಾಹಿತ್ಯಕ್ಕೆ ಚಾಮರಾಜನಗರ ಪ್ರಾಂತ್ಯದ ಕೊಡುಗೆ ಕುರಿತು ವಿಚಾರ ಸಂಕಿರಣವನ್ನು ನವೆಂಬರ್ 30ರಂದು ಬೆಳಿಗ್ಗೆ 10 ಗಂಟೆಗೆ ನಗರದ ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಜೆ.ಹೆಚ್ ಪಟೇಲ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ. ಹಿರಿಯ ಸಾಹಿತಿಗಳಾದ ಕೆ. ವೆಂಕಟರಾಜು ಅವರು ಕಾರ್ಯಕ್ರಮ ಉದ್ಘಾಟಿಸುವರು. ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸಿ. ಮಂಜುನಾಥ ಪ್ರಸನ್ನ (ಮಂಜು ಕೋಡಿಉಗನೆ) ಅವರು ಅಧ್ಯಕ್ಷತೆ ವಹಿಸುವರು. ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯರಾದ ಪ್ರಕಾಶರಾಜ್ ಮೇಹು ಅವರು ಪ್ರಾಸ್ತಾವಿಕ ನುಡಿಗಳನ್ನಾಡುವರು. ಕಥೆಗಾರರಾದ ಸ್ವಾಮಿ ಪೊನ್ನಾಚಿ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಬೆಳಿಗ್ಗೆ 11.30 ಗಂಟೆಗೆ ಹಿರಿಯ ಸಾಹಿತಿಗಳಾದ ಪ್ರೊ. ಮಹದೇವ ಶಂಕನಪುರ ಅವರಿಂದ ಜನಪದ ಮಹಾಕಾವ್ಯಗಳು, ಕವಿಗಳಾದ ಡಾ. ನಂಜುಂಡಸ್ವಾಮಿ ಹರದನಹಳ್ಳಿ ಅವರಿಂದ ಆಧುನಿಕ ಕಾವ್ಯ ಕುರಿತ ವಿಚಾರಗೋಷ್ಠಿ ನಡೆಯಲಿದೆ. ಸಿ.ಎಂ ನರಸಿಂಹಮೂರ್ತಿ ಅವರಿಂದ ಜನಪದ ಕಾವ್ಯ-ಶ್ರಾವ್ಯ ಗಾಯನ ನಡೆಯಲಿದೆ. ಮಧ್ಯಾಹ್ನ 2 ಗಂಟೆಗೆ ಕೃಷಿಕರು ಮತ್ತು ಸಂಸ್ಕೃತಿ ಚಿಂತಕರಾದ ಚೆನ್ನಸ್ವಾಮಿ ವಡ್ಡಗೆರೆ ಅವರಿಂದ ಸಣ್ಣ ಕಥೆಗಳು, ಚಾಮರಾಜನಗರ ಕನ್ನಡ ವಿಭಾಗದ ಮುಖ್ಯಸ್ಥರಾದ ಪ್ರೊ. ಎ.ಎಂ ಶಿವಸ್ವಾಮಿ ಅವರಿಂದ ಕಾದಂಬರಿಗಳು ಕುರಿತ ವಿಚಾರಗೋಷ್ಠಿ ನಡೆಯಲಿದೆ. ವಿಮರ್ಶಕರಾದ ಹೊರೆಯಾಲ ದೊರೆಸ್ವಾಮಿ ಅವರು ಸಮನ್ವಯ ನಿರ್ವಹಿಸಲಿದ್ದಾರೆ. ಸಂಜೆ 4 ಗಂಟೆಗೆ ಸಮಾರೋಪ ಸಮಾರಂಭ ನಡೆಯಲಿದೆ. ಕವಿಗಳು ಮತ್ತು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಪ್ರೊ. ಎಸ್.ಜಿ ಸಿದ್ದರಾಮಯ್ಯ ಅವರು ಸಮಾರೋಪ ನುಡಿಗಳನ್ನಾಡುವರು, ಕರ್ನಾಟಕ ಸಾಹಿತ್ಯ ಅಕಾಡೆಮಿ ಅಧ್ಯಕ್ಷರಾದ ಎಲ್. ಎನ್ ಮುಕುಂದರಾಜ್ ಅವರು ಅಧ್ಯಕ್ಷತೆ ವಹಿಸುವರು. ಜಿಲ್ಲಾಧಿಕಾರಿಯವರಾದ ಶಿಲ್ಪಾ ನಾಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್, ಕಥೆಗಾರರಾದ ಹನೂರು ಚನ್ನಪ್ಪ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.

## ವಿದ್ಯಾರ್ಥಿಗಳಿಗೆ ವಸತಿ ನಿಲಯಗಳಲ್ಲಿ ಓದುವ ಕೊಠಡಿಗಳ ವ್ಯವಸ್ಥೆ ಒದಗಿಸಿ

**ಬೆಂಗಳೂರು:** ಜಿಲ್ಲೆಯಲ್ಲಿ ಇರುವ ಎಲ್ಲ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಓದಲು ಅನುಕೂಲವಾಗುವಂತೆ ಓದುವ ಕೊಠಡಿ ಸ್ಥಳವನ್ನು ಕಲ್ಪಿಸಿ ವಿದ್ಯಾರ್ಥಿಗಳು ಗುಣಮಟ್ಟದ ಶಿಕ್ಷಣ ಪಡೆಯುವಂತೆ ಸಹಕರಿಸಿ ಎಂದು ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಹಾಗೂ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಹರ್ಷಗುಪ್ತ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಇಂದು ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾ ಪಂಚಾಯಿತಿ ಹಾಗು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು ಮತ್ತು ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಹಿಂದುಳಿದ ವರ್ಗಗಳು ಮತ್ತು ಪರಿಶಿಷ್ಟ ಜಾತಿ/ಪಂಗಡಗಳ ವಸತಿನಿಲಯಗಳಲ್ಲಿ ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿಗಳು ಹೆಚ್ಚಾಗಿದ್ದು, ಇಂಜಿನಿಯರಿಂಗ್ ಮತ್ತು ವೈದ್ಯಕೀಯ ವಿದ್ಯಾರ್ಥಿಗಳಿಗೆ ಓದಲು ಸ್ಥಳವಾಕಾಶ ಇಲ್ಲದ ದೂರುಗಳು ಕೇಳಿಬರುತ್ತಿರುವುದರಿಂದ ಹಾಸ್ಟೆಲ್ ನ ಮಹಡಿಯಲ್ಲಿ ಶೇಡ್ ಮಾದರಿಯಲ್ಲಿ ಪ್ರತ್ಯೇಕ ವಾಗಿ ವಿದ್ಯಾರ್ಥಿಗಳು ಓದಲು ಅನುಕೂಲವಾಗುವಂತೆ ವ್ಯವಸ್ಥೆ ಮಾಡಿ ಎಂದು ಅಧಿಕಾರಿಗಳಿಗೆ ಹೇಳಿದರು. ಕಳೆದ ವರ್ಷ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಶೇ. 80 ರಿಂದ 83 ರಷ್ಟು ಫಲಿತಾಂಶ ದೊರೆತ್ತಿದ್ದು, ಈ ಬಾರಿ ಶೇಕಡ 100 ರಷ್ಟು ಫಲಿತಾಂಶವನ್ನು ಸಾಧಿಸಲು ಶಿಕ್ಷಕರು ವಿಶೇಷ ತರಗತಿಗಳನ್ನು ತೆಗೆದುಕೊಂಡು ಗುಣಮಟ್ಟದ ಶಿಕ್ಷಣ ನೀಡುವಂತೆ ಕ್ರಮ ವಹಿಸಿ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಗೆ ಸೂಚಿಸಿದರು. ಗಣ್ಯ ಅಥಿತಿಗಳ ಆಗಮನ ಸಂದರ್ಭಗಳಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಇರುವ ಸಿಬ್ಬಂದಿಗಳನ್ನು ನಿಯೋಜಿಸುವುದರಿಂದ ಆರೋಗ್ಯ ಕೇಂದ್ರಗಳಲ್ಲಿ ಸ್ಟಾಫ್ ನರ್ಸ್ ಸಿಬ್ಬಂದಿ ಕೊರತೆ ಉಂಟಾಗುತ್ತಿದ್ದು, ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಸಿಬ್ಬಂದಿಗಳನ್ನು ನಿಯೋಜಿಸಿಕೊಳ್ಳಲು ಅನುವು ಮಾಡಿಕೊಡಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿಗಳು ಮನವಿ ಮಾಡಿದರು. ಸಭೆಯಲ್ಲಿ ಬೆಂಗಳೂರು ನಗರ ಜಿಲ್ಲಾಧಿಕಾರಿಯಾದ ಜಿ ಜಗದೀಶ್, ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕಧಿಕಾರಿಗಳಾದ ಕೆ.ಎಸ್ ಲತಾಕುಮಾರಿ, ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿಯ ಉಪ ಕಾರ್ಯದರ್ಶಿಗಳಾದ ಅನಿತಾ, ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿಯ ಯೋಜನಾ ನಿರ್ದೇಶಕರಾದ ಮೋಹನ್ ಕುಮಾರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಹಿರಿಯ ಸಿವಿಲ್ ನ್ಯಾಯಾಧೀಶ ಈಶ್ವರ್ ಹೇಳಿಕೆ

# ಬಾಲ್ಯವಿವಾಹ ಶಿಕ್ಷಾರ್ಹ ಅಪರಾಧ



**ಚಾಮರಾಜನಗರ:** ಸಮಾಜಕ್ಕೆ ಮಾರಕವಾಗಿರುವ ಬಾಲ್ಯ ವಿವಾಹವನ್ನು ತಡೆಗಟ್ಟುವುದು ಎಲ್ಲರ ಕರ್ತವ್ಯವಾಗಿದೆ. ಬಾಲ್ಯವಿವಾಹ ಕಾನೂನಿನ ಪ್ರಕಾರ ಶಿಕ್ಷಾರ್ಹ ಅಪರಾಧ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಈಶ್ವರ್ ಅವರು ತಿಳಿಸಿದರು.

ಚಾಮರಾಜನಗರ ತಾಲೂಕು ಕುದೇರು ಗ್ರಾಮದಲ್ಲಿರುವ ಎಂ. ಸಂಗಶೆಟ್ಟಿ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಬುಧವಾರ (ನ.27) ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಬಾಲ್ಯವಿವಾಹ ಮುಕ್ತ ಭಾರತ ಅಭಿಯಾನ ಕಾರ್ಯಕ್ರಮದ ಪ್ರಯುಕ್ತ ಹಮ್ಮಿಕೊಳ್ಳಲಾಗಿದ್ದ ಮಕ್ಕಳ ಹಕ್ಕುಗಳು ಮತ್ತು ಬಾಲ್ಯ ವಿವಾಹ ನಿಷೇಧ ಕಾಯ್ದೆ ಬಗ್ಗೆ ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಾಲ್ಯವಿವಾಹ ನಿಷೇಧ ಕಾಯ್ದೆ-2006ರ ಪ್ರಕಾರ 18 ವರ್ಷದೊಳಗಿನ ಯಾವುದೇ ಹೆಣ್ಣು ಮಕ್ಕಳಿಗೆ ಹಾಗೂ 21 ವ?ದೊಳಗಿನ ಗಂಡು ಮಕ್ಕಳಿಗೆ ಮದುವೆಯಾದಲ್ಲಿ ಅದನ್ನು ಬಾಲ್ಯವಿವಾಹ ಎಂದು ಪರಿಗಣಿಸಲಾಗುತ್ತದೆ. ಕಾಯ್ದೆಯ ಪ್ರಕಾರ ಬಾಲ್ಯವಿವಾಹ ಆದಲ್ಲಿ ಹುಡುಗ, ಹುಡುಗಿಯ ತಂದೆ ತಾಯಿ ಅಲ್ಲದೇ, ಸಂಬಂಧಪಟ್ಟ ತಪ್ಪಿತಸ್ಥರಿಗೆ ಕನಿಷ್ಠ 1 ವರ್ಷದಿಂದ ಗರಿಷ್ಠ 2 ವರ್ಷಗಳವರೆಗೆ ಕಾರಾಗೃಹವಾಸ ಮತ್ತು 1ಲಕ್ಷ ರೂ. ಗಳವರೆಗೆ ದಂಡ ಅಥವಾ ಎರಡನ್ನು ವಿಧಿಸಬಹುದಾಗಿದೆ ಎಂದರು.

ಬಾಲ್ಯ ವಿವಾಹವು ಮಕ್ಕಳ ಬಾಲ್ಯವನ್ನು ಕುಸಿದುಕೊಳ್ಳುವ ಮೂಲಕ ಅವರ ಹಕ್ಕುಗಳನ್ನು ಉಲ್ಲಂಘನೆ ಮಾಡಿದಂತಾಗುತ್ತದೆ. ಬಾಲ್ಯ ವಿವಾಹದಿಂದ ಮಕ್ಕಳ ಆರೋಗ್ಯದ ಮೇಲೆ ದೈಹಿಕ ಮಾನಸಿಕವಾಗಿ ಅನೇಕ ಸಮಸ್ಯೆಗಳು ಉಂಟಾಗುತ್ತದೆ. ಮಕ್ಕಳ ಮೇಲೆ ಯಾವುದೇ ರೀತಿಯ ಲೈಂಗಿಕ ದೌರ್ಜನ್ಯವು ಶಿಕ್ಷಾರ್ಹ ಅಪರಾಧವಾಗಿದೆ. ಸಮಾಜದ ಸ್ವಾಸ್ಥ್ಯವನ್ನು ಹಾಳುಮಾಡುವ ಇಂತಹ ಪಿಡುಗುಗಳನ್ನು ನಿರ್ಮೂಲನೆ ಮಾಡಲು ಎಲ್ಲರೂ ಕೈಜೋಡಿಸಬೇಕು. ಬಾಲ್ಯ ವಿವಾಹವಾಹ ಕಂಡುಬಂದರೆ ತಕ್ಷಣ ಮಕ್ಕಳ ಸಹಾಯವಾಣಿಗೆ ಕರೆಮಾಡಿ ಮಾಹಿತಿ ತಿಳಿಸಿಸಬೇಕು ಎಂದು ನ್ಯಾಯಾಧೀಶರಾದ ಈಶ್ವರ್ ಅವರು ತಿಳಿಸಿದರು.

ಆಸರೆ ಚಾರಿಟಬಲ್ ಟ್ರಸ್ಟ್ ಕಾರ್ಯದರ್ಶಿ ಟಿ.ಜೆ. ಸುರೇಶ್ ಅವರು ಮಾತನಾಡಿ ಮಕ್ಕಳ ಹಕ್ಕುಗಳ ಬಗ್ಗೆ ಇನ್ನೂ ಜನರಲ್ಲಿ ಅರಿವಿನ ಕೊರತೆ ಇದೆ. ಮಕ್ಕಳಿಗೆ ಬದುಕುವ, ರಕ್ಷಣೆ, ವಿಕಾಸ ಹೊಂದುವ ಹಕ್ಕು ಹಾಗೂ ಭಾಗವಹಿಸುವ ಹಕ್ಕುಗಳಿವೆ. ಜೊತೆಗೆ ಮಕ್ಕಳಿಗಾಗಿ ಬಾಲನ್ಯಾಯ ಕಾಯಿದೆ ಜಾರಿಯಲ್ಲಿದೆ. ಮಕ್ಕಳ ಸ್ವಚ್ಛಂದ ಬದುಕಿಗೆ ತೊಂದರೆಯಾಗದಂತೆ ಹಾಗೂ ಅವರ ಅಭಿಪ್ರಾಯಗಳಿಗೂ ಮನ್ನಣೆ ದೊರೆಯ ಬೇಕೆಂಬುದು ಕಾಯಿದೆಯ ಆಶಯವಾಗಿದೆ ಎಂದರು.

ಸಾರ್ವಜನಿಕರಲ್ಲಿ ಮಕ್ಕಳ ಹಕ್ಕುಗಳು ಹಾಗೂ ಅವುಗಳ ರಕ್ಷಣೆಯ ಕುರಿತು ಜಾಗೃತಿ ಇಲ್ಲದಿರುವುದರಿಂದ ಬಾಲ್ಯ ವಿವಾಹ, ಮಕ್ಕಳ ಮೇಲೆ ದೌರ್ಜನ್ಯ, ಬಾಲ ಕಾರ್ಮಿಕ ಪದ್ಧತಿಯಂತಹ ಸಾಮಾಜಿಕ ಪಿಡುಗುಗಳು ಇನ್ನೂ ಜೀವಂತವಾಗಿವೆ. ಮಕ್ಕಳ ಹಕ್ಕುಗಳು ಉಲ್ಲಂಘನೆಯಾಗುತ್ತಿರುವುದು ಕಂಡು ಬರುತ್ತಿದೆ ಎಂದು ಟಿ.ಜೆ. ಸುರೇಶ್ ಅವರು ತಿಳಿಸಿದರು. ಅಧ್ಯಕ್ಷತೆ ವಹಿಸಿ ಮಾತನಾಡಿದ ಉಪ ಪ್ರಾಂಶುಪಾಲರಾದ ತಮ್ಮಯ್ಯ ಜಿ. ಅವರು ಮಕ್ಕಳು ಈಗಿನಿಂದಲೇ ಕಾನೂನುಗಳ ಮಾಹಿತಿಯನ್ನು ಪಡೆಯಬೇಕು. ಈ ಮೂಲಕ ಸಮಾಜದಲ್ಲಿ ಪ್ರಬುದ್ಧ ವ್ಯಕ್ತಿಗಳಾಗಿ ಬೆಳೆಯಬೇಕು. ಶಿಕ್ಷಣದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲೂ ಭಾಗವಹಿಸಬೇಕು ಎಂದು ಸಲಹೆ ಮಾಡಿದರು. ಮಕ್ಕಳ ಸಹಾಯವಾಣಿ ತಂಡದ ಸಂಯೋಜಕರಾದ ಸಿದ್ದರಾಜು ಅವರು ಮಾತನಾಡಿ ಮಕ್ಕಳಿಗೆ ಸಂಬಂಧಿಸಿದಂತೆ ಯಾವುದೇ ತೊಂದರೆಗಳು ಇದ್ದರೆ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಮತ್ತು 112 ಕರೆ ಮಾಡಿ ಮಗುವಿನ ರಕ್ಷಣೆಗೆ ಸಹಕರಿಸಬೇಕೆಂದು ತಿಳಿಸಿದರು. ಶಿಕ್ಷಕರಾದ ಸವಿತಾ, ನೇತ್ರಾವತಿ, ರಾಜಪ್ಪ, ಪಿ. ಶಂಕರ್‌ಮೂರ್ತಿ, ನಂದನ್ ಕುಮಾರ್, ಅರುಣ್, ಎಸ್.ಶೀಲಾ, ಪುಷ್ಪ ಉಪಸ್ಥಿತರಿದ್ದರು.

## ಬಿಡಾಡಿ ದನ, ಕರು, ಇತರಸಾಕು ಪ್ರಾಣಿಗಳನ್ನು ರಸ್ತೆಗೆ ಬಿಡದಂತೆ ಸೂಚನೆ

**ಚಾಮರಾಜನಗರ:** ಗುಂಡ್ಲುಪೇಟೆ ಪಟ್ಟಣ ವ್ಯಾಪ್ತಿಯ ಪ್ರಮುಖ ರಸ್ತೆಗಳಲ್ಲಿ ಬಿಡಾಡಿ ದನ, ಕರು, ಹಂದಿ ಹಾಗೂ ಸಾಕು ಪ್ರಾಣಿಗಳನ್ನು ಬಿಡದಂತೆ ಗುಂಡ್ಲುಪೇಟೆ ಪುರಸಭೆ ಸೂಚಿಸಿದೆ. ಪಟ್ಟಣದ ಪ್ರಮುಖ ರಸ್ತೆಗಳಾದ ಚಾಮರಾಜನಗರ ರಸ್ತೆ, ಕೋಡಹಳ್ಳಿ ಸರ್ಕಲ್, ಬಿ.ಎನ್ ರಸ್ತೆ, ಕೆ.ಆರ್.ಸಿ ರಸ್ತೆ, ಕ್ಯಾಲಿಕೇಟ್ ರಸ್ತೆ, ಊಟಿ ರಸ್ತೆ ಹಾಗೂ ವಿವಿಧ ಬಡಾವಣೆಗಳಲ್ಲಿ ಬಿಡಾಡಿ ದನ, ಕರು, ಹಂದಿಗಳನ್ನು ರಸ್ತೆಗೆ ಬಿಡುತ್ತಿರುವುದರಿಂದ ಸಾರ್ವಜನಿಕರಿಗೆ ಮತ್ತು ವಾಹನ ಸಂಚಾರಕ್ಕೆ ತೊಂದರೆಯಗುವುದಲ್ಲದೇ ಅಪಘಾತ ಸಂಭವಿಸುವ ಸಾಧ್ಯತೆ ಹೆಚ್ಚಾಗಿರುತ್ತದೆ. ಸಾಕು ಪ್ರಾಣಿಗಳ ಮಾಲೀಕರು ಸಾಕು ಪ್ರಾಣಿಗಳನ್ನು ಮನೆಯಲ್ಲಿ ಕಟ್ಟಿ ಹಾಕಿಕೊಂಡು ಸಾಕಬೇಕು. ತಪ್ಪಿದ್ದಲ್ಲಿ ಸಾಕು ಪ್ರಾಣಿಗಳನ್ನು ಪುರಸಭೆ ವಶಕ್ಕೆ ಪಡೆದು ದಂಡ ವಿಧಿಸುವುದಲ್ಲದೇ ಪಿಂಜಾರ್ ಪೋಲ್‌ಗೆ ಬಿಡಲು ಕ್ರಮವಹಿಸಲಾಗುವುದು ಎಂದು ಗುಂಡ್ಲುಪೇಟೆ ಪುರಸಭೆಯ ಅಧ್ಯಕ್ಷರು ಹಾಗೂ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

## ಪ್ಲಾಸ್ಟಿಕ್ ಕ್ರೇಟ್ಸ್‌ಗಳಿಗೆ ಸಹಾಯಧನ

**ಚಾಮರಾಜನಗರ:** ತೋಟಗಾರಿಕೆ ಇಲಾಖೆ ವತಿಯಿಂದ 2024-25ನೇ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಹಾಗೂ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಇಲಾಖಾ ಅನುಮೋದಿತ ಏಜೆನ್ಸಿಗಳಿಂದ ಖರೀದಿಸಿದ



ಪ್ಲಾಸ್ಟಿಕ್ ಕ್ರೇಟ್ಸ್‌ಗಳಿಗೆ ಶೇ. 50ರಂತೆ ಸಹಾಯಧನವನ್ನು ನೀಡಲಾಗುವುದು. ತೋಟಗಾರಿಗೆ ಬೆಳೆಗಳಿಗೆ ಉಂಟಾಗುವ ಕೊಯ್ಲೋತ್ತರ ನಷ್ಟವನ್ನು ತಡೆಯಲು ಹಾಗೂ ಸಮರ್ಪಕ ಕೊಯ್ಲೋತ್ತರ ನಿರ್ವಹಣೆಗೆ ಸಂಬಂಧಿಸಿದ ಚಟುವಟಿಕೆಗಳಲ್ಲಿ ಪ್ಲಾಸ್ಟಿಕ್ ಕ್ರೇಟ್ಸ್ ಬಳಕೆ ಪ್ರಮುಖ ಪಾತ್ರ ನಿರ್ವಹಿಸುತ್ತದೆ. ಆಸಕ್ತ ರೈತರು ಆಯಾ ತಾಲೂಕಿನ ತೋಟಗಾರಿಕೆ ಇಲಾಖೆಗೆ ಇತ್ತೀಚಿನ ಭಾವಚಿತ್ರ, ಪಹಣಿ, ಬೆಳೆ ದೃಢೀಕರಣ, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಪುಸ್ತಕದ ಜೆರಾಕ್ಸ್ ಪ್ರತಿ, ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡದ ರೈತರಾದಲ್ಲಿ ಆರ್.ಡಿ ಸಂಖ್ಯೆಯುಳ್ಳ ಜಾತಿ ಪ್ರಮಾಣ ಪತ್ರ, ಇನ್ನಿತರ ದಾಖಲಾತಿಗಳೊಂದಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು ಎಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಹೋದರಿಯರ ಸಂಗೀತ ರಸಧಾರೆ

**ಮೈಸೂರು:** ಶುಕ್ರವಾರ ನವೆಂಬರ್ 29ರಂದು ಮುಂಬೈನ ವಿ.ಅಪೂರ್ವಾ ಗೋಖಲೆ ಮತ್ತು ವಿ.ಪಲ್ಲವಿ ಜೋಶಿ ನಗರದಲ್ಲಿ ಸಂಗೀತ ರಸಧಾರೆ ಹರಿಸಲಿದ್ದಾರೆ. ನಗರದ 'ಗಾಯನ ಸಭಾ, ಮೈಸೂರು', ಅಪೂರ್ವಾ-ಪಲ್ಲವಿ ಸಹೋದರಿಯರ ಕಾರ್ಯಕ್ರಮವನ್ನು ಗಾನಭಾರತಿಯ 'ವೀಣೆ ಶೇಷಣ್ಣ ಭವನ'ದಲ್ಲಿ ಸಂಜೆ 6 ಗಂಟೆಗೆ ಆಯೋಜಿಸಿದೆ. ಶ್ರೀ ಸಾಗರ್ ಭರತ್ರಾಜ್ ಮತ್ತು ಶ್ರೀ ಪ್ರಸಾದ್ ಕಾಮತ್ ತಬಲಾ ಮತ್ತು ಹಾರ್ಮೋನಿಯಂನಲ್ಲಿ ಸಾಥ್ ನೀಡಲಿದ್ದಾರೆ.



## ಮನ್ವಿತಾ ಪಿ.ಗೆ ಪ್ರತಿಭಾ ಪುರಸ್ಕಾರ

**ಮೈಸೂರಿನಲ್ಲಿಂದು ಎನ್‌ಐಇ ಕಾಲೇಜಿನ ನೌಕರರ ಸಂಘದ ಬೋಧಕೇತರರ ಸಂಘದ ವತಿಯಿಂದ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆ ಹೊಂದಿದ (625/597, ಶೇ.95.56) ಮನ್ವಿತಾ ಪಿ. ಅವರನ್ನು ಸನ್ಮಾನಿಸಿ, ಗೌರವಿಸಲಾಯಿತು. ಚಿತ್ರದಲ್ಲಿ ವಿದ್ವಾಂಸರಾದ ಪ್ರೊ. ಶೆಲ್ವಪಿಳ್ಳೆ ಅಯ್ಯಂಗಾರ್, ಉಪನ್ಯಾಸಕ ಶಿಶಿರಂಜನ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡಿಕೆರೆ ಗೋಪಾಲ್, ಎನ್‌ಐಇ ಕಾಲೇಜಿನ ಕುಲಸಚಿವರಾದ ಮಣಿ, ಸಂಘದ ಅಧ್ಯಕ್ಷ ಸಿಂಗಯ್ಯ, ಸುರೇಶ್, ಪಾಪಣ್ಣ ಅವರನ್ನು ಕಾಣಬಹುದು.**

## ಧರ್ಮವನ್ನು ನಾವು ರಕ್ಷಿಸಿದರೆ ನಮ್ಮನ್ನು ಧರ್ಮ ರಕ್ಷಿಸುತ್ತದೆ



**ತುಮಕೂರು** : ಶ್ರೀಗಳು ಧರ್ಮೋರಕ್ಷತಿ ರಕ್ಷಿತಃ ಧರ್ಮವನ್ನು ನಾವು ರಕ್ಷಿಸಿದರೆ, ನಮ್ಮನ್ನು ಧರ್ಮ ರಕ್ಷಿಸುತದೆ ನಾವು ಅಧರ್ಮಿಗಳಾದರೆ ನಮ್ಮನ್ನು ಯಾರು ರಕ್ಷಿಸುವುದಿಲ್ಲ, ಶಂಕರಾಚಾರ್ಯರು ನೀಡಿರುವ ಉಪದೇಶ ತತ್ವ ಸಿದ್ಧಾಂತಗಳು ಇಡೀ ಪ್ರಪಂಚಕ್ಕೆ ಮಾದರಿಯಾಗಿದೆ, ಅದನ್ನು ನಾವು ಪಾಲಿಸಬೇಕು. ವ್ಯಕ್ತಿಗಳು ಧರ್ಮವನ್ನು ಆಚಾರ-ವಿಚಾರ ಸಂಚಾರ ಹಾಗೂ ಪ್ರಚಾರದ ಮೂಲಕ ಹರಡಬೇಕು. ಹಿಂದೂ ಧರ್ಮವನ್ನು ರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಹಿಂದುಗಳು ಎಂದಿಗೂ ಸಹ ನಮ್ಮ ಧರ್ಮವನ್ನು ಬಿಡಬಾರದು. ಹೆಣ್ಣು ಮಕ್ಕಳ ಕರ್ತವ್ಯ ಹಾಗೂ ಗಂಡು ಮಕ್ಕಳ ಕರ್ತವ್ಯ ಎರಡು ಸಹ ನಮ್ಮ ಧರ್ಮದ ಏಳಿಗ್ಗೆಗೆ ಕಾರಣವಾಗಿದೆ ಹೆಣ್ಣು ಮಕ್ಕಳು ಹಣೆಗೆ ಕುಂಕುಮ ಇಡುವುದು ಹೂ ಮುಡಿಯುವುದು ಬಿಡಬಾರದು, ಗಂಡು ಮಕ್ಕಳು ಮನೆಯಲ್ಲಿ ದಿನ ಪೂಜೆ ಹಾಗೂ ಸಾಂಪ್ರದಾಯವನ್ನು ಬಿಡಬಾರದು. ಆ ಸಂಪ್ರದಾಯವೇ ನಮ್ಮ ಧರ್ಮವನ್ನು ಕಾಪಾಡುತ್ತದೆ ಎಂದು ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀ ಶಂಕರ ವಿಜಯೇಂದ್ರ ಸರಸ್ವತಿ ಸ್ವಾಮಿರವರು ತಿಳಿಸಿದರು.

ತುಮಕೂರಿನ ಬಿ.ಹೆಚ್. ರಸ್ತೆಯ ಶ್ರೀ ಶಂಕರ ಮಠದ ವಿದ್ಯಾತೀರ್ಥ ಪ್ರವರ್ಚನ ಮಂದಿರ ವತಿಯಿಂದ ಕಂಚಿ ಶ್ರೀಗಳ ವಿಜಯ ಯಾತ್ರೆ ಕಾರ್ಯಕ್ರಮವನ್ನು ನ.26 ರಂದು ಬುಧವಾರ ಹಮ್ಮಿಕೊಳ್ಳಲಾಗಿತ್ತು.

ಜಗದ್ಗುರು ಶಂಕರಾಚಾರ್ಯ ಶ್ರೀ ಶ್ರೀ ಶಂಕರ ವಿಜಯೇಂದ್ರ ಸರಸ್ವತಿ ಸ್ವಾಮಿರವರು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತಾ ಅವರು ಸ್ಮೃತಿ, ಪುರಾಣ ಇವೆ ನಮ್ಮ ಧರ್ಮದ ಆಧಾರಗಳು ಇದನ್ನು ನಾವು ಅಧ್ಯಯನ ಮಾಡಬೇಕು, ಹಾಗೂ ಅಧ್ಯಾಪನದ ಮಾರ್ಗವಾಗಿ ಎಲ್ಲರಿಗೂ ತಿಳಿಸಬೇಕು. ವಿದ್ಯೆ ಯಾರ ಒಬ್ಬರ ಸಂಪತ್ತು ಅಲ್ಲ, ವಿದ್ಯೆಯನ್ನು ಕಲಿಯಲು ಎಲ್ಲರಿಗೂ ಅಧಿಕಾರ ಹಾಗೂ ಹಕ್ಕು ಹಿಂದೆಯೂ ಇತ್ತು. ಭಾರತೀಯರಿಗೆ ರಾಮ, ಕೃಷ್ಣ, ಇವರು ನಡೆದು ಬಂದ ಹಾದಿಯೇ ಮಾರ್ಗದರ್ಶನ ಅವರು ನಡೆಸಿದ ಜೀವನ ಶೈಲಿಯನ್ನು ಜೀವನದ ಮಾರ್ಗವನ್ನು ನಾವು ಅನುಸರಿಸಿಕೊಂಡರೆ ನಮ್ಮ ಜೀವನ ಸಾರ್ಥಕವಾಗುತ್ತದೆ ಹಾಗೂ ನಾವು ಮೋಕ್ಷವನ್ನು ಕಾಣಲು ಸಾಧ್ಯವಾಗುತ್ತದೆ. ಭಾರತದಲ್ಲಿ ಗೋ-ಸಂರಕ್ಷಣೆಯ ಅಗತ್ಯವಿದೆ, ಗೋವುಗಳನ್ನು ಸಂರಕ್ಷಿಸುವುದು, ಪೋಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಹಾಗೂ ಗೋವುಗಳು ಪೂಜನೀಯ ಇದು ನಮ್ಮ ಧರ್ಮದ ಭಾಗವಾಗಿದೆ. ಯಾವ ದೇಶದಲ್ಲಿ ರಾಜ್ಯದಲ್ಲಿ ಗೋ-ಸಂಪತ್ತು ಅಧಿಕವಾಗಿರುತ್ತವೋ ಆ ದೇಶದ ಸಂಪತ್ತು ಸುಸ್ಥಿರವಾಗಿರುತ್ತದೆ ಎಂದು ಪುರಾಣಗಳು ಹೇಳುತ್ತವೆ. ಎಂದು ಸಂಸ್ಕೃತ ಶ್ಲೋಕವನ್ನು ಉಲ್ಲೇಖಿಸಿ ಮಾತನಾಡಿದರು.

# ಕನ್ನಡ ಉಳಿಸಿ ಬೆಳೆಸಿ: ಮುನಿಯಪ್ಪ



**ದೇವನಹಳ್ಳಿ :** ಎಲ್ಲೆಡೆ ಕನ್ನಡ ರಾಜ್ಯೋತ್ಸವವನ್ನು ಅರ್ಥ ಪೂರ್ಣವಾಗಿ ಅಚರಿಸುವುದು ಮತ್ತು ಯುವ ಪೀಳಿಗೆಗೆ ಕನ್ನಡ ನಾಡಿನ ಇತಿಹಾಸ, ಸಂಸ್ಕೃತ, ಕಲೆ, ಭಾಷೆ ಬಗ್ಗೆ ಅರಿವು ಮೂಡಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ ವಾಗಿದೆ ಆಹಾರ ಪೂರೈಕೆ ಖಾತೆ ಸಚಿವ ಕೆ ಹೆಚ್ ಮುನಿಯಪ್ಪ ಹೇಳಿದರು.

ದೇವನಹಳ್ಳಿ ಪಟ್ಟಣದ ಹಳೆ ಬಸ್ ನಿಲ್ದಾಣದಲ್ಲಿನ ಶ್ರೀ ಭುವನೇಶ್ವರಿ ಆಟೋ ಚಾಲಕರ ಹಾಗೂ ಮಾಲೀಕರ ಸಂಘದಿಂದ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಗೆ ಪುಷ್ಪ ನಮನ ಸಲ್ಲಿಸುವ ಕನ್ನಡದ ರಾಜ್ಯೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿ, ಕನ್ನಡ ಉಳಿಸಿ ಬೆಳೆಸುವ ಜವಬ್ದಾರಿ ನಾಡಿನ ಜನತೆ ಆದ್ಯ ಕರ್ತವ್ಯವಾಗಲಿ.

ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನವನ್ನು ನೀಡುವ ಮೂಲಕ ರಾಜ್ಯದ ಏಳಿಗೆಗೆ ಶ್ರಮಿಸುವಲ್ಲಿ ಸಹಕಾರಿಯಾಗಿದೆ. ಕನ್ನಡದ ಉತ್ಸವ ವನ್ನು ಅರ್ಥಪೂರ್ಣವಾಗಿ ಆಚರಿಸುವುದರ ಮೂಲಕ ಕನ್ನಡದ ಕಂಪನ್ನು ಎಲ್ಲೆಡೆ ಪಸರಿಸಲು ಇಂಥ ಕಾರ್ಯ ಕ್ರಮಗಳು ಯುವಕರಿಗೆ ಪ್ರೇರಣೆ ನೀಡುವಂ ತಾಗಲಿ ಎಂದು ಶುಭ ಹಾರೈಸಿದರು. ಕಾಳಪ್ಪನವರ ವೆಂಕಟೇಶ್ ಮಾತನಾಡಿ, ಕನ್ನಡ ನಾಡನ್ನು ಶ್ರೀಗಂಧದ ನಾಡು, ಕರುನಾಡು, ಕನ್ನಡಾಂಭೆಯ ನಾಡು, ತಾಯಿ ಭುವನೇಶ್ವರಿಯ ನಾಡು ಎಂಬೆಲ್ಲ ಹೆಸರು ಗಳಿಂದ ಕರೆಯುತ್ತೇವೆ. ಹಚ್ಚಹಸುರಿನ ಸುಂದರ ಬೆಟ್ಟ ಗುಡ್ಡಗಳ. ನದಿಗಳು ಹರಿಯುವ, ಸಾಧು-ಸಂತರು-ದಾಸರು- ಶಿವಶರಣರು - ಕವಿಗಳಿಂದ ಕಂಗೊಳಿಸುತ್ತಿ ರುವ ಕನ್ನಡ ನಾಡು ಎಂಬ ಹೆಸರಿಗೆ ಒಂದು ಧೀಮಂತ ಶಕ್ತಿ ಇದೆ. ಈ ಸುಂದರ, ಸಮೃದ್ಧ ನಾಡಿನಲ್ಲಿ ಜನಿಸಿರುವುದು ನಮ್ಮೆಲ್ಲರ ಅದೃಷ್ಟ. ಹಾಗಾಗಿ ಪ್ರತಿ ವರ್ಷ ನಿರಂತರವಾಗಿ ಕನ್ನಡ ರಾಜ್ಯೋತ್ಸವ ವನ್ನು ಆಟೋ ಚಾಲಕರು ಹಾಗೂ ಮಾಲೀಕರು ಆಚರಿಸುತ್ತಿ ರುವುದು ಪ್ರಶಂಸನೀಯ ವೆಂದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಗಳ ಪ್ರಾಧಿಕಾರದ ಅಧ್ಯಕ್ಷ ಜಗನ್ನಾಥ್, ಬಿಜೆಪಿ ಮುಖಂಡ ಓಬದೇನಹಳ್ಳಿ, ಮುನಿಯಪ್ಪ, ಕೃಷಿ ಸಮಾಜದ ಅಧ್ಯಕ್ಷ ಎಸ್ ಆರ್ ರವಿಕುಮಾರ್ ಕಾಂಗ್ರೆಸ್ ಮುಖಂಡ ಚಿನ್ನಪ್ಪ, ಕಾಳಪ್ಪನವರ ವೆಂಕಟೇಶ್, ವಿಜಯ್ ಕುಮಾರ್, ಡೈರಿನಾಗೇಶ್, ದೇವರಾಜ್ ಮಂಜುನಾಥ್ ನಾರಾಯಣಸ್ವಾಮಿ ಮುನಿರಾಜು, ಪುರಸಭಾ ಸದಸ್ಯ ಚಂದ್ರಪ್ಪ, ಜಿ ರವೀಂದ್ರ, ಮುನಿಕೃಷ್ಣಪ್ಪ, ಗೋಪಿ, ಶ್ರೀಧರ್ ಮುಖಂಡರಾದ ಅಶ್ವತ್ ನಾರಾಯಣ್ ,ಜೈ ಭುವನೇಶ್ವರಿ ಆಟೋ ಚಾಲಕರ ಮತ್ತು ಮಾಲೀಕರ ಸಂಘದ ಅಧ್ಯಕ್ಷ ಕೃಷ್ಣಮೂರ್ತಿ ಸೇರಿದಂತೆ ಹಲವಾರು ಪದಾಧಿಕಾರಿಗಳು ಹಾಜರಿದ್ದರು.

## ಸಾಧನೆಗೆ ಯಾವುದೇ ಅಡೆ ತಡೆ ಇಲ್ಲ

**ಮಂಡ್ಯ:** ಸಾಧನೆ ಮಾಡಲು ಹಲವು ಅಡೆತಡೆಗಳು ಎದುರಾಗುತ್ತವೆ ಅದಕ್ಕೆ ಎದೆಗುಂದದೆ ವಿದ್ಯಾರ್ಥಿಗಳು ಮುನ್ನುಗ್ಗಬೇಕು ಎಂದು ಬಿಜೆಪಿ ಮುಖಂಡ ಹಾಗೂ ಬದುಕು ಬೆಳಕು ಸೇವಾ ಸಮಿತಿ ಅಧ್ಯಕ್ಷ ಹೆಚ್ ಆರ್ ಅರವಿಂದ್ ಹೇಳಿದರು. ಸರ್ಕಾರಿ ಪದವಿ ಕಾಲೇಜು (ಮಾಜಿ ಪುರಸಭೆ ) ಆವರಣದಲ್ಲಿ ಬದುಕು ಬೆಳಕು ಸೇವಾ ಸಮಿತಿ, ಅಖಿಲ ಕರ್ನಾಟಕ ಸಿರಿಗನ್ನಡ ಪ್ರತಿಷ್ಠಾನ ಮಂಡ್ಯ, ಅಮೃತ ಅಲಯನ್ಸ್ ಸಂಸ್ಥೆ , ಸರ್ಕಾರಿ ಪದವಿ ಪೂರ್ವ ಕಾಲೇಜು (ಮಾಜಿ ಪುರಸಭೆ) ವತಿಯಿಂದ 69 ನೇಕನ್ನಡ ರಾಜ್ಯೋತ್ಸವದ ಅಂಗವಾಗಿ ರಾಜ್ಯೋತ್ಸವದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಮತ್ತು ಮಕ್ಕಳ ಹಕ್ಕುಗಳ ಬಗ್ಗೆ ಅರಿವು ಹಾಗೂ ವಿಶ್ವ ಮಧುಮೇಹ ದಿನಾಚರಣೆ ಅಂಗವಾಗಿ ಮಧುಮೇಹ ಬಗ್ಗೆ ಅರಿವು ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಉನ್ನತ ಹುದ್ದೆಯಲ್ಲಿ ಸರ್ಕಾರಿ ಶಾಲೆಯಲ್ಲಿ ಓದಿದ ಮಕ್ಕಳೇ ಹೆಚ್ಚಿದ್ದಾರೆ ಸರ್ಕಾರಿ ಶಾಲೆಯ ಬಗ್ಗೆ ತಾತ್ಸರ ಬೇಡ ನೀವು ಕೂಡ ಪರಿಶ್ರಮದಿಂದ ಓದಿ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿ ಎಂದು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು, ಷುಗರ್ ಡಯಾ ಕೇರ್ ತಜ್ಞ ವೈದ್ಯ ಅರುಣ್ ಮಾತನಾಡಿ ಅತಿಯಾಗಿ ಯಾವುದೇ ಸಿಹಿ ಪದಾರ್ಥಗಳು ಸೇವನೆಗೆ ಯೋಗ್ಯವಲ್ಲ ತರಕಾರಿ ಸೊಪ್ಪುಗಳನ್ನು ಹೆಚ್ಚಾಗಿ ಸೇವಿಸಿ ಮೊಳಕೆ ಕಾಳುಗಳ ಸೇವನೆಯು ಆರೋಗ್ಯಕ್ಕೆ ಉತ್ತಮವಾಗಿದೆ ಎಂದು ಹೇಳಿದರು. ಮಕ್ಕಳ ಹಕ್ಕುಗಳ ಬಗ್ಗೆ ಉಪನ್ಯಾಸವನ್ನು ಶಿಲ್ಪಾ ಅವರು ನೀಡಿದರು ಇದೇ ಸಂದರ್ಭದಲ್ಲಿ ಕನ್ನಡ ರಾಜ್ಯೋತ್ಸವದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ಗ್ರಾಮಾಂತರ ಪೊಲೀಸ್ ಠಾಣೆಯ ಸಬ್ ಇನ್ಸ್ಪೆಕ್ಟರ್ ಎಂ ಎಸ್ ಸುನಿತಾ ಸರ್ಕಾರಿ ಪದವಿ ಪೂರ್ವ ಕಾಲೇಜು (ಮಾಜಿ ಪುರಸಭೆ) ಪ್ರಾಂಶುಪಾಲ ಡಿ ಗುರು ಲಿಂಗೇಗೌಡ ಅಮೃತ ಅಲಯನ್ಸ್ ಸಂಸ್ಥೆ ಅಧ್ಯಕ್ಷ ಎಂ ಲೋಕೇಶ್, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷ ಜಿ ಎನ್ ಮಂಜುನಾಥ್, ಸಂಗೀತ ಕಲಾನಿಕೇತನ ಟ್ರಸ್ಟ್ ನ ಅಧ್ಯಕ್ಷ ಶೋಭಾ ಪಿ ಗೌಡ ಸೇರಿದಂತೆ ಹಲವರು ಭಾಗವಹಿಸಿದ್ದರು.





**ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು ನಗರ ಜಿಲ್ಲೆ, ನೆಹರು ಯುವ ಕೇಂದ್ರ, ಬೆಂಗಳೂರು ನಗರ ಹಾಗೂ ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯವರ ಸಹಯೋಗದಲ್ಲಿ ನಗರದ ಯವನಿಕ ಸಭಾಂಗಣದಲ್ಲಿ ಅಯೋಜಿಸಲಾಗಿದ್ದ ಬೆಂಗಳೂರು ನಗರ ಜಿಲ್ಲಾ ಮಟ್ಟದ ಯುವಜನೋತ್ಸವ -2024 ರ ಕಾರ್ಯಕ್ರಮವನ್ನು ಬೆಂಗಳೂರು ನಗರ ಜಿಲ್ಲಾಧಿಕಾರಿಗಳಾದ ಜಗದೀಶ್ ಜಿ ಅವರು ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಬೆಂಗಳೂರು ನಗರ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಕಾಧಿಕಾರಿಗಳಾದ ಕೆ.ಎಸ್ ಲತಾಕುಮಾರಿ, ನೆಹರು ಯುವ ಕೇಂದ್ರದ ರಾಜ್ಯ ನಿರ್ದೇಶಕರಾದ ಅಶೋಕ್ ಕುಮಾರ್ ಡ್ಯಾಶ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ. ಶಶಿಕಲಾ ಸೇರಿದಂತೆ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.**

## ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಮೈಸೂರು:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ಮೆಟ್ರಿಕ್ ನಂತರದ ಪಿಯುಸಿ ಮತ್ತು ಸಮಾನಂತರ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಪ್ರವರ್ಗ-1 ರ ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಂದ 2024-25ನೇ ಸಾಲಿಗೆ ಮೆಟ್ರಿಕ್ ನಂತರದ ''ವಿದ್ಯಾರ್ಥಿವೇತನ'', ''ಶುಲ್ಕ ಮರುಪಾವತಿ'', ಮತ್ತು ''ವಿದ್ಯಾಸಿರಿ'' (ಊಟ ಮತ್ತು ವಸತಿ ಸಹಾಯ ಯೋಜನೆ) ಸೌಲಭ್ಯಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ನವೆಂಬರ್ 30 ರವರೆಗೆ ವಿಸ್ತರಿಸಲಾಗಿದೆ. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು https://ssp.postmatric.karnataka.gov.in/ ವೆಬ್‌ಸೈಟ್ ಮೂಲಕ ಸಲ್ಲಿಸಬೇಕು. ಕಾರ್ಯಕ್ರಮಗಳ ವಿವರ ಅರ್ಹತೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ವಿದ್ಯಾರ್ಥಿ ವೇತನಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳ ಬಗ್ಗೆ ಮಾಹಿತಿಗಾಗಿ https://bcwd.karnataka.gov.in ವೆಬ್‌ಸೈಟ್ ಅಥವಾ ಸಹಾಯವಾಣಿ ಸಂ:8050770005, ಇಮೇಲ್ ವಿಳಾಸ bcwdhelpline@gmail.com ಅಥವಾ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದ ದೂ.ಸಂ: 1902, ಇಮೇಲ್ ವಿಳಾಸ postmatrichelp@karnataka.gov.in ಅನ್ನು ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿ ತಿಳಿಸಿದ್ದಾರೆ.

## ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕಿರಣ

**ಮೈಸೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಇಂಗ್ಲಿಷ್ ಅಧ್ಯಯನ ವಿಭಾಗವು ಮನೋವಿಜ್ಞಾನ ಅಧ್ಯಯನ ವಿಭಾಗದ ಸಹಯೋಗದೊಂದಿಗೆ ನವೆಂಬರ್ 29 ಮತ್ತು 30 ರಂದು ಕರಾಮುವಿಯ ಕಾವೇರಿ ಸಭಾಂಗಣದಲ್ಲಿ "Prisms of Psychology in the Literary Realm" ಕುರಿತಾಗಿ ಎರಡು ದಿನಗಳ ರಾಷ್ಟ್ರೀಯ ವಿಚಾರ ಸಂಕೀರಣವನ್ನು ಆಯೋಜಿಸಲಾಗಿದೆ. ನವೆಂಬರ್ 29 ರಂದು ರಾಷ್ಟ್ರೀಯ ವಿಚಾರ ಸಂಕೀರಣವನ್ನು ಗುಜರಾತ್ ರಾಜ್ಯದ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಪ್ರೊ.ಅಮಿ ಉಪಾಧ್ಯಾಯರು ಉದ್ಘಾಟಿಸಲಿದ್ದು, ಕರಾಮುವಿಯ ಗೌರವಾನ್ವಿತ ಕುಲಪತಿಗಳಾದ ಪ್ರೊ. ಶರಣಪ್ಪ.ವಿ.ಹಲಸೆರವರು ಅಧ್ಯಕ್ಷತೆಯನ್ನು ವಹಿಸುವರು ಹಾಗೂ ವೆಲ್ಲೂರಿನ ವಿ.ಐ.ಟಿ. ವಿಶ್ವವಿದ್ಯಾನಿಲಯ ಇಂಗ್ಲೀ?ನ್ ಅಧ್ಯಯನ ವಿಭಾಗದ ಪ್ರೊ. ಅಜಂತಾ ಸರ್‌ಕಾರ್ ರವರು ಪ್ರಧಾನ ಭಾಷಣವನ್ನು ಮಾಡುವರು. ನವೆಂಬರ್ 30 ಸಂಜೆ 4-30 ಗಂಟೆಗೆ ಕಾವೇರಿ ಸಭಾಂಗಣದಲ್ಲಿ ಸಮಾರೋಪ ಸಮಾರಂಭವನ್ನು ಆಯೋಜಿಸಲಾಗಿದ್ದು, ಸಮಾರೋಪ ಸಮಾರಂಭ ಭಾಷಣವನ್ನು ತಿರುಪತಿ ಶ್ರೀ ವೆಂಕಟೇಶ್ವರ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿಗಳು ಮತ್ತು ಮನೋವಿಜ್ಞಾನ ವಿಭಾಗದ ಪ್ರೊ. ವಿ. ಶ್ರೀಕಾಂತ್ ರೆಡ್ಡಿರವರು ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಕರಾಮುವಿ ಕುಲಸಚಿವರಾದ ಪ್ರೊ. ಪ್ರವೀಣ. ಕೆ.ಬಿ.ರವರು. ಡೀನ್ (ಶೈಕ್ಷಣಿಕ) ಪ್ರೊ. ಲಕ್ಷ್ಮಿ.ಎನ್ ಅವರು, ಇಂಗ್ಲೀಷ್ ಮತ್ತು ಮನೋವಿಜ್ಞಾನ ವಿಭಾಗಗಳ ಮುಖ್ಯಸ್ಥ ಡಾ. ಶ್ರೀಕಾಂತ್ ಎಸ್. ಮತ್ತು ಡಾ. ಮಂಜುನಾಥ.ಪಿ ಉಪಸ್ಥಿತರಿರುವರು.

## ಅರ್ಜಿ ಆಹ್ವಾನ

**ರಾಮನಗರ;** ಕೈಮಗ್ಗ ಮತ್ತು ಜವಳಿ ಇಲಾಖೆ ವತಿಯಿಂದ ನೇಕಾರರ ವಿಶೇಷ ಪ್ಯಾಕೇಜ್ ಯೋಜನೆಯಡಿ ಟಿಎಸ್‌ಪಿ ಯೋಜನೆಯಡಿ ಜವಳಿ ಘಟಕ ಸ್ಥಾಪನೆಗೆ ಪರಿಶಿಷ್ಟ ಪಂಗಡದ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ನ. 30 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗೆ ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ರಾಮನಗರ ಅಥವಾ ದೂ.ಸಂಖ್ಯೆ: 080-27272288 ಅನ್ನು ಸಂಪರ್ಕಿಸುವಂತೆ ರಾಮನಗರ ಜಿಲ್ಲೆಯ ಕೈಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಮಾಜ ಕಾರ್ಯಕರ್ತೆಗೆ ಆಹ್ವಾನ

**ತಿಪಟೂರು :** ನಗರದಲ್ಲಿರುವ ಬದುಕು ಸಾಂತ್ವನ ಕೇಂದ್ರದಲ್ಲಿ ಕಾರ್ಯ ನಿರ್ವಹಿಸಲು ವಿವಾಹಿತ ಮಹಿಳಾ ಸಮಾಜ ಕಾರ್ಯಕರ್ತೆಯರು ಅವಶ್ಯಕತೆಯಿರುತ್ತದೆ. ಬದುಕು ಸ್ವಾಂತನ ಕೇಂದ್ರದಲ್ಲಿ ಹಾಗೂ ಸಮಾಜಿಕವಾಗಿ ಕೆಲಸ ನಿರ್ವಹಿಸಲು ವಿದ್ಯಾರ್ಹತೆ ಬಿ.ಎಸ್.ಡಬ್ಲ್ಯೂ ಹಾಗೂ ಬಿ.ಎ ಸಮಾಜಶಾಸ್ತ್ರ ಅಥವಾ ಬಿಎ ಮನೋವಿಜ್ಞಾನಿ ಪದವಿ ಹೊಂದಿದ ತಿಪಟೂರು ನಗರ ವ್ಯಾಪ್ತಿಯ ನಿವಾಸಿಯವರಿಗೆ ಆದ್ಯತೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಹಾಲ್ಕುರಿಕೆ ರಸ್ತೆಯಲ್ಲಿರುವ ಗೋವಿನಪುರದ ಬದುಕು ಸಾಂತ್ವನ ಕೇಂದ್ರ 9483123411 ಅಥವಾ 7892574971 ಸಂಪರ್ಕಿಸಬಹುದು.

## ಸಚಿವರ ಅಧ್ಯಕ್ಷತೆಯಲ್ಲಿ ಕೆಡಿಪಿ ಸಭೆ

**ಚಾಮರಾಜನಗರ:** ಪಶುಸಂಗೋಪನೆ, ರೇಷ್ಮೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ. ವೆಂಕಟೇಶ್ ಅವರ ಅಧ್ಯಕ್ಷತೆಯಲ್ಲಿ ತ್ರೈಮಾಸಿಕ ಕೆ.ಡಿ.ಪಿ. ಪ್ರಗತಿ ಪರಿಶೀಲನಾ ಸಭೆಯು ನವೆಂಬರ್ 30ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ನೂತನ ಜಿಲ್ಲಾ ಪಂಚಾಯತ್ ಕೆ.ಡಿ.ಪಿ. ಸಭಾಂಗಣದಲ್ಲಿ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಹಜ ಬೇಸಾಯದ ನಡಿಗೆ



**ಹುಳಿಯಾರು:** ಸಹಜ ಬೇಸಾಯವು ಗ್ರಾಮ ಪಂಚಾಯತಿಯ ಮನೆಮನೆಗೂ ತಲುಪುವಂತೆ ಪಿಡಿಒ ಮತ್ತು ಇತರ ಸಿಬ್ಬಂದಿ ಪ್ರಯತ್ನ ಮಾಡಬೇಕು ಎಂದು ಸಹಜ ಬೇಸಾಯ ಯೋಜನೆಯನ್ನು ಪಂಚಾಯತ್ ರಾಜ್ ವ್ಯವಸ್ಥೆಗೆ ತಂದ ಲಂಚಮುಕ್ತ ವೇದಿಕೆಯ ಅಧ್ಯಕ್ಷ ಭಟ್ರಳ್ಳಿ ಮಲ್ಲಿಕಾರ್ಜುನ್ ಕರೆ ನೀಡಿದರು.

ಹುಳಿಯಾರು ಹೋಬಳಿಯ ಕೋರಗೆರೆ ಗ್ರಾಮ ಪಂಚಾಯಿತಿ ಬುಧವಾರ ಆಯೋಜಿಸಿದ್ದ ರೈತರ ಸಭೆಯಲ್ಲಿ ಪಂಚಾಯಿತಿ ಆಡಳಿತ ವರ್ಗಕ್ಕೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಪ್ರಸ್ತುತ ಆರ್ಥಿಕ ಸಾಲಿನಲ್ಲಿ ಸುಮಾರು ಎರಡು ಕೋಟಿ ರೂಪಾಯಿಗಳಷ್ಟು ಹಣ ಉದ್ಯೋಗ ಖಾತ್ರಿ ಯೋಜನೆಯಲ್ಲಿ ಸಹಜ ಬೇಸಾಯಕ್ಕೆ ಬಳಕೆಯಾಗುವಂತೆ ರೈತರಿಗೆ ಪ್ರೇರಣೆ ನೀಡಬೇಕೆಂದರು.

ಮಾಸ್ಟರ್ ಟ್ರಸ್ಟ್ ಅಧ್ಯಕ್ಷೆ ಮತ್ತು ಸಂಪನ್ಮೂಲ ವ್ಯಕ್ತಿ ಇಂದಿರಮ್ಮ ಮಾರ್ಚ್ ತಿಂಗಳಲ್ಲಿ ಆರಂಭವಾಗಬೇಕಾಗಿದ್ದ ಕಾರ್ಯಕ್ರಮ ನವಂಬರ್ ತಿಂಗಳಿನಲ್ಲಿ ಚಾಲನೆ ಪಡೆಯುತ್ತಿದೆ, ತಡವಾಗಿ ಆರಂಭವಾದರೂ, ಪರವಾಗಿಲ್ಲ, ಆಸಕ್ತ ರೈತರು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಸಲಹೆ ನೀಡಿದರು.

ಮಾಸ್ ಟ್ರಸ್ಟ್ ಕಾರ್ಯದರ್ಶಿ ಮತ್ತು ಸಂಪನ್ಮೂಲ ವ್ಯಕ್ತಿ ರಾಮಕೃಷ್ಣಪ್ಪ ಇಡೀ ರಾಜ್ಯಕ್ಕೆ ಮೊದಲು ಸಹಜ ಬೇಸಾಯವನ್ನು ಅಂಬಿಸಿದ ಹೆಗ್ಗಳಿಗೆ ಕೋರಗೆರೆ ಪಂಚಾಯಿತಿಯದು, ಈ ಪಂಚಾಯತಿಯಲ್ಲಿ ಹೆಚ್ಚು ಜನ ರೈತರು ಕಾರ್ಯಕ್ರಮವನ್ನು ಕೈಗೆತ್ತಿಕೊಳ್ಳಿ ಎಂದು ಹೇಳಿದರು. ಸಾವಯವ ಕೃಷಿಕ ಎಂ .ರಾಜಣ್ಣ, ಪಿಡಿಓ ನವೀನ್ ಕುಮಾರ್, ಯಶ್ವಂತ್ ಕುಮಾರ್, ಡಿಇಒ ಷಕೀಲ್ ಅಹಮ್ಮದ್, ಬಿಲ್ ಕಲೆಕ್ಟರ್ ಲಕ್ಷ್ಮಿಕಾಂತ್, ಸಾವಯವ ಕೃಷಿ ಪರಿವಾರದ ಎಸ್.ರಾಜಣ್ಣ, ಕೃಷಿ ಪಂಡಿತ್ ರಾಜಶೇಖರ್ ಮತ್ತು ಕೋರಗೆರೆ ಪಂಚಾಯ್ತಿಯ ರೈತರು ಭಾಗವಹಿಸಿದ್ದರು.

# ಜ್ಞಾನಜ್ಯೋತಿ ಶಾಲೆಯಲ್ಲಿ ರಾಜ್ಯೋತ್ಸವ

**ಹುಳಿಯಾರು:** ಹುಳಿಯಾರಿನ ಜ್ಞಾನಜ್ಯೋತಿ ಶಾಲೆಯಿಂದ ಕನ್ನಡ ರಾಜ್ಯೋಸವವನ್ನು ಗುರುವಾರ ವೈಭವದಿಂದ ಆಚರಿಸಲಾಯಿತು. ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಗೊಳ್ಳಿರಾಯಣ್ಣ, ಕಿತ್ತೂರುರಾಣಿ ಚೆನ್ನಮ್ಮ, ಒನಕೆ ಓಬವ್ವ, ವಿವೇಕಾನಂದ, ಬಸವಣ್ಣ ಮುಂತಾದವರ ವೇಷಭೂಷಣದ ಮೆರವಣಿಗೆ ಜನರ ಕಣ್ಮನ ಸೆಳೆಯಿತು. ಅಲ್ಲದೆ ಕನ್ನಡ ನಾಡು, ನುಡಿ, ಜಲದ ಹಾಡುಗಳಿಗೆ ಮೆರವಣಿಗೆಯಲ್ಲಿ ನೃತ್ಯ ಮಾಡಿ ರಾಜ್ಯೋತ್ಸವದ ಸಂಭ್ರಮವನ್ನು ಹಿಮ್ಮಡಿಗೊಳಿಸಿದರು.

ನಂತರ ಶಾಲಾ ಆವರಣದಲ್ಲಿ ಆಯೋಜಿಸಿದ್ದ ರಾಜ್ಯೋತ್ಸವ ಸಮಾರಂಭ ಉದ್ಘಾಟಿಸಿದ ಶಾಲೆಯ ಕಾರ್ಯದರ್ಶಿ ಸುಧಾ ಅವರು ಮಾತನಾಡಿ ಕರ್ನಾಟಕದಲ್ಲಿ ಕನ್ನಡವನ್ನು ಹೆಚ್ಚು ಮಾತನಾಡುವ, ಅನ್ಯ ಭಾಷಿಕರಿಗೆ ಕನ್ನಡ ಕಲಿಸುವ ಮೂಲಕ ಕನ್ನಡ ಬೆಳಸಬೇಕು ಎಂದರು.

ಮುಖ್ಯಶಿಕ್ಷಕ ಕೆ.ಎಲ್.ಗಿರೀಶ್ ಮಾತನಾಡಿ ಕನ್ನಡ ಪ್ರಾಚೀನ ಭಾಷೆ. ಕನ್ನಡ ಭಾಷೆ ಉಳಿಸಿ, ಬೆಳೆಸುವುದು ಕನ್ನಡಿಗರ ಜವಾಬ್ದಾರಿ. ಕವಿಸಾಹಿತಿಗಳು ತಮ್ಮ ಕೃತಿಗಳ ಮೂಲಕ ಕನ್ನಡ ಭಾಷೆಯನ್ನು ಶ್ರೀಮಂತಗೊಳಿಸಿದ್ದಾರೆ. ಇಂತಹ ಕೃತಿಗಳನ್ನು ಮಕ್ಕಳು ಓದಿ ಜ್ಞಾನ ವೃದ್ಧಿಸಿಕೊಂಡು ಮುಂದಿನ ದಿನಗಳಲ್ಲಿ ಸಾಹಿತ್ಯ ಸೇವೆ ಮಾಡಲು ಮುಂದಾಗಬೇಕು ಎಂದರು.

ಸಂಸ್ಥೆಯ ಅಧ್ಯಕ್ಷರಾದ ಕೆ.ಸಿ.ಶಿವಣ್ಣ, ಶಿಕ್ಷಕರುಗಳಾದ ಅಕ್ಬರ್ ಅಲಿ, ಲೀಲಾ, ಶೈಲಾ, ಚಂಪಾ, ನಾಗರತ್ನ, ಸುಧಾ, ಶಶಿಕಲ ಮತ್ತಿತರರು ಉಪಸ್ಥಿತರಿದ್ದರು.



### ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಅಭಿಮತ

# ಸಂವಿಧಾನ ಗೌರವಿಸುವುದು ಕರ್ತವ್ಯ

**ಬೆಂಗಳೂರು:** ಸಂವಿಧಾನಕ್ಕೆ ಗೌರವ ನೀಡುವುದು ಪ್ರತಿಯೊಬ್ಬ ಭಾರತೀಯನ ಕರ್ತವ್ಯ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆ ಹಾಗೂ ಪ್ರವಾಸೋದ್ಯಮ ಸಚಿವರಾದ ಎಚ್.ಕೆ. ಪಾಟೀಲ ತಿಳಿಸಿದರು.

ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆಯು ಶ್ರೀ ಜಗದ್ಗುರು ರೇಣುಕಾಚಾರ್ಯ ಕಾನೂನು ಕಾಲೇಜಿನ 'ಸರಾಫ್ ಬಿ. ಬಸಪ್ಪ ಸಭಾಂಗಣ'ದಲ್ಲಿ ಬೆಂಗಳೂರಿನ ವಿವಿಧ ಕಾನೂನು ಕಾಲೇಜುಗಳಿಂದ ಆಗಮಿಸಿದ ಪ್ರಾಂಶುಪಾಲರು, ಸಹ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳಿಗಾಗಿ 'ಸಂವಿಧಾನ ದಿನಾಚರಣೆ'ಯ ಅಂಗವಾಗಿ ''ಸಂವಿಧಾನ ಸೈನಿಕರ ಸಮಾವೇಶ ? 2024''ವನ್ನು ಉದ್ಘಾಟಿಸಿ ಮಾತನಾಡಿದ ಸಚಿವರು, ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆಯು ತನ್ನದೇ ಆದ ಒಂದು ಕೊಡುಗೆಯನ್ನು ನೀಡಿದೆ. ಇಂಥ ಒಂದು ಸಂಸ್ಥೆಯು ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದು ಶ್ಲಾಘನೀಯ ಕಾರ್ಯವೆಂದರು.

ನಾವು ಈಗ ಮಾತನಾಡುವಾಗ ನಮ್ಮ ಸಂವಿಧಾನದ ಪೀಠಿಕೆಯನ್ನು ಓದುವಾಗ ಎರಡು ಶಬ್ದ ಹೇಳಿದ್ದೇವೆ. ಅವುಗಳನ್ನು ಈ ಹಿಂದೆ ಸಂವಿಧಾನ ತಿದ್ದುಪಡಿ ಮಾಡಿ ಆ ಪೀಠಿಕೆಯಲ್ಲಿ ಸೇರಿಸಿದ್ದೇವೆ. ಒಂದು 'ಸೆಕ್ಯುಲರ್', ಇನ್ನೊಂದು 'ಸಮಾಜವಾದ' ಎರಡು ಶಬ್ದಗಳು ಸೇರಿವೆ. ಅವುಗಳ ಬಗ್ಗೆ ಸುಪ್ರೀಂ ಕೋರ್ಟಿನಲ್ಲಿ ನಿನ್ನೆ ಪ್ರಕಟವಾಗಿರುವ ತೀರ್ಪಿನಲ್ಲಿ ಉಲ್ಲೇಖಿಸಿದ್ದಾರೆ. ಇದನ್ನು ತಾವೆಲ್ಲರು ಗಮನಿಸಿದ್ದೀರಿ. 'ಸಮಾಜವಾದ' 'ಜಾತ್ಯಾತೀತತೆ' ನೈಜ ಕಲ್ಪನೆ ನಮ್ಮ ಸಂವಿಧಾನ ಶಬ್ಧಗಳ ಮೂಲಕ ಹೆಚ್ಚು ಒತ್ತು ಕೊಟ್ಟು ಬರೆದಿದ್ದಾರೆ ಎಂದು ತಿಳಿಸಿದರು.

ಸರ್ವೋಚ್ಚ ನ್ಯಾಯಾಲಯವು ಸಮಾಜವಾದ ಜಾತ್ಯಾತೀತತೆಯ ಜೊತೆಗೆ ಸರ್ವಧರ್ಮ ಶ್ರೇಷ್ಠತೆಯನ್ನು ಗೌರವಿಸಿದೆ. ಸಮಾಜವಾದ ಎನ್ನುವ ಪದ ಕೇವಲ ಚುನಾವಣಾ ಸಂದರ್ಭಕ್ಕೆ ಬಳಕೆಯಾಗುವ ಪದವಾಗಬಾರದು. ಆಂತರ್ಯದ ಪದವಾಗಬೇಕು. ಈಗ 75 ವರ್ಷಗಳನ್ನು ದಾಟಿದ್ದೇವೆ.



ಬರುವ ದಿನಗಳಲ್ಲಿ ಭಾರತದ ಭವಿಷ್ಯವನ್ನು ನಾವು ಅಭಿವೃದ್ಧಿ ಪಡಿಸಬಹುದು. ಯುವಕರಾದ ನೀವು ಬಹಳಷ್ಟು ಚಿಂತನೆ ಮಾಡುವ ಅವಶ್ಯಕತೆ ಕಾಣುತ್ತದೆ. ಸಂವಿಧಾನದ ಸೈನಿಕರಾಗಿ ಪ್ರತಿ ಹೆಜ್ಜೆಯಲ್ಲೂ ಹೋರಾಟ ಮಾಡಬೇಕಾಗಿದೆ. ನಾಡಿನಲ್ಲಿ ಅನೇಕ ಜ್ವಲಂತ ಸಮಸ್ಯೆ ಇವೆ. ಅವುಗಳು ಹೆಚ್ಚು ಚರ್ಚೆಯಾಗಬೇಕು. ಅವುಗಳು ಇಂಥ ಯುವಕರ ಜೊತೆಗೆ ಚರ್ಚೆ ಆಗಲಿ, ಅದನ್ನು ಮಾಡುವುದಕ್ಕೆ ನಮ್ಮ ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆ ವಿಶೇಷವಾಗಿ ಕೆಲಸ ಮಾಡಲಿ ಎಂದು ತಿಳಿಸಿದರು.

ವಕೀಲಿಕೆಯ ಅಧಿಕಾರವನ್ನು ಬಳಸಿ ಸಂವಿಧಾನದ ಮೂಲಕ ಸಮಸ್ಯೆ ವಿರುದ್ಧ ಹೋರಾಡಿ ಶೋಷಣೆಗೆ ಲಗಾಮು ಹಾಕಬೇಕು. ಸಂವಿಧಾನದಲ್ಲಿ ಶಕ್ತಿಯುತವಾದ ಅನುಚ್ಛೇದಗಳಿವೆ. ಈ ಒಂದು ಸಂವಿಧಾನ ಸೈನಿಕರ ಸಮಾವೇಶದಿಂದ ನಾಡಿನಲ್ಲಿ ಹೊಸ ಭರವಸೆ ಮೂಡಬೇಕು. ಇದನ್ನು ಒಂದು ಅಸ್ತ್ರವನ್ನಾಗಿ ನೀವು ಬಳಸಿಕೊಳ್ಳಬೇಕು. ಇದನ್ನು ಉಪಯೋಗಿಸಿ ಉತ್ತಮ ಸರ್ಕಾರ ಮಾಡುವ ರೀತಿ ಸಂವಿಧಾನ ಸೈನಿಕರು ಕೆಲಸ ಮಾಡಬೇಕೆಂದು ಕರೆ ನೀಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಗೌರವಾನ್ವಿತ ನ್ಯಾಯಮೂರ್ತಿ ಶಿವರಾಜ ವಿ. ಪಾಟೀಲ ಅವರು ಮಾತನಾಡುತ್ತಾ, ಪ್ರಜಾಪ್ರಭುತ್ವ ಇರುವ ರಾಷ್ಟ್ರಗಳಲ್ಲಿ ಇರುವ ಸಂವಿಧಾನದಲ್ಲಿ ನಮ್ಮ ಸಂವಿಧಾನವೇ ಬಹಳ ಶ್ರೇಷ್ಠವಾಗಿದೆ, 75 ವರ್ಷ ತುಂಬಿರುವುದು ಒಂದು ದೊಡ್ಡ ಸಾಧನೆಯಾಗಿದೆ ಎಂದರು. ಇದು ಅಭಿಮಾನ ಪಡುವ ದಿನವಾಗಿದೆ. ಸಂವಿಧಾನದ ಧ್ಯೇಯೋದ್ದೇಶಗಳು ಎಲ್ಲರಿಗೂ ಸಮಾನವಾಗಿವೆ ಎಂದರು. ಕಾನೂನು ವಿದ್ಯಾರ್ಥಿಗಳು ಸಂವಿಧಾನ ರಚನಾ ಸಭೆಯ ನಡಾವಳಿಗಳನ್ನು ಓದಿ ಮತ್ತು ಚರ್ಚೆ ಮಾಡಿ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಸಮಾರಂಭದಲ್ಲಿ ಸಂಸ್ಥೆಯ ನಿರ್ದೇಶಕರಾದ ಪ್ರೊ. ಸಿ.ಎಸ್. ಪಾಟೀಲ, ಜಗದ್ಗುರು ರೇಣುಕಾಚಾರ್ಯ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿ ಜ್ಯೋತಿ, ಸಹಾಯಕ ಪ್ರಾಧ್ಯಾಪಕರಾದ ಶ್ರೀಮತಿ ರಾಧಿಕಾ ಕೇರಿಹೊಳ್ಳ, ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆಯ ಸಂಶೋಧನಾ ಮುಖ್ಯಸ್ಥರಾದ ಡಾ. ರೇವಯ್ಯ ಒಡೆಯರ್ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ನರೇಗಾ ಸದುಪಯೋಗ ಪಡೆದುಕೊಳ್ಳಿ-ಮಂಜುನಾಥ್

**ಯಳಂದೂರು:** ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಗ್ರಾಮದ ರಸ್ತೆ, ಜಮೀನು ಹಾಗೂ ಅನೇಕ ವೈಯುಕ್ತಿಕ ಕಾಮಗಾರಿಗಳನ್ನು ಮಾಡಲು ಅವಕಾಶವಿದ್ದು ಸಾರ್ವಜನಿಕರು ಇದರ ಲಾಭವನ್ನು ಪಡೆದುಕೊಳ್ಳಬೇಕು ಎಂದು ಪಿಡಿಒ ಮಂಜುನಾಥ್ ಕರೆ ನೀಡಿದರು.

ಅವರು ಬುಧವಾರ ಯರಗಂಬಳ್ಳಿ ಗ್ರಾಮ ಪಂಚಾಯತಿ ಆವರಣದಲ್ಲಿ ಹಮ್ಮಿಕೊಂಡಿದ್ದ ನರೇಗಾ ಸಮಾಜಿಕ ಲೆಕ್ಕ ಪರಿಶೋಧನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು. ವೈಯುಕ್ತಿಕವಾಗಿ ಒಬ್ಬರು ಮೂರು ಕಾಮಗಾರಿಗಳನ್ನು ಮಾಡಲು ಅವಕಾಶವಿದೆ. ಈಗ ಆನ್ ಲೈನ್‌ನಲ್ಲಿ ಕಾಮಗಾರಿಗಳನ್ನು ನೋಂದಣಿ ಮಾಡಿಕೊಳ್ಳಲು ಅವಕಾಶವಿದ್ದು ಇದರ ಸದುಪಯೋಗ ಪಡೆದುಕೊಳ್ಳಬೇಕು. ನಮ್ಮ ಪಂಚಾಯಿತಿ ವ್ಯಾಪ್ತಿಯಲ್ಲಿ ಅನೇಕರು ನರೇಗಾ ಯೋಜನೆಯ ಲಾಭ ಪಡೆದುಕೊಂಡಿದ್ದಾರೆ. ತಮ್ಮ ಜಮೀನುಗಳ ಅಭಿವೃದ್ಧಿಗೆ ಇದೊಂದು ಉತ್ತಮ ಯೋಜನೆಯಾಗಿದೆ.

ಕಳೆದ ಅವಧಿಯಲ್ಲಿ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯಿತಿಯಿಂದ 105, ತೋಟಗಾರಿಕೆ ಇಲಾಖೆಯ ವತಿಯಿಂದ 12 ಅರಣ್ಯ ಇಲಾಖೆಯ 8 ಕೃಷಿ ಇಲಾಖೆಯ 4 ಕಾಮಗಾರಿಗಳೂ ಸೇರಿದಂತೆ ಒಟ್ಟು 129 ಕಾಮಗಾರಿಗಳು ನಡೆದಿವೆ. ಇದರಲ್ಲಿ ಒಟ್ಟು 40.77 ಲಕ್ಷ ರೂ ಕೂಲಿ ಮೊತ್ತವನ್ನು ಪಾವತಿಸಲಾಗಿದೆ. ಸಾಮಾಗ್ರಿ ಮೊತ್ತ 6.48 ಲಕ್ಷ ರೂ.ಗಳು ಸೇರಿದಂತೆ ಒಟ್ಟು 47.26 ಲಕ್ಷ ರೂ.ಗಳನ್ನು ಪಾವತಿಸಲಾಗಿದೆ ಎಂದು ಮಾಹಿತಿ ನೀಡಿದರು.

ಗ್ರಾಪಂ ಅಧ್ಯಕ್ಷೆ ಭಾಗ್ಯಮ್ಮ ಉಪಾಧ್ಯಕ್ಷೆ ಶಾಂತಮ್ಮ ಸದಸ್ಯರಾದ ಡಿ.ಸಿ. ಬಾಬು, ನಾಗರಾಜು, ಮಹೇಶ್, ಸೋಮಣ್ಣ, ಸಿದ್ಧರಾಜು ಪಶು ಇಲಾಖೆಯ ಬಸವರಾಜು, ತೋಟಗಾರಿಕಾ ಇಲಾಖೆಯ ಶಿವರಂಜನಿ ಬಿಲ್ ಕಲೆಕ್ಟರ್ ಇಂದ್ರ, ರವಿ ಸೇರಿದಂತೆ ಅನೇಕರು ಇದ್ದರು.



**ಯಳಂದೂರು ತಾಲೂಕಿನ ಯರಗಂಬಳ್ಳಿ ಗ್ರಾಮದಲ್ಲಿ ಬುಧವಾರ ನಡೆದ ಗ್ರಾಮಸಭೆಯನ್ನು ಗ್ರಾಪಂ ಅಧ್ಯಕ್ಷೆ ಭಾಗ್ಯಮ್ಮ ರವರು ಗಿಡಕ್ಕೆ ನೀರೆರೆಯುವ ಮೂಲಕ ಚಾಲನೆ ನೀಡಿದರು. ಪಿಡಿಒ ಮಂಜುನಾಥ್, ಉಪಾಧ್ಯಕ್ಷೆ ಶಾಂತಮ್ಮ ಸೇರಿದಂತೆ ಅನೇಕರು ಇದ್ದರು.**



## ಸಂವಿಧಾನ ದಿನಾಚರಣೆ

**ರಾಮನಗರ:** ನವದೆಹಲಿಯ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ರಾಮನಗರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ರಾಮನಗರದ ಸರ್ಕಾರಿ ಕಾನೂನು ಕಾಲೇಜು ಸಹಯೋಗದಲ್ಲಿ ನ. 26ರ ಮಂಗಳವಾರ ಸಂವಿಧಾನ ದಿನಾಚರಣೆ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ಕಾನೂನು ಅರಿವು-ನೆರವು ಜಾಥಾಗೆ ಜಿಲ್ಲಾಧಿಕಾರಿಗಳ ಕಚೇರಿ ಸರ್ಕಿಣದಲ್ಲಿ ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ಚಾಲನೆ ನೀಡಿದರು. ರಾಮನಗರದ ಮೂರನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಜಿ. ರಾಘವೇಂದ್ರ, ಅವರು ಸಂವಿಧಾನ ಪೀಠಿಕೆಯನ್ನು ಬೋಧಿಸಿದರು.ರಾಮನಗರದ ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷರಾದ ವಿ. ಚಂದ್ರಶೇಖರ್, ಸರ್ಕಾರಿ ಕಾನೂನು ಕಾಲೇಜಿನ ಪ್ರಾಂಶುಪಾಲರಾದ ಡಾ. ನಾಗಶೇಷಮ್ಮ ಎಸ್. ಹಾಗೂ ಜಿಲ್ಲಾಧಿಕಾರಿ ಕಚೇರಿಯ ಸಿಬ್ಬಂದಿ ಭಾಗವಹಿಸಿದ್ದರು.

## ಡಿ. 9ರಿಂದ ಬೆಳಗಾವಿಯಲ್ಲಿ ವಿಧಾನಮಂಡಳ ಅಧಿವೇಶನ

**ಮಂಗಳೂರು:** ರಾಜ್ಯ ವಿಧಾನಮಂಡಲ ಚಳಿಗಾಲದ ಅಧಿವೇಶನ ಡಿಸೆಂಬರ್ 9 ರಿಂದ 19 ರವರೆಗೆ ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಯಲಿದೆ ಎಂದು ವಿಧಾನಸಭಾ ಸ್ಪೀಕರ್ ಯು.ಟಿ. ಖಾದರ್ ಅವರು ತಿಳಿಸಿದ್ದಾರೆ. ಅವರು ಗುರುವಾರ ಮಂಗಳೂರಿನ ಸರ್ಕ್ಯೂಟ್ ಹೌಸ್‌ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು. ಮಂಡ್ಯದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ಇರುವುದರಿಂದ ಅಧಿವೇಶನವನ್ನು ಡಿಸೆಂಬರ್ 19ಕ್ಕೆ ಮುಕ್ತಾಯಗೊಳಿಸಲು ಸರ್ಕಾರವು ನಿರ್ಧರಿಸಿದೆ. ಅಧಿವೇಶನ ಮುಂದುವರಿಸುವ ಕುರಿತು ಡಿಸೆಂಬರ್ 9ರಂದು ಸ್ಪೀಕರ್ ಅಧ್ಯಕ್ಷತೆಯಲ್ಲಿ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಕಾನೂನು ಸಚಿವರು ಎಲ್ಲಾ ರಾಜಕೀಯ ಮುಖಂಡರು, ವಿರೋಧ ಪಕ್ಷದ ಮುಖಂಡರು ಸಭೆ ನಡೆಸಿ ತೀರ್ಮಾನ ಕೈಗೊಳ್ಳಲಾಗುವುದು ಎಂದರು. ಅಧಿವೇಶನದಲ್ಲಿ ರಾಜ್ಯದ ಅಭಿವೃದ್ಧಿ ಅದರಲ್ಲೂ ವಿಶೇಷವಾಗಿ ಉತ್ತರ ಕರ್ನಾಟಕದ ಅಭಿವೃದ್ಧಿ ಕುರಿತು ಚರ್ಚೆ ಯಾಗಬೇಕಿದೆ. ಇದರಿಂದ ಆ ಭಾಗದ ಜನರ ಭಾವನೆಗಳನ್ನು ಗೌರವಿಸಿದಂತಾಗುತ್ತದೆ. ಈ ನಿಟ್ಟಿನಲ್ಲಿ ಆಡಳಿತ ಪಕ್ಷ ಹಾಗೂ ಪ್ರತಿಪಕ್ಷ ಸಹಕರಿಸಬೇಕು ಎಂದು ಮನವಿ ಮಾಡಿದರು.

# ಧರ್ಮಸ್ಥಳ ಯೋಜನೆಯಿಂದ ಉಚಿತ ಟ್ಯೂಷನ್ ಕ್ಲಾಸ್

**ಹುಳಿಯಾರು:** ಹುಳಿಯಾರು ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನ ವಿಕಾಸ ಕಾರ್ಯಕ್ರಮದಡಿ ಹಂದನಕೆರೆ ವಲಯದ ಕಾಳಿದಾಸ ಪ್ರೌಢಶಾಲೆಯಲ್ಲಿ ಉಚಿತ ಟ್ಯೂಷನ್ ಕ್ಲಾಸ್ ಕಾರ್ಯಕ್ರಮವನ್ನು ಗುರುವಾರ ಆರಂಭಿಸಲಾಯಿತು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಹುಳಿಯಾರು ಯೋಜನಾಧಿಕಾರಿ ರಾಮಚಂದ್ರ ಅವರು ಚಾಲನೆ ನೀಡಿ ಮಾತನಾಡಿ ಶಿಕ್ಷಣ ನಗರದ ಪ್ರದೇಶದ ಮಕ್ಕಳಿಗೆ ಮಾತ್ರವಲ್ಲ ಅದು ಗ್ರಾಮೀಣ ಪ್ರದೇಶದ ಸರ್ಕಾರಿ ಶಾಲೆ ಮಕ್ಕಳಿಗೂ ದೊರಕಬೇಕು ಎನ್ನುವುದು ಡಾ.ವೀರೇಂದ್ರ ಹೆಗ್ಗಡೆ ಹಾಗೂ ಹೇಮಾವತಿ ಅಮ್ಮನವರ ಆಶಯವಾಗಿದೆ. ಹಾಗಾಗಿ ಹಳ್ಳಿ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯ ದೃಷ್ಠಿಯಿಂದ ಉಚಿತವಾಗಿ ಟ್ಯೂಷನ್ ಕ್ಲಾಸ್ ಆರಂಭಿಸಲಾಗಿದ್ದು ವಿದ್ಯಾರ್ಥಿಗಳ ಇದರ ಸದ್ಬಳಕೆ ಮಾಡಿಕೊಂಡು ಹೆಚ್ಚು ಅಂಕಗಳೊಂದಿಗೆ ಉತ್ತೀರ್ಣರಾಗಬೇಕು ಎಂದರು. 14 ವಯಸ್ಸು ಹುಚ್ಚು ಕೊಡಿಯ ಮನಸ್ಸು ಅದರಿಂದ ಯಾವುದೆ ದುಶ್ಚಟಗಳಿಗೆ ಬಲಿಯಾಗದೆ ವಿದ್ಯೆಯಲ್ಲಿ ತೊಡಗಿಸಿಕೊಂಡರೆ ಜೀವನದಲ್ಲಿ ಯಶಸ್ಸು ಕಂಡಿತ ದೊರಕುತ್ತದೆ. ಯಾರಿಂದಲೂ ಕದಿಯಲಾಗದ ಸಂಪತ್ತು ಎಂದರೆ ಅದು ವಿದ್ಯೆ. ಹಾಗಾಗಿ ವಿದ್ಯೆ ಕಲಿಯುವ ವಯಸ್ಸಿನಲ್ಲಿ ಮೊಬೈಲ್ ದಾಸರಾಗದೆ ಶ್ರದ್ಧೆಯಿಂದ ಕಲಿಯಬೇಕು ಎಂದರು. ಶಾಲೆಯ ಮುಖ್ಯೋಪಾಧ್ಯಾಯರಾದ ದಾನಪ್ಪ, ಒಕ್ಕೂಟದ ಅಧ್ಯಕ್ಷರಾದ ಗೌರಮ್ಮ, ಉಪಾಧ್ಯಕ್ಷರಾದ ಕಮಲಮ್ಮ, ವಲಯದ ಮೇಲ್ವಿಚಾರಕ ಹರೀಶ್‌ಕುಮಾರ, ಜ್ಞಾನ ವಿಕಾಸ ಸಮನ್ವಯ ಅಧಿಕಾರಿ ಸುನಿತಾ, ಸೇವಾಪ್ರತಿನಿಧಿ ವೇದಮೂರ್ತಿ, ಸಲ್ಮಾನ್, ಶಿಕ್ಷಕರರಾದ ಮನೋಹರ್, ಶ್ರೀನಿವಾಸ್ ಮತ್ತಿತರರು ಉಪಸ್ಥಿತರಿದ್ದರು.



### ಕಾಸಿಯಾ ಅಧ್ಯಕ್ಷ ಎಂ.ಜಿ ರಾಜಗೋಪಾಲ್ ಅನಿಸಿಕೆ

# ರಾಜ್ಯ, ರಾಷ್ಟ್ರದ ಬೆಳವಣಿಗೆಗೆ ಸಣ್ಣ ಕೈಗಾರಿಕೆಗಳ ಕೊಡುಗೆ ಅಪಾರ

**ಚಾಮರಾಜನಗರ:** ರಾಜ್ಯ, ರಾಷ್ಟ್ರದ ಬೆಳವಣಿಗೆಗೆ ಸಣ್ಣ ಕೈಗಾರಿಕೆಗಳ ಕೊಡುಗೆ ಅಪಾರವಾಗಿದ್ದು, ಸಣ್ಣ ಮತ್ತು ಸೂಕ್ಷ್ಮ ಕೈಗಾರಿಕೆಗಳು ಕೃಷಿ ಕ್ಷೇತ್ರದ ನಂತರ ಹೆಚ್ಚು ಉದ್ಯೋಗಾವಕಾಶಗಳನ್ನು ನೀಡುತ್ತಿದೆ ಎಂದು ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘದ (ಕಾಸಿಯಾ) ಅಧ್ಯಕ್ಷರಾದ ಎಂ.ಜಿ ರಾಜಗೋಪಾಲ್ ಅವರು ತಿಳಿಸಿದರು.

ನಗರದ ನಿಜಗುಣ ರೆಸಾರ್ಟ್‌ನಲ್ಲಿಂದು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನಾ ಕೇಂದ್ರ (ವಿ.ಟಿ.ಪಿ.ಸಿ) ಹಾಗೂ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ಸಹಯೋಗದಲ್ಲಿ ಎಂ.ಎಸ್.ಎಂ.ಇ.ಗಳ ಕಾರ್ಯಕ್ಷಮತೆ ಹೆಚ್ಚಳ ಮತ್ತು ವೇಗಗೊಳಿಸವ (ರ್‍ಯಾಂಪ್) ಯೋಜನೆಯಡಿಯಲ್ಲಿ ಲೀನ್ ಯೋಜನೆ ಮತ್ತು ಝಡ್.ಇ.ಡಿ. ಹಾಗೂ ರಫ್ತು ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಅಭಿವೃದ್ಧಿಯಲ್ಲಿ ಸಣ್ಣ ಕೈಗಾರಿಕೆಗಳ ಪಾತ್ರ ಮಹತ್ತರವಾಗಿದೆ. ಉದ್ಯೋಗ ಅವಕಾಶಗಳನ್ನು ಸಾಕಷ್ಟು ಒದಗಿಸುತ್ತಿದೆ. ಹೆಚ್ಚು ಕೈಗಾರಿಕೆಗಳು ಸ್ಥಾಪನೆಯಾಗುವುದರಿಂದ ದೇಶದ ಪ್ರಗತಿಗೆ ಸಹಕಾರಿಯಾಗಲಿದೆ. ಹೀಗಾಗಿ ಸಣ್ಣ ಕೈಗಾರಿಕೆಗಳು ಬೆಳವಣಿಗೆಯಾಗಬೇಕು ಎಂದರು.

ಜಿಲ್ಲೆಯಲ್ಲಿರುವ ನೈಸರ್ಗಿಕ, ಮಾನವ ಸಂಪನ್ಮೂಲಗಳನ್ನು ಸಮರ್ಪಕವಾಗಿ ಉಪಯೋಗಿಸಿಕೊಂಡು ಕೈಗಾರಿಕೆಗಳ



ಅಭಿವೃದ್ಧಿಯನ್ನು ಬಲವರ್ಧನೆಗೊಳಿಸಬೇಕಿದೆ. ಚಾಮರಾಜನಗರ ಜಿಲ್ಲೆಯು ಕೈಗಾರಿಕಾ ಕ್ಷೇತ್ರದಲ್ಲಿ ರಾಜ್ಯಕ್ಕೆ ಮಾದರಿಯಾಗುವಂತೆ ಮಾಡಬೇಕು. ಕೈಗಾರಿಕೆಗಳ ಬೆಳವಣಿಗೆಗೆ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ ಎಂದು ಅವರು ಹೇಳಿದರು.

ಸಣ್ಣ ಕೈಗಾರಿಕೆ ಕ್ಷೇತ್ರ ಬೆಳೆದು ರಫ್ತು ಹೆಚ್ಚಾಗಿ ಆಮದು ಕಡಿಮೆಯಾಗಬೇಕು. ವಿಶ್ವಬ್ಯಾಂಕ್ ಮತ್ತು ಸರ್ಕಾರ ಜೊತೆಗೂಡಿ ಎಂಎಸ್‌ಎಂಇ ಗಳ ಕಾರ್ಯಕ್ಷಮತೆ ಹೆಚ್ಚಳ ಹಾಗೂ ವೇಗಗೊಳಿಸುವ (ಆರ್‌ಎಎಂಪಿ) ಯೋಜನೆಯನ್ನು ಜಾರಿಗೆ ತರಲಾಗಿದೆ. ಇದರಿಂದ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಯನ್ನು ತಂತ್ರಜ್ಞಾನ, ಮಾರುಕಟ್ಟೆ ವ್ಯವಸ್ಥೆಗೆ ತಕ್ಕಂತೆ ಪರಿವರ್ತನೆಗೊಳಿಸಬಹುದಾಗಿದೆ ಎಂದು ಕಾಸಿಯಾ ಅಧ್ಯಕ್ಷರಾದ ಎಂ.ಜಿ ರಾಜಗೋಪಾಲ್ ಅವರು ತಿಳಿಸಿದರು.

ಜಿಲ್ಲಾ ಗ್ರಾನೈಟ್ ಮಾಲೀಕರ ಸಂಘದ ಅಧ್ಯಕ್ಷರಾದ ಜಿ.ಎಂ ಹೆಗ್ಡೆ ಅವರು ಮಾತನಾಡಿ ಜಿಲ್ಲೆಯ ಕೈಗಾರಿಕಾ ಪ್ರದೇಶ ಅಭಿವೃದ್ಧಿಯಲ್ಲಿ ಮುಖ್ಯಮಂತ್ರಿಗಳ ಕೊಡುಗೆ ದೊಡ್ಡದಿದೆ. ಬಹಳ?ಟ್ಟು ಕೈಗಾರಿಕೆಗಳು, ಜಿಲ್ಲೆಯಲ್ಲಿ ಸ್ಥಾಪನೆಯಾಗುತ್ತಿರುವುದು ಸಂತಸ ತಂದಿದೆ. ಜಿಲ್ಲೆಯ ಜನತೆಗೆ ಉದ್ಯೋಗ ದೊರೆಯಲು ಸಹಕಾರಿಯಾಗಲಿದೆ. ಗ್ರಾನೆಟ್ ಮಾಲಿಕರ ಸಂಘವು ಕೈಗಾರಿಕೆಗಳಲ್ಲಿ ಮಾನವ ಸಂಪನ್ಮೂಲಕ್ಕೆ ಬೇಕಾಗಿರುವ ಕೌಶಲಗಳ ತರಬೇತಿ ನೀಡುತ್ತಿದೆ ಎಂದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಟಿ. ದಿನೇಶ್ ಅವರು ಮಾತನಾಡಿ ಪ್ರತಿ ಜಿಲ್ಲೆಯಲ್ಲಿ ವರ್ಷಕ್ಕೆ 5 ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಪದವಿ ಪೂರ್ಣಗೊಳಿಸಿ ಹೊರ ಬರುತ್ತಿದ್ದಾರೆ.ಇವರಿಗೆ ಕೈಗಾರಿಕಾ ಕ್ಷೇತ್ರದಲ್ಲಿ ಹೆಚ್ಚಿನ ಉದ್ಯೋಗಾವಕಾಶ ಕಲ್ಪಿಸುವುದು ಅಥವಾ ಸ್ವತಃ ಅವರೇ ಸಣ್ಣ ಕೈಗಾರಿಕೆಗಳನ್ನು ಆರಂಭಿಸಲು ಮಾರ್ಗದರ್ಶನ ನೀಡಿ ಉದ್ಯೋಗಾವಕಾಶವನ್ನು ಸೃಷ್ಟಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದರು.

ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳು ನಮ್ಮ ದೇಶದ ಕೈಗಾರಿಕಾ ಕ್ಷೇತ್ರದ ಬೆನ್ನೆಲುಬಾಗಿದೆ. ಬದಲಾಗುತ್ತಿರುವ ಮಾರುಕಟ್ಟೆ ವ್ಯವಸ್ಥೆಯಲ್ಲಿ ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳನ್ನು ಸಧೃಢಗೊಳಿಸುವುದು ನಮ್ಮ ಕಾರ್ಯಕ್ರಮದ ಮೂಲ ಗುರಿಯಾಗಿದೆ ಎಂದು ಟಿ. ದಿನೇಶ್ ಅವರು ತಿಳಿಸಿದರು.

ಜಿಲ್ಲಾ ಸಣ್ಣ ಕೈಗಾರಿಕೆಗಳ ಸಂಘದ ಅಧ್ಯಕ್ಷರಾದ ಎ. ಜಯಸಿಂಹ, ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ವಿ. ಪ್ರಭಾಕರ್, ಉಪಾಧ್ಯಕ್ಷರಾದ ಬಿ.ಆರ್. ಗಣೇಶ್‌ರಾವ್, ಗ್ರಾಮೀಣ ಜಂಟಿ ಕಾರ್ಯದರ್ಶಿ ಎನ್. ಸತೀಶ್, ಖಜಾಂಚಿ ಎಚ್. ಮಂಜುನಾಥ್, ಜಿಲ್ಲಾಭಿವೃದ್ಧಿ ಉಪಸಮಿತಿಯ ಅಧ್ಯಕ್ಷರಾದ ಮಂಜುನಾಥ್, ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಸಂಜೆ ಟಿಪ್ಸ್

## ಪೌಷ್ಟಿಕಾಂಶ ಉತ್ಪನ್ನ ಪರಿಚಯ

ಭಾರತದಲ್ಲಿ ನಡೆದ 2024 ರ ನ್ಯಾಶನಲ್ ಪಲ್ಮನರಿ ಕಾನ್ಫರೆನ್ಸ್ ನಲ್ಲಿ, ವೈದ್ಯಕೀಯ ಪೋಷಣೆಯಲ್ಲಿ ವಿಶ್ವ ಪ್ರವರ್ತಕರಾದ ಡಚ್ ಮೆಡಿಕಲ್ ಫುಡ್ B.V., ಪ್ರಿಸ್ಟೈನ್ ಪರ್ಲ್ ಫಾರ್ಮಾ ಪ್ರೈ. ಲಿ. ಸಂಸ್ಥೆಯ ಸಹಯೋಗದೊಂದಿಗೆ, ಉಸಿರಾಟದ ಸಂಬಂಧಿತ ಅಸ್ವಸ್ಥತೆಗಳನ್ನು ಗುರಿಯಾಗಿಟ್ಟುಕೊಂಡು ವಿಶೇಷ ಪೌಷ್ಟಿಕಾಂಶದ ಉತ್ಪನ್ನಗಳ ಪರಿಚಯವನ್ನು ಹೆಮ್ಮೆಯಿಂದ ಘೋಷಿಸಿದೆ . ಭಾರತದಲ್ಲಿ ಸಾವು ಮತ್ತು ಅಂಗವೈಕಲ್ಯಕ್ಕೆ ಮುಖ್ಯ ಕಾರಣಗಳಲ್ಲಿ ಒಂದಾದ COPD (ದೀರ್ಘಕಾಲದ ಪ್ರತಿರೋಧಕ ಶ್ವಾಸಕೋಶದ ಕಾಯಿಲೆ ಯು, 55.3 ಮಿಲಿಯನ್ಗಿಂತಲೂ ಹೆಚ್ಚು ಜನರ ಮೇಲೆ ಪರಿಣಾಮ ಬೀರುತ್ತದೆ. ಇದು ಆಗಾಗ್ಗೆ ದೀರ್ಘಕಾಲದ ಅಪೌಷ್ಟಿಕತೆಯ ಕಾರಣದಿಂದ ಬರುತ್ತದೆ, ಹಾಗೂ ಆರೋಗ್ಯದ ಸ್ಥಿತಿಯನ್ನು ಹದಗೆಡಿಸುತ್ತದೆ. COPD ಮತ್ತು ಇತರೆ ಉಸಿರಾಟ ಸಂಬಂಧಿತ ತೊಂದರೆಗಳುಳ್ಳ ರೋಗಿಗಳಲ್ಲಿ ಕಂಡುಬರುವ ಪೌಷ್ಟಿಕಾಂಶ ಕೊರತೆಗಳನ್ನು ನೀಗಿಸಿ, ಜೀವನ ಶೈಲಿ ಮತ್ತು ಗುಣಮಟ್ಟವನ್ನು ಸುಧಾರಿಸುವ ದೃಷ್ಟಿಯಿಂದ ಈ ನವೀನ ಉತ್ಪನ್ನಗಳನ್ನು ತಯಾರಿಸಲಾಗಿದೆ. ನಿಶ್ಯಕ್ತಿ ಮತ್ತು ಸ್ನಾಯುಸವೆತದೊಂದಿಗೆ, ಪೌಷ್ಟಿಕಾಂಶ ಕೊರತೆಯಿಂದ ಈ ರೋಗಿಗಳಲ್ಲಿ ಚೇತರಿಕೆ ನಿಧಾನಗೊಳ್ಳುವುದಲ್ಲದೆ, ಸಾಮಾನ್ಯ ಆರೋಗ್ಯವೂ ಅಪಾಯಕಾರಿ ಹಂತಕ್ಕೆ ಹದಗೆಡುತ್ತದೆ. ಪ್ರಮಾಣಿತ ಚಿಕಿತ್ಸಾ ಪದ್ದತಿಗಳೊಂದಿಗೆ ನಮ್ಮ ಉತ್ಪನ್ನಗಳ ಬಳಕೆ, ಈ ಪೌಷ್ಟಿಕಾಂಶ ಕೊರತೆಯನ್ನು ನೀಗಿಸುತ್ತದೆ ಎಂದು ಡಚ್ ಮೆಡಿಕಲ್ ಫುಡ್ನ ಸಹ-ಸಂಸ್ಥಾಪಕ ಡಾ. ಗುರು ರಾಮನಾಥನ್ ಹೇಳಿದರು. ರೋಗ-ಸಂಬಂಧಿತ ಅಪೌಷ್ಟಿಕತೆಯನ್ನು ಎದುರಿಸಲು, ಈ ಉಪಕ್ರಮವು ಭಾರತದಲ್ಲಿ ವೈಯಕ್ತಿಕಗೊಳಿಸಿದ ಪೌಷ್ಟಿಕಾಂಶ ಪದ್ಧತಿಯ ಹೊಸ ಯುಗದ ಆರಂಭವನ್ನು ಸೂಚಿಸುತ್ತದೆ. `NAPCON ನಲ್ಲಿ ಈ ಪರಿಹಾರಗಳನ್ನು ಪ್ರಸ್ತುತಪಡಿಸುವ ಮೂಲಕ, ಚಿಕಿತ್ಸೆಯ ಕಟ್ಟುಪಾಡುಗಳಿಗೆ ಪೂರಕವಾದ ಉಪಯುಕ್ತ ಆಹಾರ ಸಂಪನ್ಮೂಲಗಳೊಂದಿಗೆ ಭಾರತದಲ್ಲಿ ವೈದ್ಯಕೀಯ ವೃತ್ತಿಪರರನ್ನು ಸಜ್ಜುಗೊಳಿಸಲು ನಾವು ಆಶಿಸುತ್ತೇವೆ.'' ಎಂದು ಡಚ್ ಮೆಡಿಕಲ್ ಫುಡ್ ಸಹ-ಸಂಸ್ಥಾಪಕ ಡಾ. ರೋಲ್ಫ್ ಸ್ಮೀಟ್ಸ್ ಹೇಳಿದರು. ಡಚ್ ಮೆಡಿಕಲ್ ಫುಡ್ ನ ವೈಜ್ಞಾನಿಕ ನೈಪುಣ್ಯ ಹಾಗು ಪ್ರಿಸ್ಟೈನ್ ಪರ್ಲ್ ನ ಭಾರತದಲ್ಲಿನ ಆರೋಗ್ಯ ವ್ಯವಸ್ಥೆಯ ಬಗೆಗಿನ ತಿಳಿವಳಿಕೆಯ ಸಹಯೋಗದಲ್ಲಿ ಈ ಆಧುನಿಕ ಉತ್ಪನ್ನಗಳು ಮೂಡಿ ಬಂದಿದ್ದು, ಇವು ಭಾರತದಲ್ಲಿನ ರೋಗಿಗಳ ಅನನ್ಯ ಅವಶ್ಯಕತೆಗಳಿಗೆ ಅನುಗುಣವಾಗಿವೆ. ಸಾಕ್ಷ್ಯ ಆಧಾರಿತ ಉತ್ತಮ ಗುಣಮಟ್ಟದ ಪರಿಕ್ರಮಗಳನ್ನು ಒದಗಿಸಿ, ದೇಶಾದ್ಯಂತ ರೋಗಿಗಳ ಆರೋಗ್ಯ ಸುಧಾರಣೆಯನ್ನು ತರಲು ನಾವು ಬದ್ಧರಾಗಿರುವುದನ್ನು ಈ ಉತ್ಪನ್ನಗಳು ಇಂದು ಪ್ರತಿಬಿಂಬಿಸುತ್ತಿವೆ ಎಂದು ಪ್ರಿಸ್ಟೈನ್ ಪರ್ಲ್ನ ವ್ಯವಸ್ಥಾಪಕ ನಿರ್ದೇಶಕ ಎಸ್.ಎಂ. ಅಯೂಬ್ ಹೇಳಿದರು.

## ಬಾಳೆಹೂವಿನ ಪಲ್ಯ

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಬಾಳೆ ಕುಂಡಿಕೆ (ಚಿಕ್ಕದಾಗಿ ಹೆಚ್ಚಿಕೊಂಡಿದ್ದು), ಎಣ್ಣೆ, ಸಾಸಿವೆ, ಒಣಮೆಣಸು, ಉದ್ದಿನಬೇಳೆ, ಬೇವಿನಸೊಪ್ಪು, ಹುಣಸೆಹಣ್ಣು, ಖಾರದ ಪುಡಿ, ಬೆಲ್ಲ, ಅರಿಸಿನ ಪುಡಿ, ಉಪ್ಪು, ನೀರು.

### ಮಾಡುವ ವಿಧಾನ

ಬಾಣಲೆಗೆ ಮೂರ ಚಮಚ ಎಣ್ಣೆ ಹಾಕಿ ಬಿಸಿಯಾದ ಮೇಲೆ ಒಂದು ಚಮಚ ಸಾಸಿವೆ, ನಾಲ್ಕು ಮೆಣಸು, ಒಂದು ಚಮಚ ಉದ್ದಿನಬೇಳೆ ಹಾಕಿ ಹುರಿದುಕೊಳ್ಳಿ. ಅದಕ್ಕೆ ಸ್ವಲ್ಪ ಕರಿಬೇವು ಸೇರಿಸಿ. ಒಗ್ಗರಣೆ ತಯಾರಾದ ನಂತರ ಹೆಚ್ಚಿಕೊಂಡ ಬಾಳೆಹೂ ಅಥವಾ ಕುಂಡಿಕೆಯನ್ನು ಸೇರಿಸಿ. ಇದಕ್ಕೆ ಸ್ವಲ್ಪ ಹುಣಸೆರಸ ಅಥವಾ ಮೊಸರು ಸೇರಿಸಬಹುದು. ಈ ಎಲ್ಲವನ್ನೂ ಮಿಶ್ರಣ ಮಾಡಿ. ಇದಕ್ಕೆ ಖಾರದಪುಡಿ ಹಾಗೂ ರುಚಿಗೆ ತಕ್ಕಷ್ಟು ಉಪ್ಪನ್ನು ಸೇರಿಸಿ ಎಲ್ಲವನ್ನೂ ಚೆನ್ನಾಗಿ ಮಿಶ್ರಣ ಮಾಡಿ. ಅರ್ಧ ಗ್ಲಾಸಿನಷ್ಟು ನೀರು ಸೇರಿಸಿ ಚೆನ್ನಾಗಿ ಬೇಯಿಸಿ. ಸಾಧಾರಣವಾಗಿ ಇದನ್ನು ಬೇಯಿಸಲು 10 ನಿಮಿಷ ಸಾಕು. ಸಂಪೂರ್ಣವಾಗಿ ಬೆಂದ ನಂತರ ಮುಚ್ಚಳ ತೆಗೆದು ಇನ್ನೊಂದು ಸಲ ಸೌಟಿನಲ್ಲಿ ಕೈಯಾಡಿಸಿ ನೀರು ಉಳಿಯದಂತೆ ನೋಡಿಕೊಳ್ಳಬೇಕು. ಒಲೆ ಅಥವಾ ಸ್ಟೌನಿಂದ ಪಾತ್ರೆಯನ್ನು ಇಳಿಸಿದ ನಂತರ ತೆಂಗಿನತುರಿ ಹಾಕಿ ಮಿಶ್ರಣ ಮಾಡಿ. ಇಷ್ಟಾದರೆ ಬಿಸಿಬಿಸಿಯಾದ, ಆರೋಗ್ಯಕರ ಬಾಳೆ ಹೂವಿನ ಪಲ್ಯ ಸವಿಯಲು ಸಿದ್ಧ.



## ಮಲೈಕಾ ಅರೋರಾ ಜೀವನದಲ್ಲಿ ಹೊಸ ವ್ಯಕ್ತಿ ಪ್ರವೇಶ!

ಮಲೈಕಾ ಆರೋರಾ ಅವರು ಅರ್ಜುನ್ ಕಪೂರ್ ಅವರೊಂದಿಗಿನ ಬ್ರೇಕ್ಅಪ್ ನಂತರ ಸದಾ ಸುದ್ದಿಯಲ್ಲಿದ್ದಾರೆ, ಕೆಲವೊಮ್ಮೆ ಅವರು ಪರಸ್ಪರ ಹೇಳಿಕೆಗಳಿಂದ ಮತ್ತು ಕೆಲವೊಮ್ಮೆ ಅವರು ಹಂಚಿಕೊಂಡ ಫೋಟೋಗಳಿಂದಾಗಿ ಮುಖ್ಯಾಂಶಗಳಲ್ಲಿ ಉಳಿದಿದ್ದಾರೆ.. ಇದೀಗ ಮಲೈಕಾ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಇದೇ ರೀತಿಯ ಫೋಟೋವನ್ನು ಹಂಚಿಕೊಂಡಿದ್ದು, ಸದ್ಯ ಎಲ್ಲೆಡೆ ಚರ್ಚೆಯಾಗುತ್ತಿದೆ. ಮಲೈಕಾ ಶೇರ್ ಮಾಡಿರುವ ಫೋಟೋ ಪ್ರಕಾರ ಆಕೆ ಹೊಸ ಜೀವನ ಆರಂಭಿಸಲಿದ್ದಾಳೆ... ಮಲೈಕಾ ಅವರ ಈ ಫೋಟೋ ತನ್ನ ಮಗ ಅರ್ಹಾನ್ನೊಂದಿಗೆ ಇದೆ.. ನಟಿ ಅವರೊಂದಿಗೆ ಮುಂಬೈನಲ್ಲಿ ತನ್ನ ಸ್ವಂತ ವ್ಯವಹಾರವನ್ನು ಪ್ರಾರಂಭಿಸಿದ್ದಾಳೆ. ಈ ಬಗ್ಗೆ ಇನ್ಸ್ಟಾಗ್ರಾಮ್ ನಲ್ಲಿ ಪೋಸ್ಟ್ ಮಾಡುವ ಮೂಲಕ ಮಾಹಿತಿ ನೀಡಿದ್ದಾರೆ. ಹೌದು ಮಲೈಕಾ ತನ್ನ ಮಗ ಅರ್ಹಾನ್ನೊಂದಿಗೆ ಹೊಸ ರೆಸ್ಟೋರೆಂಟ್ ಅನ್ನು ಪ್ರಾರಂಭಿಸಿದ್ದಾರೆ. ಈ ರೆಸ್ಟೋರೆಂಟ್ನ ಹೆಸರು 'ಸ್ಕಾರ್ಲೆಟ್ ಹೌಸ್'. ಬಾಂದ್ರಾದಲ್ಲಿರುವ 90 ವರ್ಷ ಹಳೆಯ ಪೋರ್ಚುಗೀಸ್ ಬಂಗಲೆಯಲ್ಲಿ ಈ ಸುಂದರವಾದ ರೆಸ್ಟೋರೆಂಟ್ ನಿರ್ಮಿಸಲಾಗಿದೆ. ಈ ರೆಸ್ಟೋರೆಂಟ್ ಅನ್ನು ಕಡುಗೆಂಪು ಬಣ್ಣದಲ್ಲಿ ಚಿತ್ರಿಸಲಾಗಿದೆ. ಬೀನಾ ನೊರೊನ್ಹಾ ಈ ರೆಸ್ಟೋರೆಂಟ್ನ ಮುಖ್ಯ ಬಾಣಸಿಗ. ಮಲೈಕಾಗೆ ಅವರೇ ಆರೋಗ್ಯಕರ ಆಹಾರವನ್ನು ತಯಾರಿಸುತ್ತಾರೆ. ರೆಸ್ಟಾರೆಂಟ್ನ ಮೆನುವು ಋತುಮಾನದ ಹಣ್ಣು ಸಲಾಡ್ಗಳು, ರಾಗಿ ನೂಡಲ್ಸ್, ಜಪಾನೀಸ್ ಕಾಫಿ ದರ್ಜೆಯ ಮಚ್ಚಾ, ಅಂಟು-ಮುಕ್ತ ಹೊದಿಕೆಗಳು ಮತ್ತು ಸೋರ್ಗಮ್ ರಿಸೊಟ್ಟೊದಂತಹ ಭಕ್ಷ್ಯಗಳನ್ನು ಒಳಗೊಂಡಿರುತ್ತದೆ. ಮಲೈಕಾ ಹಂಚಿಕೊಂಡಿರುವ ಈ ಶುಭ ಸುದ್ದಿಯಿಂದ ಅಭಿಮಾನಿಗಳು ಕೂಡ ಖುಷಿಯಾಗಿದ್ದಾರೆ. ಅವರ ಪೋಸ್ಟ್ಗೆ ಕಾಮೆಂಟ್ ಮಾಡುವ ಮೂಲಕ ಈ ವ್ಯವಹಾರಕ್ಕೆ ಶುಭ ಹಾರೈಸಿದ್ದಾರೆ. ಅರ್ಜುನ್ ಕಪೂರ್ ಜೊತೆಗಿನ ಬ್ರೇಕಪ್ ನಂತರ ಮಲೈಕಾ ಸಾಮಾಜಿಕ ಜಾಲತಾಣದಲ್ಲಿ ತುಂಬಾ ಸಕ್ರಿಯವಾಗಿದ್ದಾರೆ. ಅವರು ಖಟಿಣಚಿರಿಂಡಿಚಿಟ ನಲ್ಲಿ ಅನೇಕ ಪೋಸ್ಟ್ಗಳನ್ನು ಹಂಚಿಕೊಳ್ಳುತ್ತಾರೆ. ನನ್ನನ್ನು ಇಷ್ಟಪಡದವರಿಗೆ ನನಗೆ ಸಮಯವಿಲ್ಲ. ಏಕೆಂದರೆ ನನ್ನನ್ನು ಪ್ರೀತಿಸುವವರೊಂದಿಗೆ ನಾನು ತುಂಬಾ ಬ್ಯುಸಿಯಾಗಿದ್ದೇನೆ,'' ಎಂದು ಅವರು ಇತ್ತೀಚೆಗೆ ಪೋಸ್ಟ್ ಮಾಡಿದ್ದಾರೆ. ಹಾಗಾಗಿ ಆಕೆ ಇದೆಲ್ಲದರಿಂದ ಹೊರಬಂದು ಹೊಸ ಜೀವನ ಆರಂಭಿಸಲು ಸಿದ್ಧಳಾಗಿರುವುದನ್ನು ಕಾಣಬಹುದು.

## ಉಸಿರಾಟದ ತೊಂದರೆ ನಿವಾರಣೆಗೆ ಮನೆಮದ್ದುಗಳು

### ಹೆಲ್ತ್ ಟಿಪ್ಸ್

ನಾವೆಲ್ಲಾ ನೋವನ್ನು ಸ್ವಲ್ಪ ಹೊತ್ತು ತಡೆಯಬಹದೇನೋ ಆದರೆ ಉಸಿರಾಟದ ತೊಂದರೆಯಾದರೆ ಅದು ಯಾತನಾಮಯವಾಗಿರುತ್ತದೆ. ಹಲವು ಮೆಟ್ಟಿಲುಗಳನ್ನು ಹತ್ತಿದ ನಂತರ ಅಥವಾ ಶೀತದಿಂದ ಬಳಲುತ್ತಿರುವಾಗ ನಾವೆಲ್ಲಾ ಉಸಿರಾಟದ ಸಮಸ್ಯೆಯನ್ನು ಸಾಮಾನ್ಯವಾಗಿ ಅನುಭವಿಸಿರುತ್ತೇವೆ. ಉಸಿರಾಟದ ತೊಂದರೆ ಅನೇಕ ಕಾರಣಗಳಿಂದಾಗಿ ಬರುತ್ತದೆ. ಕೆಲವರಿಗೆ ಇದು ತಾತ್ಕಾಲಿಕವಾಗಿರಬಹುದು ಅಥವಾ ಕೆಲವು ಗಂಭೀರವಾದ ಆರೋಗ್ಯ ಸಮಸ್ಯೆಯಿಂದಾಗಿ ಕಾರಣದಿಂದಾಗಿ ಇರಬಹುದು. ಉಸಿರಾಟದ ಸಮಸ್ಯೆ ತೀವ್ರವಾಗಿರದಿದ್ದರೆ ಮನೆಯಲ್ಲಿ ಸುಲಭವಾಗಿ ನಿರ್ವಹಿಸಬಹುದು. ಆದರೆ ಇದು ನಿಮಗೆ ಎರಡನೇ ದಿನವೂ ಸಂಭವಿಸಿದರೆ ನಿಮ್ಮ ವೈದ್ಯರನ್ನು ಸಂಪರ್ಕಿಸುವುದು ಉತ್ತಮ. ಆದರೆ ನಿಮ್ಮ ಉಸಿರಾಟದ ತೊಂದರೆ ನಿವಾರಣೆಗೆ ಕೆಲವು ಸರಳ ಮನೆ ಮದ್ದುಗಳು ಲಭ್ಯವಿದ್ದು, ಇವುಗಳನ್ನು ಉಪಯೋಗಿಸುವುದರಿಂದ ಪರಿಹಾರ ಸಿಗುವುದು ಖಚಿತ. ಕಾಫಿಯಲ್ಲಿ ಕೆಫೀನ್ ಇದ್ದು, ಇದು ವಾತಾಯನದಲ್ಲಿ ಇರುವ ಸ್ನಾಯುಗಳಲ್ಲಿನ ಬಿಗಿತವನ್ನು ಕಡಿಮೆ ಮಾಡುತ್ತದೆ. ಈ ಪರಿಹಾರವು ಅಸ್ತಮಾದಿಂದ ಬಳಲುತ್ತಿರುವ ಜನರಿಗೆ ಸಾಕಷ್ಟು ಪರಿಣಾಮಕಾರಿ ಎಂದು ಸಾಬೀತಾಗಿದೆ. ಕಪ್ಪು ಕಾಫಿ ಶ್ವಾಸಕೋಶದ ಕಾರ್ಯವನ್ನು ಸುಧಾರಿಸುತ್ತದೆ ಮತ್ತು ಉಸಿರಾಟದ ಸಮಸ್ಯೆಯನ್ನು ನಿವಾರಿಸಲು ಸಹಾಯ ಮಾಡುತ್ತದೆ. ಆದರೆ ಇದು ನಿಮಗೆ ಸರಿ ಬರದಿದ್ದರೆ, ತೊಂದರೆಯುಂಟಾದರೆ ಬಳಸಬೇಡಿ. ನಿಮ್ಮ ಆರೋಗ್ಯ ಚೆನ್ನಾಗಿದ್ದರೆ ಮತ್ತು ಕೆಫೀನ್'ನಿಂದ ಯಾವುದೇ ತೊಂದರೆ ಆಗದಿದ್ದರೆ ನೀವು ದಿನಕ್ಕೆ 400 ಮಿಲಿಗ್ರಾಂ ವರೆಗೆ ಕಾಫಿ ಸೇವಿಸಬಹುದು ಎಂದು ಯು.ಎಸ್. ಫುಡ್ ಅಂಡ್ ಡ್ರಗ್ ಅಡ್ಮಿನಿಸ್ಟ್ರೇಷನ್ (ಎಫ್ಡಿಎ) ಹೇಳುತ್ತದೆ.

ತಾಜಾ ಶುಂಠಿ ಅಥವಾ ಶುಂಠಿ ಚಹಾ ಸೇವಿಸುವುದರಿಂದ ಉಸಿರಾಟದ ಸಮಸ್ಯೆ ನಿವಾರಣೆಯಾಗಲು ಸಹಾಯ ಮಾಡುತ್ತದೆ. ಉಸಿರಾಟದ ಸೋಂಕಿನಿಂದ ಉಂಟಾಗುವ ಉಸಿರಾಟದ ತೊಂದರೆ ಕಡಿಮೆ ಮಾಡಲು ಸಹ ಶುಂಠಿ ಸಹಾಯ ಮಾಡುತ್ತದೆ. ಸಾಮಾನ್ಯವಾಗಿ ಶುಂಠಿ ಉರಿಯೂತದ ಗುಣಗಳನ್ನು ಹೊಂದಿದ್ದು, ಅದು ಶ್ವಾಸಕೋಶದಲ್ಲಿ ಉರಿಯೂತವನ್ನು ಕಡಿಮೆ ಮಾಡುತ್ತದೆ.



ಈ ಸರಳ ಉಸಿರಾಟದ ತಂತ್ರವು ಉಸಿರಾಟದ ಸಮಸ್ಯೆಯನ್ನು ನಿರ್ವಹಿಸಲು ನಿಮಗೆ ಸಹಾಯ ಮಾಡುತ್ತದೆ. ಇದು ನಿಮ್ಮ ಉಸಿರಾಟದ ವೇಗವನ್ನು ನಿಧಾನಗೊಳಿಸಿ, ನಿಮಗೆ ಆರಾಮ ನೀಡುತ್ತದೆ. ನೀವು ಇದನ್ನು ಹೇಗೆ ಮಾಡಬಹುದು ಎಂಬುದು ಇಲ್ಲಿದೆ ನೋಡಿ?

**ಹಂತ 1:** ಆರಾಮದಾಯಕ ಭಂಗಿಯಲ್ಲಿ ಕುಳಿತುಕೊಳ್ಳಿ. ನಿಮ್ಮ ಬೆನ್ನು ನೇರವಾಗಿರಲಿ.

**ಹಂತ 2:** ನಿಮ್ಮ ಮೂಗಿನ ಮೂಲಕ 4 ರಿಂದ 5 ಸೆಕೆಂಡುಗಳವರೆಗೆ ನಿಧಾನವಾಗಿ ಉಸಿರೆಳೆದುಕೊಳ್ಳಿ. ನಿಮ್ಮ ಶ್ವಾಸಕೋಶದ ಬದಲು ನಿಮ್ಮ ಹೊಟ್ಟೆಯನ್ನು ಗಾಳಿಯಿಂದ ತುಂಬಿಸಿ.

**ಹಂತ 3:** ನಿಮ್ಮ ತುಟಿಗಳನ್ನು ಪರ್ಸ್ ಮಾಡಿ ಮತ್ತು 4 ರಿಂದ 6 ಸೆಕೆಂಡುಗಳ ಕಾಲ ಉಸಿರು ಬಿಡಿ.

**ಹಂತ 4:** ಸಾಮಾನ್ಯ ಸ್ಥಿತಿಗೆ ಮರಳಲು ಇದೇ ರೀತಿ 10 ರಿಂದ 20 ಬಾರಿ ಪುನರಾವರ್ತಿಸಿ.

## ಒಣ ಮತ್ತು ಒಡೆದ ತುಟಿಗಳಿಗೆ ಮನೆಮದ್ದು

### ಬ್ಯೂಟಿ ಟಿಪ್ಸ್

ಒಣ ಮತ್ತು ಒಡೆದ ತುಟಿಗಳಿಗೆ ಜೇನುತುಪ್ಪ ಮತ್ತು ಸಕ್ಕರೆ (ಕಂದು ಸಕ್ಕರೆಗೆ ಆದ್ಯತೆ) ಸ್ಕಬ್ ಅನ್ನು ಬಳಸುವುದು ಉತ್ತಮ. ಅವು ಉತ್ಕರ್ಷಣ ನಿರೋಧಕಗಳಲ್ಲಿ ಸಮೃದ್ಧವಾಗಿವೆ ಮತ್ತು ಯುವಿ ಕಿರಣಗಳಿಂದ ರಕ್ಷಣೆಗಾಗಿ ಲಿಪ್ ಬಾಮ್ ಆಗಿಯೂ ಬಳಸಬಹುದು.ಜೇನುತುಪ್ಪ ಮತ್ತು ಸಕ್ಕರೆಯನ್ನು 1: 2 ಅನುಪಾತದಲ್ಲಿ ಮಿಶ್ರಣ ಮಾಡಿ. 5 ರಿಂದ 10 ನಿಮಿಷಗಳ ಕಾಲ ತುಟಿಗಳ ಮೇಲೆ ನಿಧಾನವಾಗಿ ಉಜ್ಜಿಕೊಳ್ಳಿ, ತದನಂತರ ಅದನ್ನು ಉಗುರು ಬೆಚ್ಚಗಿನ ನೀರಿನಿಂದ ತೊಳೆಯಿರಿ. ನಿಂಬೆ ಮತ್ತು ಬಾದಾಮಿ ಎಣ್ಣೆಯ ಮಿಶ್ರಣವು ತುಟಿಗಳು ಬಣ್ಣವನ್ನು ಪಡೆಯಲು ಹೆಚ್ಚು ಪರಿಣಾಮಕಾರಿಯಾಗಿದೆ. ಇದು ತುಟಿಗಳಿಗೆ ತೇವಾಂಶವನ್ನು ಒದಗಿಸಲು ಸಹಕಾರಿಯಾಗಿದೆ. ಅಲ್ಲದೆ ಅವುಗಳನ್ನು ನೈಸರ್ಗಿಕವಾಗಿ ಪೂರಕ ಮತ್ತು ಗುಲಾಬಿ ಬಣ್ಣದಿಂದ ಕಂಗೊಳಿಸುವಂತೆ ಮಾಡುತ್ತದೆ. ಎರಡು ಚಮಚ ಬಾದಾಮಿ ಎಣ್ಣೆಯನ್ನು ತೆಗೆದುಕೊಂಡು, 2 ರಿಂದ 3 ಹನಿ ನಿಂಬೆ ಹಿಂಡಿ. 5 ರಿಂದ 10 ನಿಮಿಷಗಳ ಕಾಲ ಹಾಗೆಯೇ ಬಿಡಿ. ಅದನ್ನು ಉಗುರು ಬೆಚ್ಚಗಿನ ನೀರಿನಿಂದ ತೊಳೆಯಿರಿ. ಹಾಲಿನ ಕೆನೆಯನ್ನು ತುಟಿಗಳಿಗೆ ಹಾಕಿ ಮಸಾಜ್ ಮಾಡುವುದರಿಂದಲೂ ಒಣ ಹಾಗೂ ಒಡೆದ ತುಟಿಯಿಂದ ಮುಕ್ತಿ ಪಡೆಯಬಹುದು. ಇದು ತುಟಿಯನ್ನು ತೇವಾಂಶಯುಕ್ತವಾಗಿರಿಸುವುದಲ್ಲದೆ ಪಿಗ್ಮೆಂಟೇಶನ್ಗೆ ತುಂಬಾ ಪರಿಣಾಮಕಾರಿಯಾಗಿದೆ.



ಚಳಿಗಾಲದಲ್ಲಿ ತುಟಿ ಒಡೆಯುವುದು ಅಥವಾ ಬಿರುಕು ಬಿಟ್ಟರೆ ತುಪ್ಪವನ್ನು ಹಚ್ಚುವುದರಿಂದ ಪ್ರಯೋಜನ ಪಡೆಯಬಹುದು. ಇದು ತುಟಿಯನ್ನು ತೇವಾಂಶಯುಕ್ತವಾಗಿರಿಸುತ್ತದೆ. ಅಲ್ಲದೆ ಒಡೆದ ತುಟಿಗೆ ಶೀಘ್ರ ಪರಿಹಾರ ನೀಡುತ್ತದೆ. ದೇಹದೊಳಗೆ ಸರಿಯಾದ ನೀರಿನ ಮಟ್ಟವನ್ನು ಕಾಪಾಡಿಕೊಳ್ಳುವುದರ ಜತೆಗೆ, ಹೆಚ್ಚಿನ ಹಸಿವನ್ನು ಹೊಂದಿರುವುದು ಮತ್ತು ಪೋಷಕಾಂಶಗಳು ಹಾಗೂ ಖನಿಜಗಳಲ್ಲಿ ಸಮೃದ್ಧವಾಗಿರುವ ಸಮತೋಲಿತ ಆಹಾರವನ್ನು ಸೇವಿಸುವುದು ಅತ್ಯಂತ ಅವಶ್ಯಕವಾಗಿದೆ. ತುಟಿಗಳು ಪ್ರತಿಯೊಬ್ಬರ ದೇಹದ ಅತ್ಯಂತ ಸೂಕ್ಷ್ಮ ಪ್ರದೇಶವಾಗಿದೆ. ಹೀಗಾಗಿ ತುಟಿಗಳ ಆರೈಕೆ ಕೂಡ ಬಹಳ ಮುಖ್ಯ. ಮೇಲೆ ತಿಳಿಸಿದಂತಹ ಸಲಹೆಗಳನ್ನು ಪಾಲಿಸುವ ಮೂಲಕ ಕೋಮಲ ಹಾಗೂ ಮೃದುವಾದ ತುಟಿಯನ್ನು ಪಡೆಯಬಹುದು.

## ಭರವಸೆಯ ಕಥಕ್ ನೃತ್ಯಗಾರ್ತಿ ಅನುಷ್ಕ ಪ್ರಭು 'ಸಮರ್ಪಣ್'

ಖ್ಯಾತ ಕಥಕ್ ನೃತ್ಯ ಕಲಾವಿದೆ- ಗುರು ''ಸ್ಪೇಸ್' ನೃತ್ಯಶಾಲೆಯ ಸಂಸ್ಥಾಪಕ ನಿರ್ದೇಶಕಿ ಅಂಜನಾ ಗುಪ್ತ ಮತ್ತು ಅವರ ಶಿಷ್ಯೆ ಹಾಗೂ ಮಗಳಾದ ಶ್ರುತಿ ಗುಪ್ತ ( ಕ್ರಿಯೇಟಿವ್ ಡೈರೆಕ್ಟರ್- ಸ್ಪೇಸ್) ಇವರ ನುರಿತ ಗರಡಿಯಲ್ಲಿ ತಯಾರಾದ ನೃತ್ಯಶಿಲ್ಪ ಕು. ಅನುಷ್ಕ ಪ್ರಭು ಬಾಲ ಪ್ರತಿಭೆ. ಕರ್ನಾಟಕ ಜ್ಯೂನಿಯರ್ ಮತ್ತು ರವೀಂದ್ರ ಭಾರತಿ ಸೀನಿಯರ್ ಡಿಪ್ಲೊಮಾ ಪದವಿಯಲ್ಲಿ ಅತ್ಯುತ್ತಮ ಅಂಕಗಳೊಂದಿಗೆ ತೇರ್ಗಡೆಯಾಗಿರುವ ಇವಳು, 'ಸ್ಪೇಸ್ ಕಥಕ್ ನೃತ್ಯೋತ್ಸವ'ಗಳಲ್ಲಿ ನರ್ತಿಸಿ ಹಾಗೂ ಇನ್ನಿತರ ನೃತ್ಯ ಪ್ರದರ್ಶನಗಳಲ್ಲಿ ಭಾಗವಹಿಸಿ ಅನುಭವ ಹೊಂದಿದ್ದಾಳೆ. ಇವಳು. ಡಿಸೆಂಬರ್ 1 ? ಭಾನುವಾರದಂದು ಸಂಜೆ 6.30 ಗಂಟೆಗೆ ಕೋರಮಂಗಲದ ಕ್ಲಬ್ ಆವರಣದಲ್ಲಿರುವ 'ಪ್ರಭಾತ್ ಕಲಾದ್ವಾರಕ' ಮಂದಿರದಲ್ಲಿ ವಿದ್ಯುಕ್ತವಾಗಿ ಕಥಕ್ 'ಸಮರ್ಪಣ್' ಮಾಡಲಿದ್ದಾಳೆ. ಈ ಮನಮೋಹಕ ಕಲಾವಿದೆಯ ನೃತ್ಯವೈಭವವನ್ನು ಕಣ್ತುಂಬಿಕೊಳ್ಳಲು ಎಲ್ಲ ಕಲಾರಸಿಕರಿಗೂ ಆದರದ ಸ್ವಾಗತ.

ಮಂಗಳೂರಿನ ಸಮೀಪದ ಗುರ್ಪುರ್ ನ ಶ್ರೀ ಪ್ರಕಾಶ್ ಪ್ರಭು ಮತ್ತು ಮೀನಾಕ್ಷಿ ಪ್ರಭು ಅವರ ಪುತ್ರಿ ಅನುಷ್ಕಗೆ ಬಾಲ್ಯದಿಂದಲೂ ನೃತ್ಯ ಎಂದರೆ ತುಂಬಾ ಒಲವು. ಮಗಳ ಆಸಕ್ತಿಯನ್ನು ಗಮನಿಸಿ ಹೆತ್ತವರು ತಮ್ಮ ಐದುವರ್ಷದ ಮಗಳನ್ನು ಕಥಕ್ ನೃತ್ಯ ಕಲಿಯಲು ಖ್ಯಾತ ಗುರು ಅಂಜನಾ ಗುಪ್ತ ಅವರಲ್ಲಿ ಸೇರ್ಪಡೆ ಮಾಡಿದರು. ಗುರುಗಳೊಂದಿಗೆ, ಗುರು ಪುತ್ರಿ ಶ್ರುತಿ ಕೂಡ ಪುಟ್ಟ ಬಾಲೆಗೆ ನೃತ್ಯದ ಹೆಜ್ಜೆಗಳನ್ನು ಕಲಿಸಿ, ತಿದ್ದಿ-ತೀಡಿ ನೃತ್ಯಗಾರ್ತಿಯಾಗುವತ್ತ ತರಬೇತಿ ನೀಡಿದ್ದಾರೆ. ಚುರುಕು ಮತಿ ಅನುಷ್ಕ ಬಹು ಬೇಗ ನೃತ್ಯವನ್ನು ಕಲಿತು ನಾಡಿನಾದ್ಯಂತ ಅನೇಕ ಪ್ರದರ್ಶನಗಳನ್ನು ಕೊಡುವಷ್ಟು ಸಮರ್ಥಳಾದಳು. ಹೆಚ್ಚಿನ ಕಲಿಕೆಯನ್ನು ನೃತ್ಯ ದಿಗ್ಗಜರಾದ ಪಂಡಿತ್ ಬಿರ್ಜು ಮಹಾರಾಜ್, ಗುರು ಮೌಲಿಕ್ ಮತ್ತು ಪಾರಿಖ್, ಪಾರ್ವತಿ ದತ್ತ ಮುಂತಾದವರ ವಿಶೇಷ ಪ್ರಾತ್ಯಕ್ಷಿಕೆ, ಕಾರ್ಯಾಗಾರಗಳಿಂದ ಜ್ಞಾನವನ್ನು ಪಡೆದುಕೊಂಡಳು. ಇದಕ್ಕೆ ವಿಶೇಷ ಅವಕಾಶ ಒದಗಿಸಿದ್ದು 'ಸ್ಪೇಸ್' ನೃತ್ಯ ಸಂಸ್ಥೆ. ಇದರಿಂದ ಅನುಷ್ಕಾಗೆ ವಿಪುಲ ನೃತ್ಯಾವಕಾಶಗಳು, ವೇದಿಕೆಗಳು ಒದಗಿದವು. ಶಿವರಾತ್ರಿ ಸಂದರ್ಭದಲ್ಲಿ ಪ್ರತಿಷ್ಠಿತ ತಂಜಾವೂರಿನ ಬೃಹನ್





ನಾಟ್ಯಾಂಜಲಿ, ಜಿ- 20, ಚಿನ್ನ ಕಲಾ ನಾದಂ, ಉನ್ನತಿ ಮತ್ತು ನೀಮ್ರಾಣ ಮುಂತಾದ ನೃತ್ಯೋತ್ಸವಗಳಲ್ಲಿ ತನ್ನ ಪ್ರತಿಭೆಯನ್ನು ಮೆರೆದಿದ್ದಾಳೆ ಅನುಷ್ಕ. ವಿದ್ಯಾಭ್ಯಾಸದಲ್ಲೂ ಮುಂದಿರುವ ಅನುಷ್ಕ, ಕೇಂದ್ರೀಯ ವಿದ್ಯಾಲಯ ಎನ್.ಎ.ಎಲ್. ಮತ್ತು ವ್ಯಾಲಿ ಶಾಲೆಯಲ್ಲಿ ಪ್ರಾಥಮಿಕ ವಿದ್ಯಾಭ್ಯಾಸವನ್ನು ಮಾಡಿದ್ದು, ಈಗ ಜ್ಯೋತಿ ನಿವಾಸ್ ಕಾಲೇಜಿನಲ್ಲಿ ಸೈಕಾಲಜಿ ವಿಷಯವನ್ನು ಆಯ್ಕೆ ಮಾಡಿಕೊಂಡು, ಪದವಿ ತರಗತಿಯಲ್ಲಿ ಓದುತ್ತಿದ್ದಾಳೆ. ನೃತ್ಯದ ಬಗೆ ಅದಮ್ಯ ಒಲವು ಹೊಂದಿರುವ ಅನುಷ್ಕಾ ಓದಿನ ಜೊತೆ ಕಲೆಯನ್ನೂ ಸಮರಸವಾಗಿ ತೂಗಿಸಿಕೊಂಡು ಹೋಗುತ್ತಿರುವ ಪ್ರತಿಭಾನ್ವಿತೆ. ನೃತ್ಯ ಕ್ಷೇತ್ರದಲ್ಲಿ ಸಾಧನೆ ಮಾಡುವ ಕನಸನ್ನು ಹೊಂದಿದ್ದಾಳೆ.

ಕಥಕ್ ಪಯಣದಲ್ಲಿ ರಂಗಪ್ರವೇಶ ಎಂಬ ಮೈಲಿಗಲ್ಲಿನ ಪ್ರಮುಖ ಕ್ಷಣಗಳ ಬಗ್ಗೆ ಅಸೀಮ ಉತ್ಸಾಹದಿಂದಿರುವ ಅನುಷ್ಕಾ, ಅದಕ್ಕೆ ಅಗತ್ಯವಿರುವ ಸಕಲ ಸಿದ್ಧತೆಗಳನ್ನೂ ಅತುಲ ಪರಿಶ್ರಮ ಹಾಗೂ ಏಕಾಗ್ರತೆಯಿಂದ ಸಾಧಿಸುತ್ತಿದ್ದಾಳೆ. ಕೊನೆಯಿಲ್ಲದ ಈ ಕಲಿಕೆ ಮತ್ತು ಸಾಧನೆಯ ಪಥದಲ್ಲಿ ನಡೆಯುವ ಸಂಕಲ್ಪ ಮಾಡಿರುವ ಅನುಷ್ಕಾಗೆ ಸರ್ವ ಶುಭಾಶಯಗಳು. ಅಂತರರಾಷ್ಟ್ರೀಯ ನೃತ್ಯ ಕಲಾವಿದೆ ಮತ್ತು ಗುರುವಾಗಿರುವ ಅಂಜನಾ ಗುಪ್ತ ಅವರ ಅನುಪಮ ನೃತ್ಯಸಾಧನೆ ಮತ್ತು ಅವರ ಉದಯೋನ್ಮುಖ ಕಲಾವಿದರ ಕೊಡುಗೆಗೆ ಅಭಿನಂದನೆಗಳು.

। ವೈ.ಕೆ.ಸಂಧ್ಯಾ ಶರ್ಮ

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್

ಖ್ಯಾತ ಜ್ಯೋತಿಷಿ

ದೂರವಾಣಿ-9964739507

www.jyotishyavaastu.com

**ಮೇಷ:** ಆಕಸ್ಮಿಕವಾಗಿ ಗುರು ಮತ್ತು ದೈವ ದರ್ಶನ, ಮಾನಸಿಕ ಆಘಾತ ಮತ್ತು ಚಿಂತೆ, ಸ್ವಂತ ನಿರ್ಧಾರ ಮತ್ತು ಕೆಲಸ ಕಾರ್ಯಗಳಿಗೆ ತೊಂದರೆ

**ವೃಷಭ:** ಸ್ವಯಂಕೃತ ಅಪರಾಧದಿಂದ ತೊಂದರೆ, ನೆರೆಹೊರೆಯವರಿಂದ ತೊಂದರೆ, ಗೃಹ ಮತ್ತು ಉದ್ಯೋಗ ಬದಲಾವಣೆ, ಹತ್ತಿರದ ಪ್ರಯಾಣದಿಂದ ತೊಂದರೆ.

**ಮಿಥುನ:** ಆರೋಗ್ಯದಲ್ಲಿ ವ್ಯತ್ಯಾಸ, ಆರ್ಥಿಕ ಸಮಸ್ಯೆ, ಮಾತಿನಿಂದ ಶತ್ರುಗಳು ಹೆಚ್ಚಾಗುವ ಸಾಧ್ಯತೆ.

**ಕಟಕ:** ಆರೋಗ್ಯದಲ್ಲಿ ಏರುಪೇರು, ಮಕ್ಕಳ ಭವಿಷ್ಯದ ಚಿಂತೆ, ಪ್ರೀತಿ ಪ್ರೇಮ ವಿಚಾರದಿಂದ ತೊಂದರೆ.

**ಸಿಂಹ:** ಸಾಲ ಮಾಡುವ ಸಂಭವ, ಜಿಪುಣ ಗುಣವುಳ್ಳವರ ಮನೆಯ ವಾತಾವರಣದಲ್ಲಿ ಕಲುಷಿತ.

**ಕನ್ಯಾ:** ಸಹೋದರಿಯರ ಸಹಕಾರ, ಸಾಲದ ಪ್ರಮಾಣ ಅಧಿಕ, ಆರೋಗ್ಯ ಸಮಸ್ಯೆಯಿಂದ ಶಸ್ತ್ರಚಿಕಿತ್ಸೆಯ ಭೀತಿ.

**ತುಲಾ:** ಆರ್ಥಿಕ ಪರಿಸ್ಥಿತಿ ಉತ್ತಮ, ಹಣಕಾಸಿನ ವಿಚಾರದಲ್ಲಿ ಗೊಂದಲ, ಸಂಗಾತಿಯ ಆರೋಗ್ಯದಲ್ಲಿ ವ್ಯತ್ಯಾಸ,

**ವೃಶ್ಚಿಕ:** ಕೈಗೆ ಬಂದ ತುತ್ತು ಬಾಯಿಗೆ ಬರುವುದಿಲ್ಲ, ಮಕ್ಕಳಿಂದ ನೋವು, ಆಸ್ತಿ ಮಾರಾಟ ಅಥವಾ ಕೊಳ್ಳುವುದರಿಂದ ನಷ್ಟ.

**ಧನು:** ಪಾಲುದಾರಿಕೆಯಲ್ಲಿ ನಷ್ಟ, ಕೊಟ್ಟ ಸಾಲ ಮರುಪಾವತಿಯಾಗುವುದಿಲ್ಲ, ಆತ್ಮೀಯರು ದೂರಾಗುವರು.

**ಮಕರ:** ಮಗ ಅಥವಾ ಮಗಳಿಂದ ಮತ್ತು ಸಂಗಾತಿಯಿಂದ ಅನುಕೂಲ, ಮುಖ್ಯ ತೀರ್ಮಾನಗಳಲ್ಲಿ ಗೊಂದಲ, ಕುಟುಂಬದ ವಾತಾವರಣ ಕಲುಷಿತ.

**ಕುಂಭ:** ಉದ್ಯೋಗ ಕಳೆದುಕೊಳ್ಳುವ ಆತಂಕ, ಮಂದತ್ವ ಆಲಸ್ಯ ಕಾಡುವುದು, ಆತುರ ಸ್ವಭಾವದಿಂದ ಕಾರ್ಯಗಳಲ್ಲಿ ಹಿನ್ನಡೆ.

**ಮೀನ:** ಸ್ವಂತ ಕೆಲಸ ಕಾರ್ಯಗಳಲ್ಲಿ ನೆಮ್ಮದಿ, ಹೆಣ್ಣು ಮಕ್ಕಳು ದೂರಾಗುವ ಆತಂಕ, ತಂದೆ ಆರೋಗ್ಯದಲ್ಲಿ ವ್ಯತ್ಯಾಸ.

## ಅಂತರಾಷ್ಟ್ರೀಯ ಜಾಗ್ವಾರ್ ದಿನ

ನವೆಂಬರ್ 29 ರಂದು ಅಂತರರಾಷ್ಟ್ರೀಯ ಜಾಗ್ವಾರ್ ದಿನವನ್ನು ಆಚರಿಸಲಾಗುತ್ತದೆ, ಈ ಅಪ್ರತಿಮ ದೊಡ್ಡ ಬೆಕ್ಕುಗಳ ವೈಭವವನ್ನು ನೆನಪಿಸುತ್ತದೆ. ಜಾಗ್ವಾರ್ಗಳ ಸಂರಕ್ಷಣೆಯ ಅಗತ್ಯತೆಗಳ ಬಗ್ಗೆ ಜಾಗೃತಿ ಮೂಡಿಸಲು ಈ ದಿನವನ್ನು ಸ್ಥಾಪಿಸಲಾಗಿದೆ, ಈ ದಿನವು ಪ್ರಪಂಚದಾದ್ಯಂತದ ವಿವಿಧ ಸಮಾಜಗಳಲ್ಲಿ ಈ ಭವ್ಯ ಜೀವಿಗಳು ಹೊಂದಿರುವ ಸಾಂಸ್ಕೃತಿಕ ಮಹತ್ವವನ್ನು ಸಹ ಆಚರಿಸುತ್ತದೆ.

ಇತಿಹಾಸ- 1970ರ ದಶಕದಿಂದಲೂ, ಜಾಗ್ವಾರ್ಗಳನ್ನು ಅಳಿವಿನಂಚಿನಲ್ಲಿರುವ ಪ್ರಭೇದಗಳಾಗಿ ಸಂರಕ್ಷಿಸಲಾಗಿದೆ. ಈ ಅಸಾಧಾರಣ ಜೀವಿಗಳ ಬೇಟೆ, ಅಕ್ರಮ ಲಾಗಿಂಗ್, ಅರಣ್ಯನಾಶ ಮತ್ತು ಸಾಕುಪ್ರಾಣಿಗಳ ಪರಿಚಯ, ಹವಾಮಾನ ಬದಲಾವಣೆ ಮತ್ತು ಆವಾಸಸ್ಥಾನದ ಬದಲಾವಣೆಗಳ ಜೊತೆಗೆ, ಕಳೆದ ಕೆಲವು ದಶಕಗಳಲ್ಲಿ ಜಾಗ್ವಾರ್ ಸಂಖ್ಯೆಗಳ ಕುಸಿತಕ್ಕೆ ಕಾರಣವಾಗಿದೆ. ಜಾಗ್ವಾರ್ 2030 ಫೋರಮ್ಗಾಗಿ, ಹದಿನಾಲ್ಕು ವಿವಿಧ ದೇಶಗಳ ಪ್ರತಿನಿಧಿಗಳು ಮಾರ್ಚ್ 2018 ರಲ್ಲಿ ಯುನೈಟೆಡ್ ನೇಷನ್ಸ್ ಪ್ರಧಾನ ಕಛೇರಿಯಲ್ಲಿ ನ್ಯೂಯಾರ್ಕ್ನಲ್ಲಿ ಸಮಾವೇಶಗೊಂಡರು.

ಜಾಗ್ವಾರ್ 2030 ಘೋಷಣೆ, ಜಾಗ್ವಾರ್ ಸಂರಕ್ಷಣೆಗಾಗಿ ಜಾಗತಿಕವಾಗಿ ಹಲವಾರು ಸಹಕಾರ ಕ್ರಮಗಳನ್ನು ವಿವರಿಸಲಾಗಿದೆ, ಇದರಲ್ಲಿ ಅಂತರರಾಷ್ಟ್ರೀಯ ಜಾಗ್ವಾರ್ ದಿನವನ್ನು ಸ್ಥಾಪಿಸುವ ಸಲಹೆಯನ್ನು ಈ ವೇದಿಕೆಯ ಪರಿಣಾಮವಾಗಿ ರಚಿಸಲಾಗಿದೆ. ಬ್ರೆಜಿಲ್, ಜಾಗ್ವಾರ್ ಅನ್ನು ಜೈವಿಕ ವೈವಿಧ್ಯತೆಯ ಸಂಕೇತವಾಗಿ ಅಳವಡಿಸಿಕೊಂಡಿರುವ ಶ್ರೇಣಿಯ ದೇಶಗಳಲ್ಲಿ ಒಂದಾಗಿದ್ದು, ರಾಷ್ಟ್ರೀಯ ಜಾಗ್ವಾರ್ ದಿನವನ್ನು ಆಚರಿಸುವವರಲ್ಲಿ ಒಂದಾಗಿದೆ.

ಕಳೆದ 15 ವರ್ಷಗಳಲ್ಲಿ ಕೇವಲ 20% ನಷ್ಟು ಐತಿಹಾಸಿಕ ವ್ಯಾಪ್ತಿಯನ್ನು ಕಳೆದುಕೊಂಡಿರುವುದರಿಂದ ಜಾಗ್ವಾರ್ಗಳಿಗೆ ಹೆಚ್ಚಿನ ಕಾಳಜಿ ಮತ್ತು ಗಮನದ ಅಗತ್ಯವಿರುತ್ತದೆ ಮತ್ತು ನಷ್ಟವು ಸುಮಾರು 50% ಎಂದು ನಂಬಲಾಗಿದೆ. ವಿಶ್ವ ವನ್ಯಜೀವಿ ಒಕ್ಕೂಟ 2020 ರಲ್ಲಿ ಪ್ರಾದೇಶಿಕ ಜಾಗ್ವಾರ್ ತಂತ್ರವನ್ನು ಪ್ರಾರಂಭಿಸಿತು, 2030 ರ ವೇಳೆಗೆ ಜಾಗ್ವಾರ್ಗಳ ಸಂಖ್ಯೆಯನ್ನು ಹೆಚ್ಚಿಸುವ ಜೊತೆಗೆ ಅವುಗಳ ಆವಾಸಸ್ಥಾನವನ್ನು ರಕ್ಷಿಸುತ್ತದೆ.

ಪ್ರಾಮುಖ್ಯತೆ- ದಿನವು ಜಾಗ್ವಾರ್ಗಳ ಅವಸ್ಥೆಯ ಮೇಲೆ ಬೆಳಕು ಚೆಲ್ಲುವ ಗುರಿಯನ್ನು ಹೊಂದಿದೆ, ಆವಾಸಸ್ಥಾನದ ನಷ್ಟ, ಬೇಟೆಯಾಡುವಿಕೆ ಮತ್ತು ಮಾನವ-ವನ್ಯಜೀವಿ ಸಂಘರ್ಷಗಳಿಂದಾಗಿ ಅವುಗಳ ಸಂರಕ್ಷಣೆಯ ತುರ್ತು ಅಗತ್ಯವನ್ನು ಒತ್ತಿಹೇಳುತ್ತದೆ. ತಮ್ಮ ಆವಾಸಸ್ಥಾನಗಳ ಪರಿಸರ ಸಮತೋಲನವನ್ನು ಕಾಪಾಡಿಕೊಳ್ಳುವಲ್ಲಿ ಈ ಪರಭಕ್ಷಕ ಪರಭಕ್ಷಕಗಳು ವಹಿಸುವ ಪ್ರಮುಖ ಪಾತ್ರದ ಬಗ್ಗೆ ಜನರಿಗೆ ಶಿಕ್ಷಣ ನೀಡಲು ಇದು ಒಂದು ಅವಕಾಶವಾಗಿದೆ. ಉದ್ದೇಶ- ಜಾಗ್ವಾರ್ಗಳು ಮತ್ತು ಅವುಗಳ ಆವಾಸಸ್ಥಾನಗಳ ರಕ್ಷಣೆ ಮತ್ತು ಸಂರಕ್ಷಣೆಗಾಗಿ ಪ್ರತಿಪಾದಿಸುವುದು ದಿನದ ಪ್ರಾಥಮಿಕ ಉದ್ದೇಶವಾಗಿದೆ. ಸಂರಕ್ಷಣಾ ಪ್ರಯತ್ನಗಳು ಸುಸ್ಥಿರ ಪರಿಸರ ವ್ಯವಸ್ಥೆಗಳನ್ನು ಖಾತ್ರಿಪಡಿಸುವುದರ ಮೇಲೆ ಕೇಂದ್ರೀಕರಿಸುತ್ತವೆ, ಅಲ್ಲಿ ಜಾಗ್ವಾರ್ಗಳು ಇತರ ಜಾತಿಗಳೊಂದಿಗೆ ಅಭಿವೃದ್ಧಿ ಹೊಂದುತ್ತವೆ.

# ಮಹಿಳಾ ಉದ್ಯಮ ಸಬಲೀಕರಣಗೊಳಿಸಲು TiE ಜಾಗತಿಕ ಶೃಂಗಸಭೆ



**ದೆಹಲಿ:** TiE ಗ್ಲೋಬಲ್ನ ಉಪಕ್ರಮವಾದ TiE ವಿಮೆನ್, ವಿಶ್ವಾದ್ಯಂತ ಮಹಿಳೆಯರ ಉದ್ಯಮಶೀಲತೆಯ ಚಿತ್ರಣವನ್ನು ಪರಿವರ್ತಿಸುತ್ತಿದೆ. ಈಗ ತನ್ನ 5 ನೇ ಆವೃತ್ತಿಯಲ್ಲಿ ಕರ್ಯಕ್ರಮವು ತನ್ನ ವೇಗವನ್ನು ಹೆಚ್ಚಿಸಿಕೊಳ್ಳುವ ಹಂತವನ್ನು ತಲುಪಿದ್ದು, ಇದೇ ಡಿಸೆಂಬರ್ನಲ್ಲಿ ಬೆಂಗಳೂರಿನಲ್ಲಿ ನಡೆಯಲಿರುವ ಖಿಇ ಜಾಗತಿಕ ಶೃಂಗಸಭೆಯ (ಖಿಉಖ) ಜಾಗತಿಕ ಮುಕ್ತಾಯ ಕರ್ಯಕ್ರಮದಲ್ಲಿ ಕೊನೆಗೊಳ್ಳಲಿದೆ. TiE 64 ಜಾಗತಿಕ ಅಧ್ಯಾಯಗಳ ವಿಸ್ತಾರವಾದ ನೆಟ್ವರ್ಕ್ ಅನ್ನು ನಿಯಂತ್ರಿಸುವುದರ ಮೂಲಕ ಖಿಇ ವಿಮೆನ್ ತಮ್ಮ ಪ್ರಯಾಣದ ಪ್ರತಿ ಹಂತದಲ್ಲೂ ಮಹಿಳಾ ಉದ್ಯಮಿಗಳನ್ನು ಸಬಲೀಕರಣಗೊಳಿಸುತ್ತಾರೆ. ಈ ನೆಟ್ವರ್ಕ್ ಅಗತ್ಯ ಸಂಪನ್ಮೂಲಗಳು, ಮಾರ್ಗದರ್ಶನ, ಹೂಡಿಕೆದಾರರ ಸಂಪರ್ಕಗಳು ಮತ್ತು ನೆಟ್ವರ್ಕಿಂಗ್ ಅವಕಾಶಗಳಿಗೆ ಲಭ್ಯತೆಯನ್ನು ಒದಗಿಸುತ್ತದೆ ಮತ್ತು ಇವೆಲ್ಲವೂ ಲಿಂಗ ಸಮಾನತೆಯನ್ನು ಮುನ್ನಡೆಸುವ ಗುರಿಯನ್ನು ಹೊಂದಿದ್ದು, ಖಆಉ 5 ರೊಂದಿಗೆ ಹೊಂದಿಕೆಯಾಗುತ್ತದೆ. ಈ ಕರ್ಯಕ್ರಮವು ಜಾಗತಿಕವಾಗಿ ಮಹಿಳಾ ನೇತೃತ್ವದ ವ್ಯವಹಾರಗಳ ಬೆಳವಣಿಗೆಯನ್ನು ಉತ್ತೇಜಿಸಲು ಈಕ್ವಿಟಿ-ಮುಕ್ತ ನಗದು ಬಹುಮಾನಗಳನ್ನು ನೀಡುತ್ತದೆ.

TiE ವಿಮೆನ್ನ ಯಶಸ್ಸಿನ ಮೂಲಭಾಗದಲ್ಲಿ ಐದು ಪ್ರಮುಖ ಸ್ತಂಭಗಳಿವೆ: ಕಲಿಕೆ, ಮಾರ್ಗದರ್ಶನ, ಧನಸಹಾಯದ ಲಭ್ಯತೆ, ಮುಂದುವರಿಯುವ ಸಾಮರ್ಥ್ಯ ಮತ್ತು ಸಮುದಾಯ. ಈ ಸ್ತಂಭಗಳು ಮಹಿಳಾ ಉದ್ಯಮಿಗಳಿಗೆ ಆರಂಭಿಕ ಹಂತದ ಅಭಿವೃದ್ಧಿಯಿಂದ ಹಿಡಿದು ಅವರ ವ್ಯವಹಾರಗಳನ್ನು ಅಳೆಯುವವರೆಗೆ ಮಾರ್ಗದರ್ಶನವನ್ನು ನೀಡುತ್ತವೆ. ಸುರಕ್ಷಿತ ಮತ್ತು ಒಳಗೊಂಡಂತಿರುವ ಪರಿಸರವನ್ನು ನಿರ್ಮಿಸುವ ಮೂಲಕ ಖಿಇ ವಿಮೆನ್ ಹಣಕಾಸಿನ ಬೆಂಬಲಕ್ಕಿಂತಲೂ ಹೆಚ್ಚಿನದನ್ನು ನೀಡುತ್ತದೆ; ಇದು ಮಾರ್ಗದರ್ಶಕರು, ಹೂಡಿಕೆದಾರರು ಮತ್ತು ಗೆಳೆಯರ ಜಾಗತಿಕ ನೆಟ್ವರ್ಕ್ಗೆ ಬಾಗಿಲನ್ನು ತೆರೆಯುತ್ತದೆ ಮತ್ತು ದೀರ್ಘಾವಧಿಯ ಬೆಳವಣಿಗೆ ಮತ್ತು ಸ್ಪಷ್ಟ ಗೋಚರತೆಯನ್ನು ಖಾತ್ರಿಗೊಳಿಸುತ್ತದೆ.

2023 ರಲ್ಲಿ, TiE ವಿಮೆನ್ ಸಿಲಿಕಾನ್ ವ್ಯಾಲಿ ಮೂಲದ ಸಾಹಸೋದ್ಯಮ ಬಂಡವಾಳಗಾರ ಮತ್ತು ಸಮಾಜಸೇವೆಯಲ್ಲಿ ತೊಡಗಿಸಿಕೊಂಡಿರುವ ಆಶಾ ಜಡೇಜಾ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಮೋಟ್ವಾನಿ ಜಡೇಜಾ ಫೌಂಡೇಶನ್ನೊಂದಿಗೆ ಮೂರು ವರ್ಷಗಳ ಪಾಲುದಾರಿಕೆಯನ್ನು ಪ್ರಾರಂಭಿಸಿತು. ಈ ಸಹಯೋಗವು ವಿಶ್ವದ ಅತ್ಯಂತ ನವೀನ ಪರಿಸರ ವ್ಯವಸ್ಥೆಗಳ ಪೈಕಿ ಒಂದರಲ್ಲಿ ತೊಡಗಿಸಿಕೊಳ್ಳಲು ಸಾಟಿಯಿಲ್ಲದಂತಹ ಅವಕಾಶಗಳನ್ನು ಸಂಸ್ಥಾಪಕರಿಗೆ ಒದಗಿಸುತ್ತದೆ. ಈ ಪಾಲುದಾರಿಕೆಯು ಅಮೂಲ್ಯವಾದ ಸಂಪನ್ಮೂಲಗಳು, ನೆಟ್ವರ್ಕ್ಗಳು ಮತ್ತು ಬೆಳವಣಿಗೆಯ ಅವಕಾಶಗಳಿಗೆ ಲಭ್ಯತೆಯನ್ನು ಒದಗಿಸುವುದರ ಜೊತೆಗೆ ಅವರ ಉದ್ಯಮಗಳನ್ನು ಅಳೆಯಲು ಮತ್ತು ಜಾಗತಿಕ ಮಾರುಕಟ್ಟೆಯಲ್ಲಿ ಯಶಸ್ವಿಯಾಗಲು ಅವರನ್ನು ಸಬಲೀಕರಣಗೊಳಿಸುತ್ತದೆ.

ಆಶಾ ಜಡೇಜಾ ಅವರು 200 ಕ್ಕೂ ಹೆಚ್ಚು ತಂತ್ರಜ್ಞಾನದ ಸ್ಟಾರ್ಟ್‌ಅಪ್ಗಳಲ್ಲಿ ಹೂಡಿಕೆಯನ್ನು ಮಾಡಿದ್ದು, ಸಾಮಾಜಿಕ ಅಡೆತಡೆಗಳನ್ನು ನಿವಾರಿಸಲು ಮತ್ತು ವ್ಯಾಪಾರದಲ್ಲಿ ಮುನ್ನಡೆಯಲು ಮಹಿಳೆಯರಿಗೆ ಅನುವು ಮಾಡಿಕೊಡುವಂತಹ ಉತ್ಸಾಹಿ ವಕೀಲರಾಗಿದ್ದಾರೆ. ನಾವು ತಂತ್ರಜ್ಞಾನ-ಆಧಾರಿತ ಉದ್ಯಮಶೀಲತೆಯನ್ನು ವಿಶ್ವದರ್ಜೆಯ ಶಿಕ್ಷಣ ಮತ್ತು ಪ್ರಬಲವಾದ ಮಹಿಳಾ ನಾಯಕತ್ವದೊಂದಿಗೆ ಸಂಯೋಜಿಸಿದಾಗ ಮಾತ್ರ ಘಾತೀಯ ಬೆಳವಣಿಗೆ ಸಾಧ್ಯ. ಮಹಿಳೆಯರನ್ನು ದೀರ್ಘಕಾಲದಿಂದಲೂ ಹಿಡಿದಿಟ್ಟುಕೊಂಡಿರುವ ಅಡೆತಡೆಗಳನ್ನು ನಾವು ಕೆಡವಬೇಕು ಮತ್ತು ಮಹಿಳಾ ನೇತೃತ್ವದ ಉದ್ಯಮಗಳು ಯಾವುದೇ ಮಿತಿಗಳಿಲ್ಲದೆ ಹೊಸತನವನ್ನು ಕಂಡುಕೊಳ್ಳುವಂತಹ ವಾತಾವರಣವನ್ನು ಸೃಷ್ಟಿಸಬೇಕು, ಎಂದು ಹೇಳಿದರು.

# ಪ್ರಿಯಾಂಕಾ ಗಾಂಧಿ ಸಂಸದೆಯಾಗಿ ಪ್ರಮಾಣವಚನ ಸ್ವೀಕಾರ



**ದೆಹಲಿ:** ಕೇರಳದ ವಯನಾಡು ಲೋಕಸಭಾ ಕ್ಷೇತ್ರದ ಉಪ ಚುನಾವಣೆಗೆ ಸ್ಪರ್ಧಿಸಿ ಗೆದ್ದಿರುವ ಪ್ರಿಯಾಂಕಾ ಗಾಂಧಿ ಇಂದು ಸಂಸತ್ತಿನಲ್ಲಿ ಪ್ರಮಾಣವಚನ ಸ್ವೀಕರಿಸಿದರು. ಅವರು ತೊಟ್ಟಿದ್ದ ಸೀರೆ ಥೇಟು ಅವರ ಅಜ್ಜಿ ಇಂದಿರಾ ಗಾಂಧಿ ಅವರನ್ನು ನೆನಪಿಸಿತು.

ದೇವರನಾಡು ಎಂದೇ ಕರೆಯಲ್ಪಡುವ ಕೇರಳದಿಂದ ಆಯ್ಕೆಯಾಗಿರುವ ಪ್ರಿಯಾಂಕಾ ಗಾಂಧಿ ಒಂದೆಡೆ ಅಜ್ಜಿ ಇಂದಿರಾ ಗಾಂಧಿ ನೆನಪಾಗುವಂತೆ ಮಾಡಿದರೆ, ಇನ್ನೊಂದೆಡೆ ಕೇರಳದ ಸಂಸ್ಕೃತಿ ಎತ್ತಿ ಹಿಡಿಯುವ ರೀತಿಯಲ್ಲಿ ಸೀರೆಯುಟ್ಟು ಸಂಸತ್ ಪ್ರವೇಶಿಸಿದರು.

ಕೇರಳದ ಹಬ್ಬಗಳಲ್ಲಿ ಸಾಮಾನ್ಯವಾಗಿ ಮಲೆಯಾಳಿ ಮಹಳೆಯರು ತೊಡುವ ಕಸವು ಸೀರೆ, ಅಂದರೆ ಚಿನ್ನದ ಬಣ್ಣದ ಬಾರ್ಡರ್ ವುಳ್ಳ ಬಿಳಿ ಸೀರೆಯನ್ನು ತೊಟ್ಟು ಸಂಸತ್ತಿಗೆ ಬಂದ ಪ್ರಿಯಾಂಕಾ ಗಾಂಧಿ ಅವರು ಅಜ್ಜಿ ಇಂದಿರಾ ಗಾಂಧಿ ಅವರಂತೆಯೇ ಕಾಣಿಸಿಕೊಂಡರು.

ಹಲವು ವರ್ಷಗಳಿಂದ ರಾಜಕೀಯದಲ್ಲಿ ಇದ್ದರೂ ಪ್ರಿಯಾಂಕಾ ಗಾಂಧಿ ಅವರು ಇದೇ ಮೊದಲ ಬಾರಿಗೆ ಚುನಾವಣೆಗೆ ಸ್ಪರ್ಧಿಸಿ 4 ಲಕ್ಷಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ.

ಸಂಸದರಾಗಿ ಪ್ರಮಾಣ ವಚನ ಸ್ವೀಕರಿಸುವ ವೇಳೆ ಸಹೋದರ ರಾಹುಲ್ ಗಾಂಧಿ ಅವರಂತೆಯೇ ಸಂವಿಧಾನದ ಪುಸ್ತಕವನ್ನು ಹಿಡಿದು ಗಮನ ಸೆಳೆದರು.

ಪ್ರಿಯಾಂಕಾ ಗಾಂಧಿ ಅವರಿಗೆ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಸಂಸದರಾಗಿ ಪ್ರಮಾಣವಚನ ಬೋಧಿಸಿದರು.



# ಸಂಸತ್ತಿನ ಚಳಿಗಾಲದ ಅಧಿವೇಶನ: ಮುಂದುವರೆದ ಸಂಸದರ ಗದ್ದಲ



**ನವದೆಹಲಿ:** ಸಂಸತ್ತಿನ ಚಳಿಗಾಲದ ಅಧಿವೇಶನದ ಮೂರನೇ ದಿನ ಕೂಡ ಉಭಯ ಸದನಗಳಲ್ಲಿ ಗದ್ದಲ, ಪ್ರತಿಭಟನೆಗಳು ಮುಂದುವರೆದವು. ಲೋಕಸಭೆ ಮತ್ತು ರಾಜ್ಯಸಭೆಗಳಲ್ಲಿ ಅದಾನಿ, ಮಣಿಪುರ ಹಿಂಸಾಚಾರ ಮತ್ತು ಸಂಭಾಲ್ ಹಿಂಸಾಚಾರ ವಿಚಾರಗಳ ಕುರಿತು ಪ್ರತಿಪಕ್ಷಗಳ ಸಂಸದರು ಚರ್ಚೆಗೆ ಒತ್ತಾಯಿಸಿದರು.

ಬೆಳಗ್ಗೆ 11 ಗಂಟೆಗೆ ರಾಜ್ಯಸಭೆ ಆರಂಭವಾಗುತ್ತಿದ್ದಂತೆ ಪ್ರಶ್ನೋತ್ತರ ವೇಳೆಯಲ್ಲಿ ಚರ್ಚೆಗೆ ಅವಕಾಶ ಕೋರಿ ಪ್ರತಿಪಕ್ಷ ಸದಸ್ಯರು ಪ್ರತಿಭಟನೆ ನಡೆಸಿದರು. ಸಭಾಪತಿ ಜಗದೀಪ್ ಧಂಖರ್ ಸದನದಲ್ಲಿ ಶಾಂತಿ ಕಾಯ್ದುಕೊಳ್ಳುವಂತೆ ಮನವಿ ಮಾಡಿದರು. ಕಲಾಪಕ್ಕೆ ಅಡ್ಡಿ ಉಂಟುಮಾಡುವುದು ಸಮಸ್ಯೆಗೆ ಪರಿಹಾರವಲ್ಲ. ಇದು ನಮ್ಮ ಪ್ರಜಾಪ್ರಭುತ್ವದ ಅಡಿಪಾಯವನ್ನು ದುರ್ಬಲಗೊಳಿಸುತ್ತದೆ. ಸದನದಲ್ಲಿ ಆರೋಗ್ಯಕರ ಚರ್ಚೆ ಅಗತ್ಯ. ಅಡ್ಡಿಪಡಿಸುವುದು ಅಲ್ಲ ಎಂದರು. ಆದರೂ ಪ್ರತಿಭಟನೆ ಘೋಷಣೆಗಳು ಮುಂದುವರೆದವು. ಲೋಕಸಭೆಯಲ್ಲೂ ಅದಾನಿ ಮತ್ತು ಸಂಭಾಲ ಹಿಂಸಾಚಾರದಲ್ಲಿ ಭಾಗಿಯಾದ ದುಷ್ಕರ್ಮಿಗಳ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಪ್ರತಿಪಕ್ಷದ ಸದಸ್ಯರು ಸದನದ ಬಾವಿಗಿಳಿದು ಘೋಷಣೆಗಳನ್ನು ಕೂಗಿದರು. ಈ ವೇಳೆ ಪ್ರತಿಪಕ್ಷಗಳ ಪ್ರತಿಭಟನೆಯ ನಡೆ ಮತ್ತು ಸದನಕ್ಕೆ ಅಡ್ಡಿ ಮಾಡುತ್ತಿರುವುದನ್ನು ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಖಂಡಿಸಿದರು. ವಕ್ಫ್ ತಿದ್ದುಪಡಿ ವಿಧೇಯಕಕ್ಕೆ ಸಂಬಂಧಿಸಿದ ಜಂಟಿ ಸಮಿತಿಯ ಅವಧಿ ವಿಸ್ತರಣೆ ಹಾಗೂ ಕೆಲವು ವಿಷಯಗಳ ಕುರಿತು ಸದನದಲ್ಲಿ ಚರ್ಚೆ ನಡೆಸಬೇಕು ಎಂಬ ಬೇಡಿಕೆಗಳಿಗೆ ಸರ್ಕಾರ ಒಪ್ಪಿಗೆ ನೀಡಿದ ಬಳಿಕವೂ ಪ್ರತಿಪಕ್ಷಗಳು ಪ್ರತಿಭಟನೆ ನಡೆಸಿದವು.

# ಶಬರಿಮಲೆ ಪವಿತ್ರ 18 ಮೆಟ್ಟಿಲುಗಳ ಮೇಲೆ ಪೊಲೀಸ್ ಫೋಟೋ ಶೂಟ್..!



**ದೆಹಲಿ:** ಪವಿತ್ರ ಕ್ಷೇತ್ರ ಶಬರಿಮಲೆ 'ಸನ್ನಿಧಾನಂ'ನಲ್ಲಿ ಪೊಲೀಸ್ ಅಧಿಕಾರಿಗಳು ತಮ್ಮ ಕರ್ತವ್ಯವನ್ನು ಮುಗಿಸಿ ಮನೆಗೆ ಹಿಂದಿರುಗುವ ವೇಳೆ 18 ಮೆಟ್ಟಿಲುಗಳ ಮೇಲೆ ಫೋಟೋ ಶೂಟ್ ಮಾಡಿಸಿಕೊಂಡಿದ್ದಾರೆ. ಇರುಮುಡಿ ಹೊತ್ತ ಭಕ್ತರಷ್ಟೇ ಈ ಮೆಟ್ಟಿಲುಗಳನ್ನು ಹತ್ತಬೇಕು ಎಂಬ ನಿಯಮಗಳನ್ನೇ ಇಲ್ಲಿ ಅಧಿಕಾರಿಗಳು ಗಾಳಿಗೆ ತೂರಿದ್ದು, ಭಕ್ತರಿಗೆ ನೋವುಂಟು ಮಾಡಿದೆ..

ಹೌದು.. ಶಬರಿಮಲೆ ದೇವಸ್ಥಾನದಲ್ಲಿ ಇರುವ ಪವಿತ್ರವಾದ 18 ಮೆಟ್ಟಿಲುಗಳನ್ನು 'ಪತ್ತಿನೆಟ್ಟಾಂಪಾಡಿ' ಎಂದು ಕರೆಯಲಾಗುತ್ತದೆ. ಒಂದು ಮಂಡಲ ವ್ರತ ಮಾಡಿ ಚಳಿ, ಮಳೆ ಎನ್ನದೇ ಕಲ್ಲು ಮುಳ್ಳುಗಳ ಹಾದಿಯನ್ನು ದಾಟಿ ಶಬರೀಶನನ್ನು ಕಾಣಲು ಅಯ್ಯಪ್ಪ ಭಕ್ತರು 18 ಮೆಟ್ಟಿಲುಗಳನ್ನು ಹತ್ತುತ್ತಾರೆ..

ಇರುಮುಡಿ ಇಲ್ಲದೇ ಪ್ರಧಾನ ಮಂತ್ರಿಯೂ ಸಹ ಈ ಮೆಟ್ಟಿಲುಗಳನ್ನು ಹತ್ತಲು ನಿಯಮ ಒಪ್ಪಲ್ಲ.. ಆದರೆ, ಭಕ್ತರನ್ನು ನಿಯಂತ್ರಿಸಲು, ಅಹಿತಕರ ಘಟನೆಗಳು ನಡೆಯದಂತೆ ತಡೆಯಬೇಕಿದ್ದ ಪೊಲೀಸ್ ಅಧಿಕಾರಿಗಳೇ ಪತ್ತಿನೆಟ್ಟಾಂಪಾಡಿ ಮೇಲೆ ಫೋಟೋಶೂಟ್ ಮಾಡಿಸಿದ್ದು ನಿಜಕ್ಕೂ ಅಚ್ಚರಿ ಮೂಡಿಸಿದೆ..

ಸಂಪ್ರದಾಯದ ಪ್ರಕಾರ, ಪುರೋಹಿತರು ಅದರ ಪಾವಿತ್ರ್ಯತೆಯನ್ನು ಕಾಪಾಡಿಕೊಳ್ಳಲು ಗರ್ಭಗುಡಿಗೆ ಅಭಿಮುಖವಾಗಿ ಈ ಮೆಟ್ಟಿಲುಗಳನ್ನು ಇಳಿಯುತ್ತಾರೆ. ಇದೀಗ ಈ ವಿಚಾರವಾಗಿ ವಿಶ್ವ ಹಿಂದೂ ಪರಿಷತ್ ಪೊಲೀಸರ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದೆ.. ಫೋಟೋಗಳೂ ಸಹ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿವೆ..

ದೇವಾಲಯದ ಸನ್ನಿಧಾನಂನಲ್ಲಿರುವ ಪವಿತ್ರ 18 ಮೆಟ್ಟಿಲುಗಳನ್ನು ಹತ್ತಲು ಮಾಲಾಧಾರಿಗಳಾಗಿ ಇರುಮುಡಿ ತಲೆ ಮೇಲೆ ಇರುವುದು ಅವಶ್ಯಕ. ದೇವಾಲಯದ ನಿಯಮಗಳ ಪ್ರಕಾರ ಸಾಮಾನ್ಯರ ಪ್ರವೇಶವನ್ನು ನಿಷೇಧಿಸಲಾಗಿದೆ. ಆದರೆ, ಪೊಲೀಸರೇ ಈ ನಿಯಮ ಉಲ್ಲಂಘಿಸಿದ್ದು ವಿಪರ್ಯಾಸ, ಸದ್ಯ ಈ ಪ್ರಕರಣದಲ್ಲಿ ಭಾಗಿಯಾದ ಅಧಿಕಾರಿಗಳ ವಿರುದ್ಧ ಯಾವ ರೀತಿಯ ಶಿಸ್ತು ಕ್ರಮ ಜರುಗಿಸಲಾಗುತ್ತದೆ.. ಎಂಬ ಚರ್ಚೆ ನಡೆಯುತ್ತಿದೆ.

# ಹಾಲು ಉತ್ಪಾದನೆಯಲ್ಲಿ ಭಾರತ ವಿಶ್ವದಲ್ಲೇ ನಂ.1



**ನವದೆಹಲಿ:** ಕೇಂದ್ರ ಸರ್ಕಾರ ಹೈನುಗಾರಿಕೆಗೆ ಉತ್ತೇಜನ ನೀಡುತ್ತಿದ್ದು, ಹಾಲು ಉತ್ಪಾದನೆಯಲ್ಲಿ ಭಾರತ ವಿಶ್ವದಲ್ಲೇ ಅಗ್ರ ಸ್ಥಾನದಲ್ಲಿದೆ ಎಂದು ಕೇಂದ್ರ ಆಹಾರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ನರೇಂದ್ರ ಮೋದಿ ಅವರು ಪ್ರಧಾನಿಯಾದ ಬಳಿಕ ದೇಶದಲ್ಲಿ ಹೈನುಗಾರಿಕೆಗೆ ಪ್ರೋತ್ಸಾಹ ನೀಡುತ್ತಲೇ ಬಂದಿದ್ದಾರೆ. ಪರಿಣಾಮ ಭಾರತ ಈಗ ಅತ್ಯಧಿಕ ಹಾಲು ಉತ್ಪಾದಕ ರಾಷ್ಟ್ರವಾಗಿ ಹೊರ ಹೊಮ್ಮಿದೆ ಎಂದಿದ್ದಾರೆ. 2023-24 ರಲ್ಲಿ 3.78ರಷ್ಟು ಹೆಚ್ಚಳ: ಭಾರತದಲ್ಲಿ 2023-24ರಲ್ಲಿ 3.78ರಷ್ಟು ಹಾಲು ಉತ್ಪಾದಕತೆ ಹೆಚ್ಚಿದೆ. ಹೀಗಾಗಿ ಭಾರತ ಈಗ ಕ್ಷೀರ ಸಾಗರವಾಗಿದೆ ಎಂದು ಸಚಿವ ಜೋಶಿ ಸಂತಸ ವ್ಯಕ್ತಪಡಿಸಿದ್ದಾರೆ. ಭಾರತದಲ್ಲಿ ಈಗ ಬರೋಬ್ಬರಿ 239.30 ಮಿಲಿಯನ್ ಟನ್ ಹಾಲು ಉತ್ಪಾದನೆಯಾಗುತ್ತಿದೆ. ಕಳೆದ ದಶಕಕ್ಕೆ ಹೋಲಿಸಿದರೆ ದುಪ್ಪಟ್ಟು ಹೆಚ್ಚಳ ಕಂಡಿದೆ ಎಂದು ಸಚಿವರು ತಿಳಿಸಿದ್ದಾರೆ.

ದೇಶದಲ್ಲಿ 2013-14 ರಲ್ಲಿ 146.3 ಮಿಲಿಯನ್ ಟನ್ ಹಾಲು ಉತ್ಪಾದನೆ ಆಗುತ್ತಿತ್ತು. ಈಗ ತಮ್ಮ ಸರ್ಕಾರ ಹೈನುಗಾರಿಕೆಗೆ ಪ್ರೋತ್ಸಾಹ, ಬೆಂಬಲ ನೀಡುತ್ತಿರುವುದರಿಂದ ರೈತರೂ ಇದನ್ನೊಂದು ಉದ್ಯಮವನ್ನಾಗಿ ಮಾಡಿಕೊಂಡಿದ್ದಾರೆ. ಇದು ಪ್ರಧಾನಿ ಮೋದಿ ಅವರ ವಿಕಸಿತ ಭಾರತ ಪರಿಕಲ್ಪನೆಗೆ ಪುಷ್ಠಿ ನೀಡಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

# ಫೆಂಗಲ್ ಚಂಡಮಾರುತ ಶನಿವಾರ ತಮಿಳುನಾಡಿಗೆ ಅಪ್ಪಳಿಸುವ ಸಾಧ್ಯತೆ

**ಚೆನ್ನೈ:** ಫೆಂಗಲ್ ಚಂಡಮಾರುತ ಶನಿವಾರ ತಮಿಳುನಾಡು ಮತ್ತು ಪುದುಚೇರಿಯ ಕರಾವಳಿಯ ಕಾರೈಕಲ್ ಮತ್ತು ಮಹಾಬಲೀಪುರಂ ನಡುವೆ ಅಪ್ಪಳಿಸುವ ಸಾಧ್ಯತೆ ಇದೆ. ಈ ವೇಳೆ ಗಂಟೆಗೆ 70 ಕಿ.ಮೀ ವೇಗದವರೆಗೂ ಗಾಳಿ ಬೀಸಲಿದೆ ಎಂದು ಭಾರತೀಯ ಹವಾಮಾನ ಇಲಾಖೆ(ಐಎಂಡಿ) ತಿಳಿಸಿದೆ. ಐಎಂಡಿ ಗುರುವಾರ ಬೆಳಗ್ಗೆ 'ಎಕ್ಸ್' ಪೋಸ್ಟ್ನಲ್ಲಿ, ನೈಋತ್ಯ ಬಂಗಾಳಕೊಲ್ಲಿಯಲ್ಲಿ ಕಡಿಮೆ ಒತ್ತಡ ಪ್ರದೇಶ ನಿರ್ಮಾಣವಾಗಿದೆ. ಇದರಿಂದ ಉಂಟಾಗಿರುವ ಚಂಡಮಾರುತ ನವೆಂಬರ್ 30ರಂದು ಬೆಳಿಗ್ಗೆ ಕಾರೈಕಲ್ ಮತ್ತು ಮಹಾಬಲೀಪುರಂ ಉತ್ತರ ತಮಿಳುನಾಡು-ಪುದುಚೇರಿ ಕರಾವಳಿ ಮಧ್ಯೆ ಅಪ್ಪಳಿಸಲಿದೆ ಎಂದು ತಿಳಿಸಿದೆ. ಇಂದು ಸಂಜೆ ಮತ್ತು ನಾಳೆ ಬೆಳಗ್ಗೆ ನೈಋತ್ಯ ಬಂಗಾಳ ಕೊಲ್ಲಿಯಲ್ಲಿ ಗಾಳಿ ಗಂಟೆಗೆ 85 ಕಿ.ಮೀ ವೇಗದಲ್ಲಿ ಬೀಸಲಿದ್ದು, ಕಡಿಮೆ ಒತ್ತಡ ಪ್ರದೇಶ ತೀವ್ರಗೊಳ್ಳುವ ಸಾಧ್ಯತೆಯಿದೆ. ಚಂಡಮಾರುತ ಮತ್ತು ಮಳೆ ಮುನ್ಸೂಚನೆಯ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಪುದುಚೇರಿಯಲ್ಲಿ ಶಾಲಾ-ಕಾಲೇಜುಗಳಿಗೆ ರಜೆ ನೀಡಲಾಗಿದೆ ಎಂದು ಪುದುಚೇರಿ ಶಿಕ್ಷಣ ಸಚಿವ ಅರುಮುಗಂ ನಮಸ್ಶಿವಾಯಂ ಮಾಹಿತಿ ನೀಡಿದ್ದಾರೆ. ದಿಂಡಿಗಲ್ ಜಿಲ್ಲೆಯ ಕೊಡೈಕೆನಾಲ್, ನಾಗಪಟ್ಟಣಂ, ಚೆನ್ನೈ, ಮುಂದಿನ ಎರಡು ದಿನದಲ್ಲಿ ತೀವ್ರವಾಗಲಿರುವ ಚಂಡಮಾರುತವನ್ನು ಎದುರಿಸಲು ನೌಕಾಪಡೆ ಸಜ್ಜಾಗಿದೆ. ಪೂರ್ವ ನೌಕಾ ಕಮಾಂಡ್ ಪ್ರಧಾನ ಕಚೇರಿ, ತಮಿಳುನಾಡು ಮತ್ತು ಪುದುಚೇರಿ ನೌಕಾ ಕಚೇರಿಯ ಆದೇಶದಂತೆ ಈಗಾಗಲೇ ವಿಪತ್ತು ಪ್ರತಿಕ್ರಿಯೆ ಕಾರ್ಯವಿಧಾನಗಳನ್ನು ಸಕ್ರಿಯಗೊಂಡಿದೆ. ನೆರವು ಮತ್ತು ವಿಪತ್ತು ಪರಿಹಾರ, ಶೋಧ ಕಾರ್ಯಕ್ಕೆ ಪಡೆಗಳು ಸಜ್ಜಾಗಿವೆ. ಹಾಗೆಯೇ, ತುರ್ತು ರಕ್ಷಣಾ ಕಾರ್ಯಾಚರಣೆಗಾಗಿ ಡೈವಿಂಗ್ ತಂಡಗಳು ಸನ್ನದ್ಧವಾಗಿವೆ. ಪಡೆಗಳು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಮಾರ್ಗಸೂಚಿ ಪ್ರಕಾರ ಕಾರ್ಯನಿರ್ವಹಿಸಲಿವೆ. ತುರ್ತು ಪರಿಸ್ಥಿತಿ ನಿರ್ವಹಿಸಲು ಆಹಾರ, ನೀರು ಮತ್ತು ಔಷಧಗಳಂತಹ ಅಗತ್ಯ ವಸ್ತುಗಳ ಪೂರೈಕೆ ಇದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

## ಐಟಿಐ ವಿದ್ಯಾರ್ಥಿನಿಯರಿಗೆ ತಿಂಗಳಲಿ 2 ದಿನ ಮುಟ್ಟಿನ ರಜೆ ಘೋಷಿಸಿದ ಕೇರಳ ಸರ್ಕಾರ

**ತಿರುವನಂತಪುರ:** ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ವಿದ್ಯಾರ್ಥಿನಿಯರಿಗೆ ಪ್ರತಿ ತಿಂಗಳು ಎರಡು ದಿನಗಳ ಮುಟ್ಟಿನ ರಜೆ ನೀಡುವ ಮಹತ್ವದ ನಿರ್ಧಾರವನ್ನು ಕೇರಳ ಸರ್ಕಾರ ಗುರುವಾರ ಪ್ರಕಟಿಸಿದೆ. ರಾಜ್ಯ ಶಿಕ್ಷಣ ಸಚಿವ ವಿ ಶಿವನ್‌ಕುಟ್ಟಿ ಈ ನಿರ್ಧಾರವನ್ನು ಪ್ರಕಟಿಸಿದರು. ದೈಹಿಕ ಶ್ರಮ ಬೇಡುವ ಅನೇಕ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿನಿಯರು ಉತ್ತಮ ಸಾಧನೆ ಮಾಡಿದ್ದಾರೆ. ಇಂದಿನ ಯುಗದಲ್ಲಿ, ಮಹಿಳೆಯರು ಪ್ರತಿಯೊಂದು ಕ್ಷೇತ್ರದಲ್ಲೂ ಸಕ್ರಿಯರಾಗಿದ್ದಾರೆ. ಈ ಅಂಶಗಳನ್ನು ಪರಿಗಣಿಸಿ ಐಟಿಐ ವಿದ್ಯಾರ್ಥಿನಿಯರಿಗೆ ಪ್ರತಿ ತಿಂಗಳು ಎರಡು ದಿನಗಳ ಋತುಚಕ್ರದ ರಜೆಯನ್ನು ನೀಡಲು ಸರ್ಕಾರ ನಿರ್ಧರಿಸಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕೇರಳದ 100ಕ್ಕೂ ಹೆಚ್ಚು ಐಟಿಐ ಕಾಲೇಜುಗಳಲ್ಲಿ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿನಿಯರು ಇದರ ಪ್ರಯೋಜನ ಪಡೆಯಲಿದ್ದಾರೆ. ಪ್ರಯೋಜನ ಪಡೆಯುವ ವಿದ್ಯಾರ್ಥಿಗಳ ನಿಖರ ಸಂಖ್ಯೆಯನ್ನು ಕಂಡುಹಿಡಿಯಲಾಗುತ್ತಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಇನ್ನು ಶನಿವಾರ ಎಲ್ಲಾ ಐಟಿಐ ಕಾಲೇಜುಗಳಿಗೆ ರಜೆ ನೀಡಲು ಕೇರಳ ಸರ್ಕಾರ ನಿರ್ಧರಿಸಿದೆ. ಈ ಹಿನ್ನೆಲೆ ತರಬೇತಿ ಸಮಯವನ್ನು ಸರಿದೂಗಿಸಲು, ಐಟಿಐ ಶಿಫ್ಟ್‌ಗಳನ್ನು ಮರುಹೊಂದಿಸಲಾಗುತ್ತದೆ. ಮೊದಲ ಪಾಳಿಯು ಬೆಳಿಗ್ಗೆ 7:30ರಿಂದ ಮಧ್ಯಾಹ್ನ 3 ರವರೆಗೆ ಮತ್ತು ಎರಡನೇ ಶಿಫ್ಟ್ ಬೆಳಿಗ್ಗೆ 10 ರಿಂದ ಸಂಜೆ 5:30 ರವರೆಗೆ ಇರುತ್ತದೆ ಎಂದು ಶಿಕ್ಷಣ ಸಚಿವರು ತಿಳಿಸಿದ್ದಾರೆ.

## ಸೈಬರ್ ವಂಚನೆ ಪ್ರಕರಣ ದಾಳಿ ನಡೆಸಿದ ಇ.ಡಿ ಅಧಿಕಾರಿಗಳ ಮೇಲೆ ಹಲ್ಲೆ

**ನವದೆಹಲಿ:** ಜಾರಿ ನಿರ್ದೇಶನಾಲಯ ತಂಡ ದಾಳಿ ನಡೆಸಿದ್ದ ವೇಳೆ ಅಧಿಕಾರಿಗಳ ಮೇಲೆ ಹಲ್ಲೆ ನಡೆದ ಘಟನೆ ದೆಹಲಿಯ ಬಿಜ್ವಾಸನ್ ಪ್ರದೇಶದಲ್ಲಿ ನಡೆದಿದೆ. ಏಜೆನ್ಸಿಯ ಹೈ-ಇಂಟೆನ್ಸಿಟಿ ಯೂನಿಟ್‌ನ ಭಾಗವಾಗಿರುವ ಇಆ ತಂಡವು ಸೈಬರ್ ಅಪ್ಲಿಕೇಶನ್ ವಂಚನೆ ಪ್ರಕರಣದ ತನಿಖೆಗೆ ಸಂಬಂಧಿಸಿದ ಶೋಧಕ್ಕೆ ತೆರಳಿತ್ತು. ಈ ವೇಳೆ ಅಶೋಕ್ ಶರ್ಮಾ ಮತ್ತು ಆತನ ಸಹೋದರ ಹಾಗೂ ಕುಟುಂಬದ ಸದಸ್ಯರು ಸೇರಿಕೊಂಡು ತಂಡದ ಮೇಲೆ ಹಲ್ಲೆ ನಡೆಸಿದ್ದಾರೆ. ಈ ವೇಳೆ ಇಡಿ ಸಹಾಯಕ ನಿರ್ದೇಶಕರಿಗೆ ಗಾಯಗಳಾಗಿವೆ.ಗಲಾಟೆ ಹೆಚ್ಚಾಗುತ್ತಿದ್ದಂತೆ ಸ್ಥಳೀಯ ಪೊಲೀಸರನ್ನು ತಕ್ಷಣವೇ ಸ್ಥಳಕ್ಕೆ ಕರೆಸಲಾಗಿದೆ. ಬಳಿಕ ಆರೋಪಿಗಳು ಸ್ಥಳದಿಂದ ಪರಾರಿಯಾಗಿದ್ದಾರೆ. ಪರಿಸ್ಥಿತಿ ನಿಯಂತ್ರಣದಲ್ಲಿದ್ದು, ಪರಾರಿಯಾದ ಆರೋಪಿಗಳ ಪತ್ತೆಗೆ ಪೊಲೀಸರು ಮುಂದಾಗಿದ್ದಾರೆ.ಭಾರತದಾದ್ಯಂತ ಕಾರ್ಯನಿರ್ವಹಿಸುತ್ತಿರುವ ಬೃಹತ್ ಸೈಬರ್ ಕ್ರೈಮ್ ನೆಟ್ ವರ್ಕ್‌ಗೆ ಸಂಬಂಧಿಸಿರುವ ಉನ್ನತ ಚಾರ್ಟರ್ಡ್ ಅಕೌಂಟೆಂಟ್ ಗಳನ್ನು ಗುರಿಯಾಗಿಟ್ಟುಕೊಂಡು ಜಾರಿ ನಿರ್ದೇಶನಾಲಯದ ಹೈ-ಇಂಟೆನ್ಸಿಟಿ ಯುನಿಟ್ (ಹೆಚ್‌ಐಯು) ಇಂದು ವ್ಯಾಪಕ ದಾಳಿ ಪ್ರಾರಂಭಿಸಿದೆ ಎಂದು ಇಡಿ ಮೂಲಗಳು ತಿಳಿಸಿವೆ.ಈ ದಾಳಿಗಳು ಫಿಶಿಂಗ್ ಹಗರಣ, ಕ್ಯೂಆರ್ ಕೋಡ್ ವಂಚನೆ ಮತ್ತು ಅರೆಕಾಲಿಕ ಉದ್ಯೋಗ ಹಗರಣ ಹಾಗೂ ಸಾವಿರಾರು ಸೈಬರ್ ಅಪರಾಧಗಳು ಸೇರಿದಂತೆ ಅಕ್ರಮ ಮನಿ ಲಾಂಡರಿಂಗ್ ಪ್ರಕರಣಗಳಿಗೆ ಸಂಬಂಧಿಸಿದ್ದಾಗಿದೆ.



## ದೆಹಲಿಯ ಪಿವಿಆರ್ ಸಿನಿಮಾ ಹಾಲ್ ಬಳಿ ಸ್ಫೋಟ

**ನವದೆಹಲಿ:** ವಾಯುವ್ಯ ದೆಹಲಿಯ ಪ್ರಶಾಂತ್ ವಿಹಾರ್ ಪ್ರದೇಶದ ಪಿವಿಆರ್ ಸಿನಿಮಾ ಹಾಲ್ ಬಳಿ ಸ್ಫೋಟ ಸಂಭವಿಸಿದೆ.ಇಂದು ಬೆಳಗ್ಗೆ 11:48ರ ಸುಮಾರಿಗೆ ಸ್ಫೋಟದ ಸದ್ದು ಕೇಳಿಸಿದೆ. ಪೊಲೀಸರು ಮತ್ತು ಅಗ್ನಿಶಾಮಕ ವಾಹನಗಳು ಘಟನಾ ಸ್ಥಳಕ್ಕೆ ಧಾವಿಸಿದ್ದು, ದೆಹಲಿ ಪೊಲೀಸ್ ವಿಶೇಷ ದಳದ ತಂಡವು ತೆರಳುತ್ತಿದೆ. ಪ್ರಶಾಂತ್ ವಿಹಾರ್‌ನ ಸಿಆರ್‌ಪಿಎಫ್ ಶಾಲೆಯ ಬಳಿ ಸ್ಫೋಟ ಸಂಭವಿಸಿದ ಒಂದು ತಿಂಗಳ ನಂತರ ಮತ್ತೊಂದು ಘಟನೆ ನಡೆದಿದೆ. ಸ್ಫೋಟದಲ್ಲಿ ಶಾಲೆಯ ಗೋಡೆಗೆ ಹಾನಿಯಾಗಿದೆ. ಆದರೆ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ.ಉದ್ಯಾನದ ಗಡಿ ಗೋಡೆಯ ಬಳಿ ಸ್ಫೋಟ ಸಂಭವಿಸಿದೆ. ತನಿಖಾಧಿಕಾರಿಗಳು ಸ್ಥಳದಲ್ಲಿ ಬಿಳಿ ಪುಡಿಯಂತಹ ವಸ್ತುವನ್ನು ಗಮನಿಸಿದ್ದಾರೆ. ಶಾಲೆಯ ಸ್ಫೋಟದ ಸ್ಥಳದಲ್ಲಿ ಇದೇ ರೀತಿಯ ಪುಡಿ ಪದಾರ್ಥ ಪತ್ತೆಯಾಗಿತ್ತು.



# ರಿಲಯನ್ಸ್ ಡಿಜಿಟಲ್‌ನಲ್ಲಿ ಬ್ಲ್ಯಾಕ್ ಫ್ರೈಡೇ ಆಫರ್ಸ್

**ಮುಂಬೈ:** ಬಹಳ ಸಮಯದಿಂದ ಕಾಯುತ್ತಾ ಬಂದಿದ್ದ ರಿಲಯನ್ಸ್ ಡಿಜಿಟಲ್ ನ ''ಬ್ಲ್ಯಾಕ್ ಫ್ರೈಡೇ'' ಮಾರಾಟ ಕೊನೆಗೂ ಕಣ್ಣೆದುರು ನಿಂತಿದೆ. ಒಂದಿಡೀ ವರ್ಷ ಬಹು ನಿರೀಕ್ಷೆಯಿಂದ ಎದುರು ನೋಡುತ್ತಿದ್ದ ಹಲವು ಡೀಲ್-ಆಫರ್ ಗಳು ಗ್ರಾಹಕರಿಗೆ ಕೈಗೆ ಸಿಗುತ್ತದೆ. ನವೆಂಬರ್ 28ರಿಂದ ಆರಂಭವಾಗಿ ಡಿಸೆಂಬರ್ 2ರ ತನಕ ಆಫರ್ ಗಳ ಸುರಿಮಳೆಯಿದೆ. ಅದು ಸ್ಮಾರ್ಟ್ ಫೋನ್ ಗಳು, ಲ್ಯಾಪ್ ಟಾಪ್ ಗಳು, ಗೃಹೋಪಯೋಗಿ ವಸ್ತುಗಳು ಇವೆಲ್ಲಕ್ಕೂ ದೊರೆಯಲಿವೆ. ರಿಲಯನ್ಸ್ ಡಿಜಿಟಲ್, ಮೈಜಿಯೋ ಸ್ಟೋರ್ ಗಳು ಮತ್ತು eliancedigital.in ನಲ್ಲಿ ಈ ಎಲ್ಲ ಕಡೆ ಸಿಗುವ ವಸ್ತುಗಳನ್ನು ಖರೀದಿಸುವ ಮೂಲಕ ಗ್ರಾಹಕರು ತಮ್ಮ ಕನಸನ್ನು ನಿಜ ಮಾಡಿಕೊಳ್ಳಬಹುದಾಗಿದೆ.

ಈ ವರ್ಷದ ಮಾರಾಟದಲ್ಲಿ ಗ್ರಾಹಕರು ಐಸಿಐಸಿಐ ಬ್ಯಾಂಕ್, ಐಡಿಎಫ್ ಸಿ ಫಸ್ಟ್ ಬ್ಯಾಂಕ್ ಮತ್ತು ಒನ್ ಕಾರ್ಡ್ ನಿಂದ ಆಯ್ದ ಡೆಬಿಟ್ ಮತ್ತು ಕ್ರೆಡಿಟ್ ಕಾರ್ಡ್ಗಳ ಮೇಲೆ 10,000 ರೂಪಾಯಿಗಳ ತಕ್ಷಣದ ರಿಯಾಯಿತಿಯನ್ನು ನೀಡುತ್ತದೆ. ಕನ್ಸ್ಯೂಮರ್ ಡ್ಯೂರಬಲ್ಸ್ ಲೋನ್ಗಳನ್ನು ಆಯ್ಕೆ ಮಾಡುವವರಿಗೆ, ಫೈನಾನ್ಸ್ ಪಾಲುದಾರರಾದ ಬಜಾಜ್ ಫಿನ್ಸರ್ವ್ ಮತ್ತು ಐಡಿಎಫ್ಸಿ ಫಸ್ಟ್ ಬ್ಯಾಂಕ್ನಲ್ಲಿ ರೂ. 22,500 ವರೆಗೆ ಕ್ಯಾಶ್ಬ್ಯಾಕ್ ಲಭ್ಯವಿದೆ.

ಕಡಿಮೆ ಬೆಲೆಯಲ್ಲಿ ಲಭ್ಯವಿರುವ ಆಪಲ್ ಉತ್ಪನ್ನಗಳನ್ನು ಖರೀದಿಸಲು ರಿಲಯನ್ಸ್ ಡಿಜಿಟಲ್ ಗ್ರಾಹಕರಿಗೆ ಎಲ್ಲ ಕಾರಣಗಳನ್ನು ನೀಡುತ್ತದೆ. ಐಫೋನ್ 16 ಅನ್ನು ಕೇವಲ ರೂ. 70900ಕ್ಕೆ ನಂಬುವುದಕ್ಕೆ ಸಾಧ್ಯವಾಗದ ಬೆಲೆಯಲ್ಲಿ ಪಡೆಯಬಹುದು. ಐಪ್ಯಾಡ್ಗಳನ್ನು ತಿಂಗಳಿಗೆ ರೂ.1371ಗಳಿಂದ ಪ್ರಾರಂಭಿಸಿ ಖರೀದಿಸಬಹುದು.

ನೆಚ್ಚಿನ ಸೈಡ್-ಬೈ-ಸೈಡ್ ರೆಫ್ರಿಜರೇಟರ್ ಅನ್ನು ಖರೀದಿಸಿ ಮತ್ತು ರೂ. 25000 ತನಕ ತಕ್ಷಣದ ರಿಯಾಯಿತಿ ಪಡೆಯಬಹುದು. ಫಿಲಿಪ್ಸ್ ಏರ್ ಫ್ರೈಯರ್ ಮೌಲ್ಯ ರೂ. 8995ರ ಮೌಲ್ಯದ್ದು ಕೇವಲ ರೂ. 1999ಕ್ಕೆ ಪಡೆಯಬಹುದಾಗಿದೆ.

ಫ್ರಂಟ್ ಲೋಡ್ ವಾಷಿಂಗ್ ಮಶೀನ್ ಗಳ ಮೇಲೆ ರೂ. 12000 ತನಕ ತಕ್ಷಣದ ರಿಯಾಯಿತಿ ಮತ್ತು ಫಿಲಿಪ್ಸ್ ಏರ್ ಫ್ರೈಯರ್ ರೂ. 8995 ಮೌಲ್ಯದ್ದು ಕೇವಲ ರೂ. 1499ಕ್ಕೆ ದೊರೆಯುತ್ತದೆ.

ಬಿಪಿಎಲ್ 1.5 ಟನ್ 3 ಸ್ಟಾರ್ ಏಸಿ ಕೇವಲ ರೂ. 29990ಕ್ಕೆ ಸಿಗುತ್ತದೆ. ಸ್ಮಾರ್ಟ್ ಇನ್ವರ್ಟರ್ ಏಸಿಗಳಲ್ಲಿ ಕೆಲವು ಸೂಪರ್-ಕೂಲ್ ಆಫರ್ಗಳೂ ಇವೆ.ಶಕ್ತಿಶಾಲಿ ಗೇಮಿಂಗ್ ಲ್ಯಾಪ್ಟಾಪ್ಗಳೊಂದಿಗೆ ಉನ್ನತ ಶ್ರೇಣಿಯ ಗೇಮಿಂಗ್ ಅನ್ನು ಅತ್ಯುತ್ತಮ ಬೆಲೆಯಲ್ಲಿ ಪಡೆಯಬಹುದು, ಕೇವಲ ರೂ. 46,990ರಿಂದ ಪ್ರಾರಂಭವಾಗುತ್ತದೆ!ಸಿನಿಮಾ ತರಹದ ಚಿತ್ರದ ಗುಣಮಟ್ಟವನ್ನು ಮನೆಗೆ ತರಲು ಔಐಇಆ ಸ್ಮಾರ್ಟ್ ಟಿವಿಗಳ ಮೇಲೆ ರೂ. 26000 ತನಕ ತಕ್ಷಣದ ರಿಯಾಯಿತಿ ದೊರೆಯುತ್ತದೆ. ಖರೀದಿ ಮಾಡಿದ ನಂತರ ರೂ. 36990 ಮೌಲ್ಯದ ಉಚಿತ ಟಿವಿಯನ್ನು ಅಥವಾ ರೂ. 18990 ಮೌಲ್ಯದ ಜೆಬಿಎಲ್ ಸೌಂಡ್ ಬಾರ್ ಪಡೆಯಬಹುದು.ಸೋನಿ 510 ಟ್ರೂಲಿ ವೈರ್ಲೆಸ್ ಇಯರ್ ಬಡ್ಸ್ ರೂ. 8990 ಮೌಲ್ಯದ್ದು ಈಗ ಕೇವಲ ರೂ.3990ಗಳಲ್ಲಿ ಲಭ್ಯವಿದೆ. ಸ್ಯಾಮ್ಸಂಗ್ 3.1 ಚಾನೆಲ್ ಃ650ಆ ಸೌಂಡ್ ಬಾರ್ ಈಗ ಕೇವಲ ರೂ.15990ರಲ್ಲಿ ಸಿಗಲಿದ್ದು, ಶೇ 50ರಷ್ಟು ಉಳಿತಾಯದ ಬೆಲೆ ಇದಾಗಿದೆ

# ಇಸ್ಕಾನ್ ನಿಷೇಧಿಸುವಂತೆ ಬಾಂಗ್ಲಾ ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಕೆ



**ಢಾಕಾ:** ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲಾಗುತ್ತಿರುವ ನಿರಂತರ ದಾಳಿಗಳ ನಡುವೆ ಇಸ್ಕಾನ್ ಅನ್ನು ನಿಷೇಧಿಸುವಂತೆ ಕೋರಿ ಬಾಂಗ್ಲಾದೇಶ ಹೈಕೋರ್ಟ್ಗೆ ಅರ್ಜಿ ಸಲ್ಲಿಸಲಾಗಿದೆ. ಚಿತ್ತಗಾಂಗ್ ಮತ್ತು ರಂಗ್ಪುರ ನಗರಗಳಲ್ಲಿ ನಡೆಯುತ್ತಿರುವ ಅಹಿತಕರ ಘಟನೆಗಳನ್ನು ತಡೆಯಲು ಕೂಡಲೇ ತುರ್ತು ಪರಿಸ್ಥಿತಿಯನ್ನು ಘೋಷಿಸಬೇಕೆಂದೂ ಮನವಿ ಮಾಡಲಾಗಿದೆ.

ಇಸ್ಕಾನ್ನ ಇತ್ತೀಚಿನ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಈವರೆಗೆ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ಎಂದು ಹೈಕೋರ್ಟ್ ಸರ್ಕಾರವನ್ನು ಪ್ರಶ್ನಿಸಿದೆ. ಸರ್ಕಾರದ ಕ್ರಮಗಳ ಕುರಿತು ಕಡ್ಡಾಯವಾಗಿ ಗುರುವಾರ ಮಾಹಿತಿ ನೀಡಬೇಕೆಂದು ಅಟಾರ್ನಿ ಜನರಲ್ ಮೊಹಮ್ಮದ್ ಅಸಾದುಝಮಾನ್ ಅವರಿಗೆ ನ್ಯಾಯಾಲಯವು ಸೂಚಿಸಿದೆ. ಹೈಕೋರ್ಟ್ ಪೀಠದಲ್ಲಿ ನ್ಯಾಯಮೂರ್ತಿ ಫರಾ ಮೆಹಬೂಬ್ ಮತ್ತು ನ್ಯಾಯಮೂರ್ತಿ ದೇಬಶಿಶ್ ರಾಯ್ ಚೌಧರಿ ಇದ್ದಾರೆ ಎಂದು ತಿಳಿದು ಬಂದಿದೆ.

ಬಾಂಗ್ಲಾದೇಶ ಸರ್ಕಾರವು ಇಸ್ಕಾನ್ ಅನ್ನು ಧಾರ್ಮಿಕ ಮೂಲಭೂತವಾದಿ ಸಂಘಟನೆ ಎಂದು ಘೋಷಿಸಿದೆ. ಇದು ಸರ್ಕಾರದ ಮುಖ್ಯ ಅಜೆಂಡಾವಾಗಿದ್ದು ಅದಕ್ಕೆ ಬೇಕಾದ ಸಿದ್ಧತೆಗಳನ್ನು ಆರಂಭಿಸಲಾಗಿದೆ ಎಂದು ಬಾಂಗ್ಲಾದೇಶದ ಅಟಾರ್ನಿ ಜನರಲ್, ಹೈಕೋರ್ಟ್ಗೆ ತಿಳಿಸಿದ್ದಾರೆ ಎಂದು ಹೇಳಲಾಗುತ್ತಿದೆ.

ದೇಶದಲ್ಲಿ ಧಾರ್ಮಿಕ ಅಲ್ಪಸಂಖ್ಯಾತರ ಸುರಕ್ಷತೆಯ ಬಗ್ಗೆ ಕಳವಳ ವ್ಯಕ್ತವಾಗಿದ್ದು, ಪರಿಸ್ಥಿತಿಯನ್ನು ನಿಯಂತ್ರಿಸಲು ತಕ್ಷಣದ ಕ್ರಮಗಳನ್ನು ತೆಗೆದುಕೊಳ್ಳುವಂತೆ ಮತ್ತು ದೇಶದಲ್ಲಿ ಕಾನೂನು ಸುವ್ಯವಸ್ಥೆ ಹದಗೆಡದಂತೆ ಎಚ್ಚರವಹಿಸುವಂತೆ ಹೈಕೋರ್ಟ್ ಬಾಂಗ್ಲಾ ಸರ್ಕಾರಕ್ಕೆ ಸೂಚನೆ ನೀಡಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ದಾಂಪತ್ಯ ಜೀವನಕ್ಕೆ ಕಾಲಿಟ್ಟ ನಿರ್ದೇಶಕ ಅಭಿಷೇಕ್ ಶೆಟ್ಟಿ



'ಆರಾಮ್ ಅರವಿಂದ ಸ್ವಾಮಿ' ಡೈರೆಕ್ಟರ್ ಅಭಿಷೇಕ್ ಶೆಟ್ಟಿ ಅವರು ಸಾಕ್ಷಾ ಶೆಟ್ಟಿ ನಿನ್ನೆ ವೈವಾಹಿಕ ಜೀವನಕ್ಕೆ ಕಾಲಿಟ್ಟಿದ್ದಾರೆ. ಮದುವೆಯ ಸುಂದರ ಫೋಟೋಗಳನ್ನು ಹಂಚಿಕೊಂಡು, ನಮ್ಮನ್ನು ಹಾರೈಸಿ ಎಂದು ಫ್ಯಾನ್ಸ್‌ಗೆ ಮನವಿ ಮಾಡಿದ್ದಾರೆ.

ನವಜೋಡಿ ಅಭಿಷೇಕ್ ಮತ್ತು ಸಾಕ್ಷಾ ಶೆಟ್ಟಿ ಗೋಲ್ಡನ್ ಕಲರ್ ಉಡುಗೆಯಲ್ಲಿ ಮಿಂಚಿದ್ದಾರೆ. ನಿಮ್ಮೆಲ್ಲರ ಆಶೀರ್ವಾದ ಇರಲಿ ಕೆಲಸದ ಒತ್ತಡದಿಂದಾಗಿ ಎಲ್ಲರನ್ನೂ ಕರೆಯೋಕೆ ಆಗಿಲ್ಲ ಎಂದಿನಂತೆ ಪ್ರೀತಿ ಆಶೀರ್ವಾದ ಇರಲಿ ಎಂದು ಅಭಿಷೇಕ್ ಶೆಟ್ಟಿ ಮದುವೆಯ ಫೋಟೋ ಹಂಚಿಕೊಂಡಿದ್ದಾರೆ.

ಬೆಂಗಳೂರಿನ ಐಟಿ ಕಂಪನಿಯೊಂದರಲ್ಲಿ ಫೈನಾನ್ಸ್ ವಿಭಾಗದಲ್ಲಿ ಕೆಲಸ ಮಾಡುತ್ತಿರುವ ಸಾಕ್ಷಾ ಜೊತೆ ಅಭಿಷೇಕ್ ಜೊತೆ ಕುಂದಾಪುರದಲ್ಲಿ ಗುರುಹಿರಿಯರ ಸಮ್ಮುಖದಲ್ಲಿ ಮದುವೆಯಾಗಿದ್ದಾರೆ. ನಟನಿಗೆ ಅಭಿಮಾನಿಗಳು ಇದೀಗ ಶುಭಹಾರೈಸುತ್ತಿದ್ದಾರೆ.

ನಮ್ ಗಣಿ ಬಿಕಾಂ ಪಾಸ್, ಗಜಾನನ ಗ್ಯಾಂಗ್ ಚಿತ್ರದಲ್ಲಿ ನಟನೆಯ ಜೊತೆ ನಿರ್ದೇಶಕನಾಗಿ ಪ್ರೇಕ್ಷಕರ ಗಮನ ಸೆಳೆದಿದ್ದಾರೆ. 'ಆರಾಮ್ ಅರವಿಂದ ಸ್ವಾಮಿ' ಚಿತ್ರಕ್ಕೆ ಅಭಿಷೇಕ್ ಶೆಟ್ಟಿ ಆಕ್ಷನ್ ಕಟ್ ಹೇಳಿದ್ದು, ಈ ಚಿತ್ರದ ಮುಖ್ಯಭೂಮಿಕೆಯಲ್ಲಿ ಅನೀಶ್- ಮಿಲನಾ ನಟಿಸಿದರು.

# ಕಿಯಾರಾ ಜೊತೆ ರಾಮ್ ಚರಣ್ ರೊಮ್ಯಾನ್ಸ್



ಬಾಲಿವುಡ್ ಬೆಡಗಿ ಕಿಯಾರಾ ಅಡ್ವಾಣಿ ಮತ್ತು ರಾಮ್ ಚರಣ್ ನಟನೆಯ 'ಗೇಮ್ ಚೇಂಜರ್' ಸಿನಿಮಾದ ರೊಮ್ಯಾಂಟಿಕ್ ಸಾಂಗ್‌ವೊಂದು ರಿಲೀಸ್ ಆಗಿದೆ. ಕಿಯಾರಾ ಜೊತೆಗಿನ ರಾಮ್ ಚರಣ್ ಲವ್ಲಿ ಸಾಂಗ್ ನೋಡಿ ಫ್ಯಾನ್ಸ್‌ಗೆ ಥ್ರಿಲ್ ಆಗಿದ್ದಾರೆ.

'ಗೇಮ್ ಚೇಂಜರ್' ಸಿನಿಮಾದ ಹಾಡಿನಲ್ಲಿ ಕಿಯಾರಾ, ರಾಮ್ ಚರಣ್ ಮುದ್ದಾಗಿ ಕಾಣಿಸಿಕೊಂಡಿದ್ದಾರೆ. ಕಲರ್‌ಫುಲ್ ಬ್ಯಾಕ್ ಗ್ರೌಂಡ್‌ನಲ್ಲಿ ಈ ಜೋಡಿ ಕುಣಿದು ಕುಪ್ಪಳಿಸಿದೆ. ಗಾಯಕಿ ಶ್ರೇಯಾ ಘೋಷಾಲ್ ಈ ಹಾಡಿಗೆ ಧ್ವನಿಯಾಗಿದ್ದಾರೆ. ಸದ್ಯ ಈ ಹಾಡು ನೋಡಿ ಸಿನಿಮಾ ಮೇಲಿನ ನಿರೀಕ್ಷೆ ಹೆಚ್ಚಾಗಿದೆ.

ಈ ಚಿತ್ರಕ್ಕೆ ಶಂಕರ್ ಎಸ್. ಆಕ್ಷನ್ ಕಟ್ ಹೇಳಿದ್ದಾರೆ. ಮುಂದಿನ ವರ್ಷ ಜ.10ಕ್ಕೆ ಸಿನಿಮಾ ರಿಲೀಸ್ ಆಗಲಿದೆ. ರಾಮ್ ಮತ್ತು ಕಿಯಾರಾ ಎರಡನೇ ಬಾರಿ ಈ ಚಿತ್ರಕ್ಕಾಗಿ ಒಂದಾಗಿದ್ದಾರೆ.

'ಗೇಮ್ ಚೇಂಜರ್' ಸಾಂಗ್ ಔಟ್

# ಟೀಸರ್ ಅಲ್ಲ, ಟ್ರೈಲರ್ ಅಲ್ಲ ಡಿ.2ಕ್ಕೆ ಬರಲಿದೆ 'ಯುಐ' ವಾರ್ನರ್






ರಿಯಲ್ ಸ್ಟಾರ್ ಉಪೇಂದ್ರ ನಟನೆಯ 'ಯುಐ' ಸಿನಿಮಾದ ಅಪ್‌ಡೇಟ್‌ಗಾಗಿ ಕಾಯುತ್ತಿದ್ದ ಅಭಿಮಾನಿಗಳಿಗೆ ಸಿಹಿಸುದ್ದಿ ಸಿಕ್ಕಿದೆ. ಡಿ.2ರಂದು 'ಯುಐ' ಸಿನಿಮಾದ ವಾರ್ನರ್ ರಿಲೀಸ್ ಆಗಲಿದೆ.

ನಟ ಉಪೇಂದ್ರ ಮತ್ತೆ ಅಭಿಮಾನಿಗಳ ತಲೆಗೆ ಹುಳ ಬಿಡುವ ಕೆಲಸ ಮಾಡಿದ್ದಾರೆ. 'ಯುಐ' ಸಿನಿಮಾದ ಟೀಸರ್ ಅಲ್ಲ, ಟ್ರೇಲರ್ ಅಲ್ಲ. ವಾರ್ನರ್ ಬಗ್ಗೆ ಅಪ್‌ಡೇಟ್ ಸಿಗಲಿದೆ ಎಂದು ಉಪೇಂದ್ರ ಸೋಶಿಯಲ್ ಮೀಡಿಯಾದಲ್ಲಿ ಬರೆದುಕೊಂಡಿದ್ದಾರೆ. ಡಿ.2ರಂದು ಬೆಳಗ್ಗೆ 11:07 ವಾರ್ನರ್ ರಿಲೀಸ್ ಆಗಲಿದೆ.

ಉಪೇಂದ್ರ ನಟನೆಯ 'ಯುಐ' ಚಿತ್ರ ಬಗ್ಗೆ ಡಿಫರೆಂಟ್ ಅನೌನ್ಸ್ ಮಾಡಿದ್ದಾರೆ. ಇದೇ ಡಿಸೆಂಬರ್ 2ಕ್ಕೆ 'ಯುಐ' ಚಿತ್ರದ 'ವಾರ್ನರ್' ಝಲಕ್ ತೋರಿಸಲು ಉಪೇಂದ್ರ ಸಜ್ಜಾಗಿದ್ದಾರೆ. 'ವಾರ್ನರ್' ಎಂಬುದು ಟ್ರೈಲರ್‌ಗೆ ಉಪೇಂದ್ರ ಕರೆದಿರುವ ಹೊಸ ಪದವಾಗಿದೆ. ಈ ಮೂಲಕ ಭಾರೀ ನಿರೀಕ್ಷೆ ಹುಟ್ಟಿಸಿದ್ದಾರೆ.

ಉಪೇಂದ್ರ ನಟಿಸಿ, ನಿರ್ದೇಶನ ಮಾಡಿರುವ 'ಯುಐ' ಸಿನಿಮಾ ಡಿ.20ರಂದು ಬಹುಭಾಷೆಗಳಲ್ಲಿ ರಿಲೀಸ್ ಆಗಲಿದೆ. 'ಯುಐ' ವಿಸ್ಮಯದ ಜಗತ್ತಿನ ಸ್ಯಾಂಪಲ್ ತೋರಿಸಲು ಸಜ್ಜಾಗಿದ್ದಾರೆ. ಈಗಾಗಲೇ ಸಾಂಗ್ ಬೀಟ್ಸ್, ಟ್ರೋಲ್ ಆಗುತ್ತೆ ಎಂಬ ಝಲಕ್‌ನಿಂದ ಅಭಿಮಾನಿಗಳ ನಿರೀಕ್ಷೆ ದುಪ್ಪಟ್ಟು ಮಾಡಿದೆ. ಉಪೇಂದ್ರಗೆ ನಾಯಕಿಯಾಗಿ ಕೊಡಗಿನ ಬೆಡಗಿ ರೀಷ್ಮಾ ನಾಣಯ್ಯ ನಟಿಸಿದ್ದಾರೆ. ಲಹರಿ ಫಿಲಂಸ್ ಹಾಗೂ ವೀನಸ್ ಎಂಟರ್‌ಟೈನರ್ಸ್ ಮೂಲಕ ಮಹೋಹರ್ ನಾಯ್ಡು ಹಾಗೂ ಕೆಪಿ ಶ್ರೀಕಾಂತ್ ಅದ್ದೂರಿಯಾಗಿ ನಿರ್ಮಾಣ ಮಾಡಿದ್ದಾರೆ.

# ಆರ್‌ಸಿಬಿ ಹಿಂದಿ ಒಲವಿಗೆ ಕನ್ನಡ ಅಭಿಮಾನಿಗಳ ಆಕ್ರೋಶ




ಐಪಿಎಲ್‌ನಲ್ಲಿ ಬೆಂಗಳೂರನ್ನು ಪ್ರತಿನಿಧಿಸುತ್ತಿರುವ ಆರ್‌ಸಿಬಿಗೂ ಕನ್ನಡ-ಹಿಂದಿ ಭಾಷಾ ಬಿಸಿ ತಟ್ಟಿದೆ.

ಸೀಸನ್ 18 ಹರಾಜಿನ ವೇಳೆ ಆರ್‌ಸಿಬಿ ಮ್ಯಾನೇಜ್‌ಮೆಂಟ್ ಹಿಂದಿ ಸೋಷಿಯಲ್ ಮೀಡಿಯಾ ಓಪನ್ ಮಾಡಿದೆ. ವಿರಾಟ್ ಕೊಹ್ಲಿ ಹಿಂದಿಯಲ್ಲಿ ಆರ್‌ಸಿಬಿ ಬಗ್ಗೆ ಮಾತಾಡಿರುವ ವಿಡಿಯೋವನ್ನು ಹಂಚಿಕೊಂಡಿದೆ. ಆರ್‌ಸಿಬಿ ಹಿಂದಿ ಪ್ರೀತಿಗೆ ಕನ್ನಡ ಫ್ಯಾನ್ಸ್ ಸಿಡಿದೆದ್ದಿದ್ದಾರೆ.

ಇದು ಬೆಂಗಳೂರಿನ ಕನ್ನಡ ಸಂಸ್ಕೃತಿಗೆ ಮಾಡಿರುವ ಅವಮಾನ. ಈ ಕ್ಷಣವೇ ಹಿಂದಿ ಪೇಜ್ ಅನ್ನು ರದ್ದು ಮಾಡಿ ಡಿಲೀಟ್ ಮಾಡಿ ಎಂದು ಆಗ್ರಹಿಸಿದ್ದಾರೆ. ಆದರೆ ಆರ್‌ಸಿಬಿ ಕನ್ನಡ ಅಭಿಮಾನಿಗಳ ಆಕ್ಷೇಪಕ್ಕೆ ಇತರೇ ಭಾಷಿಕರಿಂದಲೂ ಆಕ್ಷೇಪ ವ್ಯಕ್ತವಾಗಿದೆ.

ವಿವಾದದ ಬೆನ್ನಲ್ಲೇ ಬಳಿಕ ಎಚ್ಚೆತ್ತ ಆರ್‌ಸಿಬಿ ಮ್ಯಾನೇಜ್‌ಮೆಂಟ್ ಸ್ಪಷ್ಟನೆ ಕೊಟ್ಟಿದೆ. ಮತ್ತಷ್ಟು ಜನರನ್ನು ತಲುಪುವ ಗುರಿ ಹೊಂದಿದ್ದು, ಕನ್ನಡ, ಹಿಂದಿ ಪೇಜ್ ಓಪನ್ ಮಾಡಿದ್ದೇವೆ. ಜೊತೆಗೆ ಮತ್ತಷ್ಟು ಭಾಷೆಗಳಲ್ಲೂ ಸೋಷಿಯಲ್ ಮೀಡಿಯಾ ಪೇಜ್ ಆರಂಭಿಸುತ್ತೇವೆ ಎಂದು ಸ್ಪಷ್ಟನೆ ಕೊಟ್ಟಿದೆ.

ಆರ್‌ಸಿಬಿ ಮ್ಯಾನೇಜ್‌ಮೆಂಟ್ ಸಮರ್ಥನೆಗೂ ಅಭಿಮಾನಿಗಳು ಕಿಡಿಕಾರಿದ್ದಾರೆ. ಬೇರೆ ತಂಡಗಳು ಕನ್ನಡದಲ್ಲಿ ಪೇಜ್ ಓಪನ್ ಮಾಡುತ್ತಾರಾ? ಸಂವಹನಕ್ಕೆ ಬೇಕಾದರೆ ಕನ್ನಡ-ಇಂಗ್ಲಿಷ್ ಸಾಲದೇ ಅಂತ ಪ್ರಶ್ನಿಸಿದ್ದಾರೆ.

ಇನ್ನು ಕೆಲವರು ಆರ್‌ಸಿಬಿ ಏನು ರಣಜಿ ಟೀಮ್ ಅಲ್ಲ, ದೇಶಾದ್ಯಂತ ಅಭಿಮಾನಿಗಳನ್ನು ಹೊಂದಿದೆ. ಹಿಂದಿ ಸೇರಿದಂತೆ ಬೇರೆ ಭಾಷೆಗಳಲ್ಲಿ ಪೋಸ್ಟ್ ಮಾಡಿದರೆ ತಪ್ಪಲ್ಲ. ಕೆಎಂಎಫ್‌ನವರು ನಂದಿನಿ ಹಾಲಿನ ಬಗ್ಗೆ ದೆಹಲಿಯಲ್ಲಿ ಹಿಂದಿಯಲ್ಲಿ ಪೋಸ್ಟ್ ಮಾಡಿದರೆ ಇದಕ್ಕೆ ಆಕ್ಷೇಪಿಸ್ತೀರಾ ಎಂದು ವಾದಿಸುತ್ತಿದ್ದಾರೆ.

# ಭಾರತ ಕ್ರಿಕೆಟ್‌ಗೆ ವಿದಾಯ ಹೇಳಿದ ಟೀಂ ಇಂಡಿಯಾ ವೇಗಿ



ಸದ್ಯ ಟೀಂ ಇಂಡಿಯಾ ಆಸ್ಟ್ರೇಲಿಯಾ ವಿರುದ್ಧ 5 ಪಂದ್ಯಗಳ ಟೆಸ್ಟ್ ಸರಣಿಯನ್ನು ಆಡುತ್ತಿದೆ. ಈ ನಡುವೆ ಟೀಂ ಇಂಡಿಯಾ ವೇಗಿ ಸಿದ್ಧಾರ್ಥ್ ಕೌಲ್ ಭಾರತೀಯ ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ್ದಾರೆ. 2019ರಲ್ಲಿ ಟೀಂ ಇಂಡಿಯಾ ಪರ ಕೊನೆಯ ಅಂತಾರಾಷ್ಟ್ರೀಯ ಪಂದ್ಯವನ್ನು ಆಡಿದ್ದ ಸಿದ್ಧಾರ್ಥ್, ಅಂದಿನಿಂದ ಭಾರತ ತಂಡದಲ್ಲಿ ಸ್ಥಾನ ಪಡೆದಿರಲಿಲ್ಲ.

ಇದೀಗ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಅನ್ನು ಹಂಚಿಕೊಳ್ಳುವ ಮೂಲಕ ಸಿದ್ಧಾರ್ಥ್ ಕೌಲ್ ನಿವೃತ್ತಿ ಘೋಷಿಸಿದ್ದಾರೆ. ಸಿದ್ಧಾರ್ಥ್ ಟೀಂ ಇಂಡಿಯಾ ಪರ 3 ಏಕದಿನ ಮತ್ತು 3 ಟಿ20 ಪಂದ್ಯಗಳನ್ನು ಆಡಿದ್ದು, ಅವರು ಐಪಿಎಲ್‌ನಲ್ಲೂ ಆಡಿದ್ದಾರೆ.

ಸೋಶಿಯಲ್ ಮೀಡಿಯಾದಲ್ಲಿ ಪೋಸ್ಟ್ ಹಂಚಿಕೊಂಡಿರುವ ಸಿದ್ಧಾರ್ಥ್ ಕೌಲ್, 'ನಾನು ಬಾಲ್ಯದಲ್ಲಿ ಮತ್ತು ಪಂಜಾಬ್‌ನ ಮೈದಾನಗಳಲ್ಲಿ ಕ್ರಿಕೆಟ್ ಆಡುತ್ತಿದ್ದಾಗ ದೇಶವನ್ನು ಪ್ರತಿನಿಧಿಸುವ ಕನಸು ಕಂಡಿದ್ದೆ. ದೇವರ ದಯೆಯಿಂದ ಆ ಕನಸು 2018 ರಲ್ಲಿ ನನಸಾಯಿತು.

ಟಿ20 ತಂಡದಲ್ಲಿ ನನ್ನ ಕ್ಯಾಪ್ ಸಂಖ್ಯೆ 75 ಮತ್ತು ಏಕದಿನ ತಂಡದಲ್ಲಿ ನನ್ನ ಕ್ಯಾಪ್ ಸಂಖ್ಯೆ 221 ಆಗಿತ್ತು. ಈಗ ನಾನು ಭಾರತದಲ್ಲಿ ನನ್ನ ವೃತ್ತಿಜೀವನವನ್ನು ಕೊನೆಗೊಳಿಸುವ ಮತ್ತು ನನ್ನ ನಿವೃತ್ತಿಯನ್ನು ಘೋಷಿಸುವ ಸಮಯ ಬಂದಿದೆ ಎಂದು ಬರೆದುಕೊಂಡಿದ್ದಾರೆ.

ಸಿದ್ಧಾರ್ಥ್ ಕೌಲ್ 2018 ರಲ್ಲಿ ಐರ್ಲೆಂಡ್ ವಿರುದ್ಧ ತಮ್ಮ ಮೊದಲ ಅಂತಾರಾಷ್ಟ್ರೀಯ ಟಿ20 ಪಂದ್ಯವನ್ನು ಆಡಿದ್ದರು. ಇದರ ನಂತರ, ಅವರು ಅದೇ ವರ್ಷದಲ್ಲಿ ಇಂಗ್ಲೆಂಡ್ ವಿರುದ್ಧ ತಮ್ಮ ಮೊದಲ ಏಕದಿನ ಪಂದ್ಯವನ್ನು ಆಡಿದ್ದರು.

ಸಿದ್ಧಾರ್ಥ್ ಕೌಲ್ ತಮ್ಮ ಏಕದಿನ ವೃತ್ತಿಜೀವನದಲ್ಲಿ ಒಂದೇ ಒಂದು ವಿಕೆಟ್ ಪಡೆದಿಲ್ಲ. ಅದೇ ವೇಳೆ ಟಿ20ಯಲ್ಲಿ ಟೀಂ ಇಂಡಿಯಾ ಪರ 4 ವಿಕೆಟ್ ಕಬಳಿಸಿದ್ದಾರೆ. ಇದಲ್ಲದೆ, ಸಿದ್ಧಾರ್ಥ್ ಕೌಲ್ ಐಪಿಎಲ್‌ನಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್, ಡೆಲ್ಲಿ ಡೇರ್‌ಡೆವಿಲ್ಸ್, ಸನ್‌ರೈಸರ್ಸ್ ಹೈದರಾಬಾದ್ ಮತ್ತು ರಾಯಲ್ ಚಾಲೆಂಜರ್ಸ್ ಬೆಂಗಳೂರು ಮುಂತಾದ ಫ್ರಾಂಚೈಸಿಗಳ ಭಾಗವಾಗಿದ್ದಾರೆ. ಐಪಿಎಲ್‌ನಲ್ಲಿ 55 ಪಂದ್ಯಗಳನ್ನು ಆಡಿರುವ ಅವರು ಒಟ್ಟು 58 ವಿಕೆಟ್‌ಗಳನ್ನು ಕಬಳಿಸಿದ್ದಾರೆ.

ವಿರಾಟ್ ಕೊಹ್ಲಿ ನಾಯಕತ್ವದಲ್ಲಿ ಭಾರತ 2008 ರಲ್ಲಿ ಅಂಡರ್-19 ವಿಶ್ವಕಪ್ ಪ್ರಶಸ್ತಿಯನ್ನು ಗೆದ್ದುಕೊಂಡಿತ್ತು. ಆಗ ಸಿದ್ಧಾರ್ಥ್ ಕೌಲ್ ಕೂಡ ಆ ತಂಡದ ಭಾಗವಾಗಿದ್ದರು. ಇದಲ್ಲದೇ ವಿರಾಟ್ ಕೊಹ್ಲಿ ನಾಯಕತ್ವದಲ್ಲಿ ಸಿದ್ಧಾರ್ಥ್ ಕೌಲ್ ಸೀನಿಯರ್ ತಂಡಕ್ಕೆ ಪದಾರ್ಪಣೆ ಮಾಡಿದ್ದರು. ಇತ್ತೀಚೆಗೆ ಅವರು ರಣಜಿ ಟ್ರೋಫಿಯಲ್ಲೂ ಆಡಿದ್ದರು.

# ಉದ್ಯಮಿ ಜೀವಾ ಆತ್ಮಹತ್ಯೆ ಕೇಸ್

## ಡೆತ್‌ನೋಟ್ ಸಿಸಿಬಿಗೆ ಕಳುಹಿಸಲು ಸಿಸಿಬಿ ತಯಾರಿ




**ಬೆಂಗಳೂರು:** ಭೋವಿ ನಿಗಮದಲ್ಲಿ ನಡೆದ ಅಕ್ರಮ ತನಿಖೆ ಎದುರಿಸಿದ್ದ ವಕೀಲೆ ಜೀವಾ ಆತ್ಮಹತ್ಯೆ ಪ್ರಕರಣ ಸಂಬಂಧ ಸರ್ಕಾರಕ್ಕೆ ಹೈಕೋರ್ಟ್ ಚಾಟಿ ಬೀಸಿದ ಬೆನ್ನಲ್ಲೇ ಸಿಸಿಬಿ ಪೊಲೀಸರು ತನಿಖೆ ಚುರುಕುಗೊಳಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಘಟನೆ ಸಂಬಂಧ ಸಾಕ್ಷಿಗಳನ್ನು ಕಲೆಹಾಕಲು ಸಿಸಿಬಿ ವಿಶೇಷ ತನಿಖಾಧಿಕಾರಿಗಳ ತಂಡ ಮುಂದಾಗಿದೆ. ಜೀವಾ ತನಿಖೆ ಕರೆಯಲು ಕಾರಣ ಏನು? ಜೀವಾಗೆ ಸಂಬಂಧಿಸಿದ ಬ್ಯಾಂಕ್ ಖಾತೆಗೆ ಹಣ ವರ್ಗಾವಣೆ ಆಗಿದ್ಯಾ? ಎಷ್ಟು ಬಾರಿ ಪ್ರಕರಣಕ್ಕೆ ಸಂಬಂಧಪಟ್ಟಂತೆ ವಿಚಾರಣೆ ಎದುರಿಸಿದ್ದಾರೆ? ಎಂಬ ಆಯಾಮಗಳಲ್ಲಿ ತನಿಖೆ ನಡೆಸಲು, ಅಲ್ಲದೇ ಜೀವಾ ಅವರು ಬರೆದಿದ್ದ ಡೆತ್‌ನೋಟನ್ನ ವಿಧಿವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಲು ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಇದರೊಂದಿಗೆ ಸಿಸಿಬಿ ಡಿವೈಎಸ್ಪಿ ಕನಕಲಕ್ಷ್ಮಿ ಅವರಿಗೆ ನೋಟಿಸ್ ನೀಡಿ ವಿಚಾರಣೆಗೆ ಕರೆಸಲು ತಯಾರಿ ಮಾಡಿಕೊಳ್ಳಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.

**ಸರ್ಕಾರಕ್ಕೆ ಕೋರ್ಟ್ ಚಾಟಿ:** ಭೋವಿ ನಿಗಮದ ಅಕ್ರಮ ಪ್ರಕರಣದಲ್ಲಿ ಸಿಸಿಬಿ ಡಿವೈಎಸ್ಪಿ ಕನಕಲಕ್ಷ್ಮಿ ಕಿರುಕುಳ ನೀಡುತ್ತಿದ್ದಾರೆ ಎಂದು ಡೆತ್‌ನೋಟ್ ಬರೆದಿಟ್ಟು ವಕೀಲೆ, ಉದ್ಯಮಿ ಜೀವಾ ಆತ್ಮಹತ್ಯೆ ಮಾಡಿಕೊಂಡಿರುವ ಪ್ರಕರಣದಲ್ಲಿ ಇಲ್ಲಿಯವರೆಗೆ ಯಾಕೆ ಆರೋಪಿಯನ್ನು ಬಂಧಿಸಿಲ್ಲ ಎಂದು ಸರ್ಕಾರಕ್ಕೆ ಹೈಕೋರ್ಟ್ ಚಾಟಿ ಬೀಸಿತ್ತು.

ಪ್ರಕರಣದ ತನಿಖೆಯನ್ನು ಸಿಬಿಐಗೆ ವಹಿಸುವಂತೆ ಕೋರಿ ಬೆಂಗಳೂರು ವಕೀಲರ ಸಂಘ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ನಾಗಪ್ರಸನ್ನ ಅವರಿದ್ದ ಪೀಠ, ಸರ್ಕಾರ ಹಾಗೂ ಪೊಲೀಸ್ ಇಲಾಖೆಯನ್ನು ತರಾಟೆಗೆ ತೆಗೆದುಕೊಂಡಿತು. ಮೃತರು 13 ಪುಟಗಳ ಡೆತ್‌ನೋಟ್ ಬರೆದಿದ್ದಾರೆ. ಇಲ್ಲಿಯವರೆಗೆ ಆರೋಪಿಯನ್ನು ವಿಚಾರಣೆ ಮಾಡಿಲ್ಲ, ಅರೆಸ್ಟ್ ಮಾಡಿಲ್ಲ. ಡಿವೈಎಸ್‌ಪಿ ಎಂಬ ಕಾರಣಕ್ಕೆ ವಿಚಾರಣೆ ಮಾಡುತ್ತಿಲ್ಲವೇ ಎಂದು ಪ್ರಶ್ನಿಸಿ ಕ್ಲಾಸ್ ತೆಗೆದುಕೊಂಡಿತ್ತು.

ರಾಜ್ಯ ಸರ್ಕಾರ ಯಾವುದೇ ಕ್ರಮ ತೆಗೆದುಕೊಳ್ಳದೇ ಇದ್ದರೆ ಈ ಪ್ರಕರಣವನ್ನು ಸಿಬಿಐಗೆ ವರ್ಗಾಯಿಸುತ್ತೇನೆ ಎಂದು ಹೇಳಿ ಗರಂ ಆಗಿದೆ. ಇದಕ್ಕೆ ಎಲ್ಲಾ ಪ್ರಕರಣದಲ್ಲಿ ಆರೋಪಿಗಳನ್ನು ಅರೆಸ್ಟ್ ಮಾಡುವುದಿಲ್ಲ. ಈ ಪ್ರಕರಣವನ್ನು ಸಿಸಿಬಿಗೆ ನೀಡಲಾಗಿದೆ ಎಂದು ಸರ್ಕಾರದ ಪರ ವಕೀಲ ಜಗದೀಶ್ ಉತ್ತರಿಸಿದರು. ಡಿವೈಎಸ್‌ಪಿ ಕನಕಲಕ್ಷ್ಮಿ ಪರ ವಾದ ಮಂಡಿಸಿದ ವಕೀಲರು, ನಮ್ಮ ಕಕ್ಷಿದಾರರು ಯಾವುದೇ ಕಿರುಕುಳ ನೀಡಿಲ್ಲ. ತನಿಖೆ ನಡೆದು ಸತ್ಯಾಸತ್ಯತೆ ಬರಲಿ. ಕನಕಲಕ್ಷ್ಮಿ ಲಾಟರಿ ಹಗರಣದಲ್ಲಿದ್ದರು ಎಂದು ಇವರು ಆರೋಪ ಮಾಡುವುದು ಸರಿಯಲ್ಲ ಎಂದು ವಾದಿಸಿದರು. ವಾದ-ಪ್ರತಿವಾದ ಆಲಿಸಿದ ಕೋರ್ಟ್ ಆದೇಶವನ್ನು ನವೆಂಬರ್ 29ಕ್ಕೆ ಕಾಯ್ದಿರಿಸಿದೆ.

**ಏನಿದು ಪ್ರಕರಣ?:** ಭೋವಿ ನಿಗಮ ಅಕ್ರಮ ಸಂಬಂಧ ಜೀವಾರನ್ನು ಸಿಐಡಿ ವಿಚಾರಣೆಗೆ ಒಳಪಡಿಸಿತ್ತು. ಆದರೆ ಕಿರುಕುಳದ ಆರೋಪ ಮಾಡಿ ಜೀವಾ ಆತ್ಮಹತ್ಯೆ ಮಾಡಿಕೊಂಡಿದ್ದರು. ಭೋವಿ ನಿಗಮದಲ್ಲಿ ಒಟ್ಟು 34 ಕೋಟಿ ರೂ. ಅಕ್ರಮ ಹಣ ವರ್ಗಾವಣೆಯಾಗಿದೆ. ಇದರಲ್ಲಿ ಜೀವಾ ಮಾಲೀಕತ್ವದ ಸಂಸ್ಥೆ ಅನ್ನಿಕಾ ಎಂಟರ್ ಪ್ರೆಸಸ್‌ಗೆ 7.16 ಕೋಟಿ ರೂ., ಅವರ ಸಹೋದರಿ ಹೆಸರಲ್ಲಿರುವ ಹರ್ನಿತಾ ಕ್ರಿಯೇಷನ್ಸ್‌ಗೆ 3.79 ಕೋಟಿ ರೂ. ವರ್ಗಾವಣೆ ಆಗಿತ್ತು. ಇನ್ನುಳಿದ ಹಣ ಮಾಜಿ ಎಂಡಿಗಳ ಆಪ್ತರ ಪಾಲುದಾರಿಕೆಯ ಸಂಸ್ಥೆಗಳಿಗೆ ವರ್ಗವಾಗಿತ್ತು. ಈ ಪ್ರಕರಣದ ಬಗ್ಗೆ ಆಂತರಿಕ ತನಿಖೆ ನಡೆಸಲು ಗೃಹ ಇಲಾಖೆ ಮುಂದಾಗಿದೆ.

# ಪಕ್ಷದಲ್ಲಿ ಎರೆಹುಳುಗಳು ನಾಗರಹಾವುಗಳಾಗುತ್ತಿದ್ದಾರೆ



**ಬೆಂಗಳೂರು:** ಕಾಂಗ್ರೆಸ್‌ನವರು ಚಿನ್ನದ ಬಟ್ಟಲುಗಳಿಂದ ವಿಷಯಗಳನ್ನು ಕೊಡುತ್ತಿದ್ದರೂ ನಮ್ಮವರು ತೆಗೆದುಕೊಳ್ಳಲು ಆಗುತ್ತಿಲ್ಲ. ಪಕ್ಷದಲ್ಲಿ ಎರೆಹುಳುಗಳು ನಾಗರಹಾವುಗಳಾಗುತ್ತಿದ್ದಾರೆ ಎಂದು ಮಾಜಿ ಕೇಂದ್ರ ಸಚಿವ ಡಿವಿ ಸದಾನಂದ ಗೌಡ ವಾಗ್ದಾಳಿ ನಡೆಸಿದ್ದಾರೆ.

ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಬಿಜೆಪಿಯಲ್ಲಿ ಆಂತರಿಕ ಜಗಳವೇ ಆಯ್ತು. ಇವರಿಂದ ಸರ್ಕಾರವನ್ನು ಏನು ಮಾಡಲು ಸಾಧ್ಯವಿಲ್ಲ ಎಂದು ಜನರು ಮಾತನಾಡುತ್ತಿದ್ದಾರೆ. ಇಗೋ ಸಮಸ್ಯೆಯಿಂದ ಬಿಜೆಪಿಗೆ ದೊಡ್ಡ ಹಾನಿಯಾಗುತ್ತಿದೆ. ಇಷ್ಟೆಲ್ಲಾ ಪಕ್ಷದಲ್ಲಿ ಆಗುತ್ತಿರುವ ರಾದ್ಧಾಂತವನ್ನು ಸಹಿಸಿಕೊಳ್ಳಲು ಆಗುತ್ತಿಲ್ಲ ಎಂದು ಕಿಡಿಕಾರಿದರು.

ಇನ್ನೊಮ್ಮೆ ನಾನು ದೆಹಲಿಗೆ ಹೋಗುವ ನಿರ್ಧಾರ ಮಾಡಿದ್ದೇನೆ. ಡಿಸೆಂಬರ್ 3 ರಂದು ಕೋರ್ ಕಮಿಟಿ ಸಭೆ ಇದೆ. ಅಲ್ಲಿ ಇದರ ಬಗ್ಗೆ ಚರ್ಚಿಸಿ ಇದಕ್ಕೆಲ್ಲ ಬ್ರೇಕ್ ಹಾಕುವಂತೆ ಹೈಕಮಾಂಡ್‌ಗೆ ಒತ್ತಾಯ ಮಾಡುತ್ತೇವೆ ಎಂದು ತಿಳಿಸಿದರು.

ಕರ್ನಾಟಕ ಬಿಜೆಪಿ ಬಗ್ಗೆ ನಾನು ವರಿಷ್ಠರಿಗೆ ಎರಡು ಪತ್ರ ಬರೆದಿದ್ದೇನೆ. ನಾನು ಅಧ್ಯಕ್ಷ ಇದ್ದಾಗಲೂ ಇದಕ್ಕಿಂತ ದೊಡ್ಡ ಗುಂಪುಗಳಿದ್ದವು. ಪಕ್ಷದ ಕಟ್ಟಿದ್ದು ನಾವು ಅಂತ ಅನಂತ್ ಕುಮಾರ್ ಹಾಗೂ ಯಡಿಯೂರಪ್ಪ ಗುಂಪು ಪ್ರಬಲವಾಗಿ ಸೆಣಸಾಡುತ್ತಿದ್ದವು. ಆದರೆ ಅನಂತ್ ಕುಮಾರ್ ಹಾಗೂ ಯಡಿಯೂರಪ್ಪ ಗುಂಪು ಯಾವತ್ತೂ ಬೀದಿಗೆ ಇಳಿದಿರಲ್ಲ ಎಂದರು.

ನೀವು ಇಲ್ಲಿ ಬೀದಿಗೆ ಹೋಗುವ ಬದಲು ದೆಹಲಿಗೆ ವಿಮಾನ ಹತ್ತಿ ಹೋಗಿ. ದೆಹಲಿಯಲ್ಲಿ ನಮ್ಮ ಅದ್ಭುತ ನಾಯಕರು ಇದ್ದಾರೆ. ದೆಹಲಿಗೆ ಹೋಗಿ ಪಕ್ಷದ ವಿಚಾರ ಹೇಳಿ ಸರಿಪಡಿಸಿಕೊಳ್ಳಿ. ಇಲ್ಲದಿದ್ದರೆ ನೀವೆಲ್ಲ ಪಕ್ಷದ ನಿಷ್ಠಾವಂತ ಕಾರ್ಯಕರ್ತರು ಎಂದು ಕರೆಸಿಕೊಳ್ಳಲು ನಾಲಾಯಕ್ ಎಂದು ವಿಜಯೇಂದ್ರ, ಯತ್ನಾಳ್ ತಂಡಕ್ಕೆ ಡಿವಿಎಸ್ ಕಿವಿಮಾತು ಹೇಳಿದರು.

ನಾವು ಹಿರಿಯರು ಸೇರಿಕೊಂಡು ಒಂದು ಸಭೆ ಕರೆಯಬೇಕು. ಎರಡೂ ಗುಂಪುಗಳನ್ನು ಕರೆದು ಮಾತಾಡಬೇಕು ಅಂತ ನಮ್ಮ ಮನಸ್ಸಿನಲ್ಲಿತ್ತು. ಆದರೆ ಅವರು ಯಾವಾಗ ಬೀದಿಗೆ ಇಳಿದರೋ ಆಗ ಇದು ನಮ್ಮ ಕೈಯಲ್ಲಿ ಆಗದ ಕೆಲಸ ಅಂತ ಗೊತ್ತಾಯ್ತು. ಬಿಜೆಪಿ ಭಿನ್ನಮತ ರಾಜ್ಯದ ಹಿರಿಯರ ಕೈಮೀರಿ ಹೋಗಿದೆ ಎಂದು ತಿಳಿಸಿದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com